# ಒಂದನೇ ಪುಟದಿಂದ

## ವಹಿಸಿ- ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ

ಇಲಾಖೆ, ಮಕ್ಕಳ ಹಕ್ಕುಗಳ ರಕ್ಷಣಾ ಘಟಕ, ಕಾರ್ಮಿಕ ಇಲಾಖೆ, ಹತ್ತಿರದ ಗ್ರಾಮ ಪಂಚಾಯಿತ ಹಾಗೂ ಸಕ್ಕರೆ ಕಾರ್ಖಾನೆ ಮಾಲೀಕರು ಸಹಯೋಗದೊಂದಿಗೆಶಿಕ್ಷಣಮತ್ತುಮೂಲಭೂತಸೌಕರ್ಯಒದಗಿಸುವ ಕಾರ್ಯ ಮಾಡಬೇಕು ಎಂದರು.

ಹೊರರಾಜ್ಯಗಳಿಂದಕಾರ್ಮಿಕರನ್ನುಕರೆತರುವಗುತ್ತಿಗೆದಾರರುಮತ್ತು ವಲಸೆಕಾರ್ಮಿಕರುಕಡ್ಡಾಯವಾಗಿ ನೊಂದಣಿ ಆಗಬೇಕು. ಇದರಿಂದಾಗಿ ವಲಸೆಬರುವಕಾರ್ಮಿಕರಿಗೆಅಗತ್ಯವಿರುವಮೂಲಭೂತಸೌಕರ್ಯಗಳನ್ನು ಒದಗಿಸಬಹುದು ಮತ್ತು ಅವರ ಮಕ್ಕಳಿ ಅಂಗನವಾಡಿ ಕೇಂದ್ರ ಮತ್ತು ಹತ್ತಿರ ಶಾಲೆಗಳಲ್ಲಿ ಶಿಕ್ಷಣ ನೀಡುವ ವ್ಯವಸ್ಥೆ ಮಾಡಲಾಗುವುದು ಹಾಗೂ ಮಹಿಳಾ ಕಾರ್ಮಿಕರು ಕಾರ್ಯ ನಿರ್ವಹಿಸುತ್ತಿರುವ ಕಾರ್ಖಾನೆಗಳಲ್ಲಿ ಮಕ್ಕಳ ಆರೈಕೆ ಕೇಂದ್ರ ಸ್ಥಾಪಿಸಬೇಕು ಎಂದರು.

ಬೀದರಜಿಲ್ಲೆಯನ್ನುಬಾಲ್ಯವಿವಾಹಮುಕ್ತಜಿಲ್ಲೆಯಾಗಲುಎಲ್ಲಾಇಲಾಖೆಗಳ ಸಹಭಾಗಿತ್ವ ಬಹಳ ಮುಖ್ಯವಾಗಿದೆ. ಇಲಾಖೆಯ ಅಧಿಕಾರಿಗಳು ಕೂಡ ಎಲ್ಲೆಬಾಲ್ಯವಿವಾಹಕಂಡು ಬಂದಲ್ಲಿ ತಕ್ಷಣ ಸಂಬಂಧಪಟ್ಟವರಿಗೆ ಮಾಹಿತಿ ನೀಡಿ, ಬಾಲ್ಯವಿವಾಹತಡೆಗಟ್ಟುವ ಕಾರ್ಯಗಳು ಮಾಡಬೇಕು ಎಂದರು.

ಜಿಲ್ಲೆಯ ಎಲ್ಲಾ ಜಿಲ್ಲಾ, ತಾಲ್ಲೂಕು, ಹೋಬಳಿ, ಗ್ರಾಮ ಪಂಚಾಯಿತಿ ಮತ್ತು ಗ್ರಾಮಮಟ್ಟದಸರ್ಕಾರಿಕಛೇರಿ, ಅರೆಸರ್ಕಾರಿ, ಶೈಕ್ಷಣಿಕಸಂಸ್ಥೆಗಳು, ಖಾಸಗಿ ಸ್ವಯಂ ಸೇವಾ ಸಂಸ್ಥೆಗಳು ಸೇರಿದಂತೆ ಎಲ್ಲಾ ಕಟ್ಟಡಗಳ ಮೇಲೆ ಮಕ್ಕಳಸಹಾಯವಾಣಿ1098 ನಾಮಫಲಕ ಅಳವಡಿಕೆ ಕಡ್ಡಾಯವಾಗಿದ್ದು, ಈ ಬಗ್ಗೆ ಕ್ರಮ ವಹಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಶ್ರೀಧರಎಂ.ಎಸ್., ಗ್ರಾಮೀಣಶಿಕ್ಷಣಮತ್ತುಆರೋಗ್ಯಸಂಸ್ಥೆ (ಆರ್‌ಎಲ್‌ಎಚ್‌ಪಿ) ಮೈಸೂರುಹಾಗೂರಾಜ್ಯಸಂಚಾಲಕರುಬಾಲಕಾರ್ಮಿಕ ಪದ್ಧತಿ ವಿರೋಧಿ ಆಂದೋಲನ, ಕರ್ನಾಟಕ ನಿರ್ದೇಶಕರಾದ ಸರಸ್ವತಿ, ಬಾಲಕಾರ್ಮಿಕ ಪದ್ಧತಿ ವಿರೋಧಿ ಆಂದೋಲನ, ರಾಜ್ಯ ಸಂಯೋಜಕ ಸಂಪತ್‌ಕಟ್ಟಿ, ಜಿಲ್ಲಾಮಕ್ಕಳರಕ್ಷಣಾಧಿಕಾರಿ ರೂಪಾಕೋಟೆಗೌಡರ, ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಸೀಮಪ್ಪಾ, ಮರಾಠವಾಡ ಗ್ರಾಮೀಣ ವಿಕಾಸ ಸಂಸ್ಥೆಯಯೋಜನಾವ್ಯವಸ್ಥಾಪಕ ಅಶ್ವಜಿತ್ ಜಾಧವ್, ಮೌಲ್ಯಮಾಪಕರು ಅನುಪ್ ಮೋರೆ, ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಬಿಹಾರ ಜನರ ದುರಾದೃಷ್ಟ- ರಾಮಲಿಂಗಾ ರೆಡ್ಡಿ

2028ರಲ್ಲೂ ಕಾಂಗ್ರೆಸ್ ಪಕ್ಷವೇ ಅಧಿಕಾರಕ್ಕೆ

ಇನ್ನೂ ಕಾಂಗ್ರೆಸ್ ಸರ್ವನಾಶ ಆಗುತ್ತೆ ಎಂಬ ಮಾಜಿ ಸಚಿವ ರಾಜಣ್ಣ ಹೇಳಿಕೆಗೆವಿಧಾನಸೌಧದಲ್ಲಿಪ್ರತಿಕ್ರಿಯೆನೀಡಿದಅವರು, ಸಿದ್ದರಾಮಯ್ಯ, ಡಿಕೆ ಶಿವಕುಮಾರ್ ನೇತೃತ್ವದಲ್ಲಿ 2028ರಲ್ಲೂ ಕಾಂಗ್ರೆಸ್ ಪಕ್ಷವೇ (ಅಟಿಡಿ ಚಿಡಿಣಥಿ) ಅಧಿಕಾರಕ್ಕೆ ಬರುತ್ತದೆ ಎಂದು ನುಡಿದರು.

ನಾವುಅಭಿವೃದ್ಧಿಕೆಲಸಮಾಡಿದ್ದೇವೆ, ಅದುನಮಗೆ ಶ್ರೀರಕ್ಷೆ. ಬಿಜೆಪಿ-ಜೆಡಿಎಸ್ ವಿಪಕ್ಷದಲ್ಲಿನಾಯಕತ್ವ ಕೊರತೆ ಇದೆ. ಬಿಜೆಪಿ ಸೊರಗಿ ಹೋಗ್ತಿದೆ. ಬಿಜೆಪಿಗೆ ಈಗ ಇರೋ ಸ್ಥಾನವೂ ಮುಂದಿನ ಚುನಾವಣೆಯಲ್ಲಿ ಬರೊಲ್ಲ. ನಮ್ಮ ಪಕ್ಷ 136 ಸ್ಥಾನಕ್ಕಿಂತ ಜಾಸ್ತಿ ಸ್ಥಾನ ಬರ್ತೀವಿ ಎಂದರು. ಇದೇ ವೇಳೆ 2028ಕ್ಕೆ ರಾಮಲಿಂಗಾರೆಡ್ಡಿಸಿಎಂಸ್ಥಾನದಆಕಾಂಕ್ಷಿ ಆಗ್ತಾರಾ ಎಂಬಪ್ರಶ್ನೆಗೆಉತ್ತರಿಸಿ, ನಾನು ನಾನು ಯಾವತ್ತೂ ಸಿಎಂ ಆಗೊಲ್ಲ ಎಂದರು.

ನವೆಂಬರ್ ಕ್ರಾಂತಿ ವಿಚಾರವಾಗಿ ಪ್ರತಿಕ್ರಿಯೆ ನೀಡಿದ ಅವರು, ಯಾವ ಕ್ರಾಂತಿಯೂ ಇಲ್ಲ ಏನೂ ಇಲ್ಲ. ಬಿಜೆಪಿ ಅವರು ಸುಳ್ಳು ಮಾಹಿತಿ ಕೊಡ್ತಾರೆ. ನೀವುತೋರಿಸ್ತೀರಾ ಅದಕ್ಕೆ ಬಿಜೆಪಿಅವರುಮಾತಾಡ್ತಾರೆ. ಯಾವಕ್ರಾಂತಿಯೂ ಇಲ್ಲ ಅಂತ ಕುಟುಕಿದರು.

ರಾಜು ಕಾಗೆ ಪ್ರತ್ಯೇಕ ರಾಜ್ಯ ಕೇಳೋದು ತಪ್ಪು

ಇದೇ ವೇಳೆ ಶಾಸಕ ರಾಜು ಕಾಗೆ ಪ್ರತ್ಯೇಕ ರಾಜ್ಯ ಹೇಳಿಕೆ ವಿಚಾರಕ್ಕೆ ಪ್ರತಿಕ್ರಿಯಿಸಿ, ಶಾಸಕ ರಾಜುಕಾಗೆ ಅವರು ಪ್ರತ್ಯೇಕ ಉತ್ತರ ರಾಜ್ಯದ ಬೇಕು ಅನ್ನೋದು ತಪ್ಪು. 1956 ರಲ್ಲಿ ನಮ್ಮ ರಾಜ್ಯ ಉದಯ ಆಯ್ತು. 78 ವರ್ಷಗಳಲ್ಲಿ ಉತ್ತರ ಕರ್ನಾಟಕ ಸಾಕಷ್ಟು ಅಭಿವೃದ್ಧಿ ಆಗಿದೆ. ರಾಜು ಕಾಗೆ ಅವರಿಗೆ ಇನ್ನು ಅಭಿವೃದ್ಧಿ ಆಗಬೇಕು ಅಂತ ಇರಬೇಕು. ಕಾಂಗ್ರೆಸ್ ಉತ್ತರ ಕರ್ನಾಟಕಕ್ಕೆ ಸಾಕಷ್ಟು ಅಭಿವೃದ್ಧಿ ಮಾಡಿದೆ. ಕರ್ನಾಟಕವನ್ನ ಎರಡು ಮಾಡಬೇಕು ಅನ್ನೋದು ತಪ್ಪು. ಬೇರೆ ರಾಜ್ಯ ಮಾಡೋ ಬಗ್ಗೆ ಮಾತಾಡೋದು ಸೂಕ್ತ ಅಲ್ಲ ಅಂತ ತಿಳಿವಳಿಕೆ ಹೇಳಿದರು.

ಅಭಿವೃದ್ಧಿ ಮಾಡಬೇಕು ಅಂತ ಕೇಳಲಿ ತಪ್ಪಲ್ಲ. ಆದರೆ ಪ್ರತ್ಯೇಕ ರಾಜ್ಯ ಕೇಳೋದು ತಪ್ಪು. ಉತ್ತರ ಕರ್ನಾಟಕ ಎಲ್ಲಾ ಸರ್ಕಾರದಲ್ಲೂ ಅಭಿವೃದ್ಧಿ ಆಗಿದೆ. ಹೆಚ್ಚು ಅನುದಾನ ಕೇಳೋದು ತಪ್ಪಲ್ಲ. ಸರ್ಕಾರ ಅದಕ್ಕೆ ಸ್ಪಂದನೆ ನೀಡಬೇಕು ಅಂತ ತಿಳಿಸಿದರು.

## ಮಲ್ಲಿಕಾರ್ಜುನ ಪಾಟೀಲ್ ಆಗ್ರಹ

ರೈತರಿಗೆ ಅನ್ಯಾಯವಾಗಿದೆ, ರೈತರಿಗೆ 3300 ರೂಪಾಯಿ ಕಡ್ಡಾಯವಾಗಿ ನೀಡಬೇಕೆಂದು ಮಲ್ಲಿಕಾರ್ಜುನ ಪಾಟೀಲ್ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ. ಬೀದರ್ ಜಿಲ್ಲೆಯಲ್ಲಿ ಸರ್ಕಾರ ನಿಗದಿ ಪಡಿಸಿದ ರಿಕವರಿ ಏಕೆ ಬರುತ್ತಿಲ್ಲ ಎಂದು ರೈತರ ಹೊಲಗಳಿಗೆ ಹೋಗಿ ಪರಿಶೀಲಿಸಬೇಕು ಎಂದುಒತ್ತಾಯಿಸಿದ್ದಾರೆ. ಶೀಘ್ರದಲ್ಲೇ ಸರ್ಕಾರನಿಗದಿಪಡಿಸಿದಬೆಲೆಯನ್ನೆ ಕಾರ್ಖಾನೆ ಮಾಲೀಕರು, ಹಾಗೂ ಸಹಕಾರ ಸಂಘಗಳ ಅಧ್ಯಕ್ಷರುಗಳು ನಿಗದಿ ಪಡಿಸಿದ ಬೆಳೆಯನ್ನೇ ನೀಡಬೇಕೆಂದು ಮಲ್ಲಿಕಾರ್ಜುನ ಪಾಟೀಲ್ ಆಗ್ರಹಿಸಿದ್ದಾರೆ. ಅದೇ ತರಹ ಬೀದರ್ ಜಿಲ್ಲೆಯಲ್ಲಿ ಅತಿವೃಷ್ಟಿಯಿಂದ ಬೆಳೆ ಹಾನಿಯಾದಪರಿಹಾರವನ್ನುಶೀಘ್ರದಲ್ಲೇನೀಡಬೇಕುಎಂದುತಿಳಿಸಿದ್ದಾರೆ. ಈಸಂದರ್ಭದಲ್ಲಿರವಿಶಿವಪೂಜಿ, ಇಸ್ಮಾಯಿಲ್ ಲಾಥೋಡಿ, ಪರಮೇಶ್ವರ್ ಬಬಡಿ ಪತ್ರಿಕಾ ಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಮೇಕೆದಾಟು: ತ.ನಾಡು ಅರ್ಜಿ ವಜಾ

ಅನುಮತಿಯ ವಿರುದ್ಧ ತಮಿಳುನಾಡು ದಾಖಲಿಸಿದ್ದ ಅರ್ಜಿಯು ಅಕಾಲಿಕ ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಮುಖ್ಯ ನ್ಯಾಯಮೂರ್ತಿ ಬಿ. ಆರ್. ಗವಾಯಿ, ನ್ಯಾಯಮೂರ್ತಿ ಕೆ. ವಿನೋದ್ ಚಂದ್ರನ್ ಮತ್ತು ನ್ಯಾಯಮೂರ್ತಿ ಎನ್. ವಿ. ಅಂಜಾರಿಯಾ ಅವರನ್ನು ಒಳಗೊಂಡ ತ್ರಿ ಸದಸ್ಯ ಪೀಠ ನೀಡಿದೆ. ತಮಿಳುನಾಡಿನ ಆಕ್ಷೇಪಗಳು ಮತ್ತು ಕಾವೇರಿ ನೀರು ನಿರ್ವಹಣಾ ಅಧಿಕಾರ ಮತ್ತು ಕಾವೇರಿ ನೀರು ನಿಯಂತ್ರಣ ಸಮಿತಿ ಸಲಹೆಗಳನ್ನು ಪರಿಗಣಿಸಿ ತಯಾರಿಕೆಗೆ ಕೇಂದ್ರ ಜಲ ಆಯೋಗ ಅನುಮತಿ ನೀಡಿದೆ ಎಂದು ಕೋರ್ಟ್ ಗಮನಿಸಿದ್ದೇವೆ. **ತಮಿಳುನಾಡಿನ ವಾದ:**

ತಮಿಳುನಾಡಿನಪರವಕೀಲಮುಕುಲ್ ರೋಹತ್ಗಿ, ಮೇಕಡಾಟುಯೋಜನೆಯಿಂದ ಕಾವೇರಿಯನ್ನುಅವಲಂಬಿಸಿರುವತಮಿಳುನಾಡಿನರೈತರಿಗೆಹಾನಿಉಂಟಾಗಬಹುದು ಎಂದು ವಾದಿಸಿದ್ದರು. ಬಿಳಿಗುಂಡ್ಲು ಅಳತೆ ಕೇಂದ್ರಕ್ಕಿಂತ ಮೇಲಿನ ಪ್ರದೇಶದಲ್ಲಿ ಜಲಾಶಯ ನಿರ್ಮಾಣವಾದರೆ, ತಮಿಳುನಾಡಿಗೆ ನೀರು ಬಿಡುಗಡೆ ಮಾಡುವುದು ಪ್ರತಿಕೂಲವಾಗುತ್ತದೆ ಎಂದು ಅವರು ತಿಳಿಸಿದ್ದರು.

**ಕರ್ನಾಟಕದ ವಾದ**

ಕರ್ನಾಟಕದ ಪರ ವಕೀಲ ಶ್ಯಾಮ್ ದಿವಾನ್, ತಮಿಳುನಾಡಿನ ಅರ್ಜಿ ತಪ್ಪು ತಿಳುವಳಿಕೆಯ ಅರ್ಜಿ ಎಂದು ವಾದಿಸಿದ್ದರು. ಸುಪ್ರೀಂ ಕೋರ್ಟ್ ಆದೇಶದ ಪ್ರಕಾರ ತಮಿಳುನಾಡಿಗೆ 177.25 ಟಿಎಂಸಿ ನೀರು ಬಿಡುಗಡೆ ಮಾಡುವ ಕರ್ನಾಟಕದ ಕರ್ತವ್ಯ ನಿರ್ವಹಣೆಯಾಗದಿದ್ದರೆ, ಅಗತ್ಯ ಅನುಮತಿ ಪಡೆದ ನಂತರ ಜಲಾಶಯ ಯೋಜನೆ ಮುಂದುವರೆಸಲು ಅವಕಾಶ ಇರಬೇಕು ಎಂದು ವಾದಿಸಿದ್ದರು. ಕಾವೇರಿ ನೀರು ಹಂಚಿಕೆ ತೀರ್ಪು ವಿರುದ್ಧ ತಮಿಳುನಾಡು 2007 ರಲ್ಲಿ ದಾಖಲಿಸಿದ್ದ ಮೇಲ್ಮನವಿಯಲ್ಲಿ ಈ ಅರ್ಜಿಯನ್ನು 'ವಿವಿಧ ಅರ್ಜಿ' ಆಗಿ ದಾಖಲಿಸಲಾಗಿತ್ತು. 2018 ರಲ್ಲಿ ಕಾವೇರಿ ನೀರು ನಿರ್ವಹಣಾಯೋಜನೆಯಡಿಯಲ್ಲಿಸಿಡಬ್ಲ್ಯೂಎಂಎ ಮತ್ತು ಸಿಡಬ್ಲ್ಯೂಆರ್ ಅನ್ನು ರಚಿಸಲಾಗಿದೆ.

ರಾಜ್ಯಕ್ಕೆ ನ್ಯಾಯಸಿಕ್ಕಿದೆ: ಡಿಕೆಶಿ

ಮೇಕೆದಾಟುಯೋಜನೆಗೆಸಂಬಂಧಿಸಿದಸುಪ್ರೀಂಕೋರ್ಟ್‌ನತೀರ್ಪು ಕರ್ನಾಟಕಕ್ಕೆ ಯಾವುದೇಹಿನ್ನಡೆಯಲ್ಲ, ಬದಲಿಗೆರಾಜ್ಯಕ್ಕೆನ್ಯಾಯಸಿಕ್ಕಿದೆಎಂದುಉಪಮುಖ್ಯಮಂತ್ರಿ ಮತ್ತು ಜಲಸಂಪನ್ಮೂಲ ಸಚಿವ ಡಿ.ಕೆ. ಶಿವಕುಮಾರ್ ತಿಳಿಸಿದರು. ಬೆಂಗಳೂರಿನಲ್ಲಿಂದು ಸುಪ್ರೀಂಕೋರ್ಟ್ ತೀರ್ಪಿಗೆಪ್ರತಿಕ್ರಿಯೆನೀಡಿದ ಅವರು ಮೇಕೆದಾಟು ಕರ್ನಾಟಕದ ಮಹತ್ವದಯೋಜನೆ ಇದು ನಮ್ಮ ಹಕ್ಕುಮತ್ತು ನಮ್ಮ ನೀರು ನಾವು ಯಾರಿಗೂ ಅಡ್ಡಿ ಮಾಡುತ್ತಿಲ್ಲ, ತಮಿಳುನಾಡಿಗೆ ಲಾಭ ಆಗಲಿದೆ. ಕೋರ್ಟ್ ಆದೇಶದ ಪ್ರಕಾರ ಅವರಿಗೆ ಸಾಕಷ್ಟು ನೀರು ಸಿಗಲಿದೆ.

# ರಾಷ್ಟ್ರೀಯ ವರ್ಧಾಪನಾ ದಿನಾಚರಣೆ: ವಾಸರೆ



ಬೀದರ್. ನ. 13 :– ಈ ತಿಂಗಳ 16ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಡಾ ಚನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಸಂಬಾಜಿ ಬ್ರಿಗೇಡ್ ಸಂಘಟನೆಯ 10ನೇ ರಾಷ್ಟ್ರೀಯ ವರ್ಧಾಪನಾ ದಿನಾಚರಣೆ ಹಮ್ಮಿಕೊಳ್ಳಲಾಗುವುದು ಎಂದು ಸಂಘಟನೆಯ ಜಿಲ್ಲಾಧ್ಯಕ್ಷ ಸತೀಶ ವಾಸರೆ ತಿಳಿಸಿದರು.

ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಗುರುವಾರ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಇಲ್ಲಿಯ ವರೆಗೆ 9 ವರ್ಧಾಪನಾ ದಿನಾಚರಣೆಗಳು ಮಹಾರಾಷ್ಟ್ರ ಸೇರಿದಂತೆ ಇತರೆ ರಾಜ್ಯಗಳಲ್ಲಿ ಆಯೋಜಿಸಲಾಗಿದ್ದು, ಕರ್ನಾಟಕದಲ್ಲಿ ಇದೇ ಮೊಟ್ಟಮೊದಲನೇ ಬಾರಿಗೆ 10ನೇ ರಾಷ್ಟ್ರೀಯ ವರ್ಧಾಪನಾ ದಿನಾಚರಣೆ ಆಯೋಜಿಸಲಾಗುತ್ತಿದೆ ಎಂದರು. ಸಮಾನತೆ, ಸ್ವಾಭಿಮಾನ ಮತ್ತು ಸಾಮಾಜಿಕ ಜಾಗೃತಿಗೆ ಬದ್ಧವಾಗಿ ಕಾರ್ಯನಿರ್ವಹಿಸುತ್ತಿರುವ ಸಂಭಾಜಿ ಬ್ರಿಗೇಡ್ ಸಂಘಟನೆಯು ಛತ್ರಪತಿ ಶಿವಾಜಿ ಮಹಾರಾಜ, ಶಾಹು ಮಹಾರಾಜ, ಡಾ.ಬಾಬಾ ಸಾಬೇಬ್ ಅಂಬೇಡ್ಕರ್, ಮಹಾತ್ಮ ಜ್ಯೋತಿಬಾ ಫುಲೆ ಹಾಗೂ ಮಹಾತ್ಮಾ ಬಸವೇಶ್ವರ ಅವರ ವಿಚಾರ ಧಾರೆಯನ್ನು ಇರಿಸಿಕೊಂಡು ಮುನ್ನಡೆಯುತ್ತಿದೆ. ದೇಶಸ್ವತಂತ್ರಗೊಂಡು 75 ವರ್ಷಗಳು ಗತಿಸಿದರೂ ಜನ ಸಾಮಾನ್ಯರಿಗೆ ಸಂಪೂರ್ಣ ಪ್ರಜಾಪ್ರಭುತ್ವ ದೊರೆತಿರುವುದಿಲ್ಲ. ಸಾಮಾಜಿಕ, ಕೃಷಿಕ, ಶೈಕ್ಷಣಿಕ, ಧಾರ್ಮಿಕ ಕ್ಷೇತ್ರಗಳಲ್ಲಿ ಇನ್ನೂ ಸಹ ಏಕ ಚಕ್ರಾಧಿಪತ್ಯ ಹಾಗೂ ವಂಶಪರೆಂಪರೆ ಅಡಳಿತ ಮುಂದುವರೆದಿದೆ. ಇದನ್ನು ಹತ್ತಿಕ್ಕಲು ಹಾಗೂ ಜನ ಸಾಮಾನ್ಯನ ಕೈಗೆ ಪ್ರಜಾತಂತ್ರ ದೊರೆಯುವಂತಾಗಲು ಸಂಬಾಜಿ ಬ್ರಿಗೇಡ್ ಹತ್ತು ಹಲವು ಮಹತ್ತರ ಕಾರ್ಯ ಮಾಡುತ್ತಿದೆ ಎಂದರು.

ಕಾರ್ಯಕ್ರಮದ ವಿವರಣೆ ನೀಡಿದ ಅವರು, ಬೆಳಿಗ್ಗೆ 10.30 ಗಂಟೆಗೆ ವಗಟು ಕಲಾವಿದ ರಾಜೇಂದ್ರ ಕಾಂಬಳೆ ಅವರು ಸಾಂಸ್ಕೃತಿಕ ಕಾರ್ಯಕ್ರಮ ನಡೆಸುವರು. ನಂತರ ಮಧ್ಯಾಹ್ನ 12. ಗಂಟೆಗೆ ವೇದಿಕೆ ಕಾರ್ಯಕ್ರಮ ಜರುಗಲಿದೆ. ಸಂಘಟನೆಯ ರಾಷ್ಟ್ರೀಯ ಅಧ್ಯಕ್ಷ ನ್ಯಾಯವಾದಿ ಮನೋಜ ಆಖರೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಸಂಘಟನೆಯ ಮಹಾ ಪ್ರಧಾನ ಕಾರ್ಯದರ್ಶಿ ಸೌರವ ಖೇಡೆಕರ್, ವಕ್ತಾರರಾದ ಪ್ರೊ.ಗಂಗಧರ ಬನಬರೆ, ವಿಧಾನ ಪರಿಷತ್ ಸದಸ್ಯರಾದ ಎಮ್.ಜಿ ಮುಳೆ ಹಾಗೂ ಕರ್ನಾಟಕ ಮರಾಠಾ ನಿಗಮ ಮಂಡಳದ ಅಧ್ಯಕ್ಷ ಜಿ.ಹೆಚ್.ಮರಿಯೊಜಿರಾವ, ಏಕತಾ ಫೌಂಡೇಷನ್ ಅಧ್ಯಕ್ಷ ರವಿಂದ್ರ ಸ್ವಾಮಿ, ಸಮಾಜ ಸೇವಕ ಅಬ್ದುಲ್ ಮನ್ನಾನ್ ಸೇಠ್, ಕಿಶಾನ ಶಿಕ್ಷಣ ಪ್ರಸಾರ ಮಂಡಳಿ ಅಧ್ಯಕ್ಷ ಅನಿಲ ಶಿಂಧೆ, ಉಸ್ಮಾನಾಬಾದ್ ಜನತಾ ಬ್ಯಾಂಕ್ ಅಧ್ಯಕ್ಷ ವಸಂತರಾವ ನಾಗದೆ, ಅರುಣ ಪಾಟೀಲ ಎಕಂಬೇಕರ್, ಡಾ.ದಿನಕರ್ ಮೋರೆ, ಕೆ.ಕೆ.ಎಮ್.ಪಿ ಅಧ್ಯಕ್ಷ ಡಿಗಂಬರ್ ರಾವ ಮಾನಕಾರಿ, ನಂದಕುಮಾರ ಸಾಳುಂಕೆ, ಡಿಸಿಸಿ ಬ್ಯಾಂಕ್ ನಿದೇಶಕ ಅಶೋಕ ಸೋಂಜೆ, ಮಾಜಿ ಗ್ರಾ.ಪಂ ಅಧ್ಯಕ್ಷ ದೀಪಕ ಪಾಟೀಲ ಚಾಂದೋರಿ, ನ್ಯಾಯವಾದಿ ನಾರಾಯಣ ಗಣೇಶ, ಜನಾರ್ಧನ ಬಿರಾದಾರ, ಸತೀಶ ಮುಳೆ, ಅನಿಲ ಭುಸಾರೆ, ಜಿಜಾವು ಬ್ರಿಗೇಡ್ ಅಧ್ಯಕ್ಷೆ ಡಾ.ಕೃತಿಕಾ ಕನಸೆ, ಪ್ರಕಾಶ ಪಾಟೀಲ, ಡಾ.ಜ್ಞಾನೋಬಾ ಮುಂಗಳೆ ಹಾಗೂ ಇತರರು ಕಾರ್ಯಕ್ರಮದಲ್ಲಿ ಉಪಸ್ಥಿತರಿರುವರು. ಇದೇ ವೇಳೆ ಸಯ್ಯದ್ ಅಹಮ್ಮದ್ ಖಾನ್ ರಾಷ್ಟ್ರೀಯ ಪ್ರಶಸ್ತಿ ಪುರಸ್ಕೃತರು ಶಾಹಿನ್ ಶಿಕ್ಷಣ ಸಂಸ್ಥೆಯ ಅಧ್ಯಕ್ಷರು ಡಾ.ಅಬ್ದುಲ್ ಖದೀರ್ ಅವರಿಗೆ ಇದೇ ವೇಳೆ ಸನ್ಮಾನಿಸಲಾಗುವುದು ಎಂದು ವಾಸರೆ ಹೇಳಿದರು.

ಸಂಘಟನೆಯ ಜಿಲ್ಲಾ ಉಪಾಧ್ಯಕ್ಷ ದತ್ತಾ ಪಾಟೀಲ, ಕಾರ್ಯದರ್ಶಿ ರಾಮರಾವ ರಾವಣಗಾವೆ, ಸಂಘಟನೆಯ ಪ್ರಮುಖರಾದ ಪ್ರಶಾಂತ ಪಾಟೀಲ, ಗೋವಿಂದ ಪಾಟೀಲ, ಸಂತೋಷ ಪಾಟೀಲ, ರತಿಕಾಂತ ಬಿರಾದಾರ, ಅಂಕುಶ ಪಾಟೀಲ, ದತ್ತಾಡಾವರಗಾವೆ, ದತ್ತಾ ಪಾಟೀಲ ಆಲೂರ್, ನಿಲೇಶ ಜಗತಾಪ, ಜ್ಞಾನೋಬಾ ನಿಟ್ಟುರೆ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಹೊಲಿಗೆ ಯಂತ್ರ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಬೀದರ, ನವೆಂಬರ್.13:– ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದಿಂದ 2025–26ನೇ ಸಾಲಿನ ಹೊಲಿಗೆ ಯಂತ್ರ ವಿತರಣಾ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಸೌಲಭ್ಯವನ್ನು ಪಡೆಯಲು ಇಚ್ಛಿಸುವವರು ಕಡ್ಡಾಯವಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬೇಕಾಗಿರುತ್ತದೆ. ಅರ್ಜಿ ಸಲ್ಲಿಸಲು ಡಿಸೆಂಬರ್.6 ಕೊನೆಯದಿನವಾಗಿದೆ ಎಂದು ಕರ್ನಾಟಕ ಮರಾಠ ಸಮುದಾಯಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಅರ್ಹತೆಗಳು: ಅರ್ಜಿ ಸಲ್ಲಿಸಲು ಪ್ರವರ್ಗ–3–ಬಿ ಅಡಿಯಲ್ಲಿ 2(ಎ) ಯಿಂದ 2(ಎಫ್)ವರೆಗೆ ಬರುವ ಸಮುದಾಯಕ್ಕೆ ಸೇರಿರಬೇಕು. ಜಾತಿ ಮತ್ತು ಆದಾಯ ಪ್ರಮಾಣ ಪತ್ರ ನಮೂನೆ–3ಬಿ ಯಲ್ಲಿ ಪಡೆದಿರಬೇಕು (ಪ್ರಮಾಣ ಪತ್ರವು ಚಾಲ್ತಿಯಲ್ಲಿರಬೇಕು), ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿರಬೇಕು ಹಾಗೂ ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು ಹಾಗೂ ಆಧಾರ್ ಕಾರ್ಡ್ ಹೊಂದಿರಬೇಕು. ಅರ್ಜಿದಾರರ ವಯಸ್ಸು ಕನಿಷ್ಠ 18 ವರ್ಷಗಳು ಹಾಗೂ ಗರಿಷ್ಠ 55 ವರ್ಷಗಳನ್ನು ಮೀರಿರತಕ್ಕದ್ದಲ್ಲ. ಒಂದು ಕುಟುಂಬದಲ್ಲಿ ಓರ್ವ ಸದಸ್ಯರನ್ನು ಮಾತ್ರ ಈ ಸೌಲಭ್ಯಕ್ಕೆ ಪರಿಗಣಿಸ ತಕ್ಕದ್ದು. ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನವು ಗ್ರಾಮೀಣ ಪ್ರದೇಶದಲ್ಲಿ ರೂ.98.000 ಹಾಗೂ ನಗರ ಪ್ರದೇಶದಲ್ಲಿ ರೂ. 1,20.000 ಗಳನ್ನು ಮೀರತಕ್ಕದ್ದಲ್ಲ. ಅಂಗವಿಕಲ ಮಹಿಳೆಯರಿಗೆ ಶೇ.5 ರಷ್ಟು ಮೀಸಲಿರಿಸ ತಕ್ಕದ್ದು. ಆಯ್ಕೆ ಮಾಡುವಾಗ ಮಹಿಳೆಯರಿಗೆ ಶೇ.33ರಷ್ಟು, ವಿಕಲಚೇತನರಿಗೆ ಶೇ.5ರಷ್ಟು ಹಾಗೂ ತೃತೀಯ ಲಿಂಗಳಿಗೆ ಶೇ.1ರಷ್ಟು ಅಂಗವಿಕಲ ಮಹಿಳೆಯರಿಗೆ ಶೇ.2ರಷ್ಟನ್ನು ಮೀಸಲಿರಿಸುವುದು. ವಿಧವೆಯರಿಗೆ, ಪರಿತ್ಯಕ್ತ ಮಹಿಳೆಯರಿಗೆ ಹೆಚ್.ಐ.ವಿ ಪೀಡಿತರಿಗೆ 35 ವರ್ಷ ವಯೋಮಿತಿ ಮೀರಿರತಕ್ಕ ಅವಿವಾಹಿತ ಮಹಿಳೆಯರಿಗೆ ಶೇ.2 ರಷ್ಟನ್ನು ಮೀಸಲಿರಿಸುವುದು.

ವಿಶೇಷ ಸೂಚನೆ: ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕವೇ ಸಲ್ಲಿಸಬೇಕಾಗಿರುತ್ತದೆ.

ನಿರ್ದೇಶಕರ ಮಂಡಳಿಯ ವಿವೇಚನಾ ಕೋಟಾದಡಿ ಸೌಲಭ್ಯ ಪಡೆಯಬಯಸುವವರೂಸಹ ಆನ್‌ಲೈನ್‌ನಲ್ಲಿ ಪ್ರತ್ಯೇಕವಾಗಿ ಅರ್ಜಿಯನ್ನು ಸಲ್ಲಿಸುವುದು, ಒಂದು ಕುಟುಂಬದ ಒಬ್ಬ ಸದಸ್ಯರು ಮಾತ್ರ ಈ ಯೋಜನೆಯಲ್ಲಿ ಒಂದುಸಲ ಸೌಲಭ್ಯ ಪಡೆಯಲು ಅರ್ಜಿ ಸಲ್ಲಿಸಬಹುದು.

ಸಂಪರ್ಕ ವಿವರ: ನಿಗಮದ ಸಹಾಯವಾಣಿ: 8867537799/ ದೂ.ಸಂ:080–29903994 (ಬೆಳಿಗ್ಗೆ:10.00 ರಿಂದ ಸಂಜೆ:5.30 ವರೆಗೆ ಸಂಪರ್ಕಿಸಬಹುದಾಗಿದೆ), ಯೊಜನೆಗಳ ಮಾರ್ಗಸೂಚಿಗಳು, ಸಲ್ಲಿಸಬೇಕಾದ ದಾಖಲೆಗಳು, ಜಿಲ್ಲಾ ವ್ಯವಸ್ಥಾಪಕರ ಕಛೇರಿ, ನಂ.9–8–30, ಬಿವ್ಹಿಬಿ ಕಾಲೇಜ ರಸ್ತೆ, 1ನೇ ಕ್ರಾಸ್, ಗುನ್ನಳ್ಳಿ ಕಾಂಪ್ಲೇಕ್ಸ, ಗಣೇಶ ಮಂದಿರ ಹತ್ತಿರ, ವಿದ್ಯಾನಗರ ಕಾಲೋನಿ, ಬೀದರ–585403 ದೂರವಾಣಿ ಸಂ:08482–223515 ಹಾಗೂ ಹೆಚ್ಚಿನ ವಿವರಗಳನ್ನು https://kmcdc.karnataka.gov.in ಇಲ್ಲಿಗೆ ಭೇಟಿ ನೀಡಿ ತಿಳಿಯಬಹುದಾಗಿದೆ.

# ಪ್ರಥಮ ವರ್ಷದ ವಿದ್ಯಾರ್ಥಿನಿಯರಿಗೆ ಸ್ವಾಗತ



ಬಸವಕಲ್ಯಾಣ :– ನ 13. ವಿದ್ಯಾರ್ಥಿನಿಯರು ಪಠ್ಯಪುಸ್ತಕಗಳು ಓದುವದರೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಕ್ರೀಡೆ ಕರಾಟೆ ಸಂಗೀತ ನೃತ್ಯಗಳಲ್ಲಿ ಭಾಗವಹಿಸಬೇಕು ಎಂದು ಹುಲಸೂರಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಧ್ಯಾಪಕರು ಡಾ. ಗಾನಶೃತಿ ಹೇಳಿದರು. ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ, ಅಕ್ಕಮಹಾದೇವಿ ಮಹಿಳಾ ಪ್ರಥಮ ದರ್ಜೆ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಪ್ರಥಮ ವರ್ಷದ ವಿದ್ಯಾರ್ಥಿನಿಯರಿಗೆ ಸ್ವಾಗತ ಸಮಾರಂಭವನ್ನು ಕುರಿತು ಮಾತನಾಡಿದರು. ವಿದ್ಯಾರ್ಥಿನಿಯರು ಕೇವಲ ಪಠ್ಯಗಳನ್ನು ಹೊರತುಪಡಿಸಿ ಭಾರತೀಯ ಸಂಸ್ಕೃತಿ ಪರಂಪರೆಯನ್ನು ಉಳಿಸಿ ಬೆಳೆಸಿ ಕೊಂಡು ಹೋಗಬೇಕೆಂದು ಹೇಳಿದರು. ಶ್ರೀ ಬಸವೇಶ್ವರ ದೇವಸ್ಥಾನ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ವಿಜಯಲಕ್ಷ್ಮಿ ಗಡ್ಡೆ ಮುಖ್ಯ ಅತಿಥಿಗಳಾಗಿ ಮಾತನಾಡಿ ಮಹಿಳಾ ಕಾಲೇಜಿನಲ್ಲಿ ಓದುತ್ತಿರುವ ವಿದ್ಯಾರ್ಥಿನಿಯರು ನಾವೇನು ಪುರುಷರಿಗಿಂತ ಕಡಿಮೆಯಲ್ಲ ಎಂದು ಭಾವಿಸಿ ಧೈರ್ಯದೊಂದಿಗೆ ಎಲ್ಲಾ ಸ್ಪರ್ಧೆಗಳಲ್ಲಿ ಭಾಗವಹಿಸುವುದರೊಂದಿಗೆ

ಉನ್ನತವಾದ ಹುದ್ದೆ ಪಡೆದು ತಮ್ಮ ಜೀವನ ಹಸನಗೊಳಿಸಬೇಕೆಂದು ಹೇಳಿದರು, ಶ್ರೀ ಬಸವೇಶ್ವರ ಪದವಿ ಕಾಲೇಜಿನ ಪ್ರಾಚಾರ್ಯರಾದ ಡಾ.ಭೀಮಾಶಂಕರ್ ಬಿರಾದರ ವಿದ್ಯಾರ್ಥಿಯನ್ನು ಉದ್ದೇಶಿಸಿ ಮಾತನಾಡಿದರು. ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿಯ ಅಧ್ಯಕ್ಷರಾದ ಬಸವರಾಜ ಕೊರಕೆ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಆಡಳಿತ ಅಧಿಕಾರಿಗಳಾದ ಡಾ. ಮಲ್ಲಿಕಾರ್ಜುನ ಲಕಶೇಟಿ. ಪ್ರಾಚಾರ್ಯರಾದ ಡಾ. ರುದ್ರಮಣಿ ಮಠಪತಿ.

ಶ್ರೀ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯರಾದ ಡಾ. ಶಾಂತಲಾ ಪಾಟೀಲ ಸೇರಿದಂತೆ ಅನೇಕರು ಉಪಸ್ಥಿತರಿದ್ದರು, ಕಾಲೇಜಿನ ಪ್ರಾಚಾರ್ಯರಾದ ಮಾಯಾ ಮುರಾಳೆಯವರು ಸ್ವಾಗತಿಸಿದರು. ಪೂಜಾ ಗಂಗು ವಂದಿಸಿದರು. ಕು. ಸೋಮೇಶ್ರೀ ಪ್ರಾರ್ಥನೆ ಗೀತೆ ಹಾಡಿದರೆ, ಕು. ಮಹೇಶ್ವರಿ ಮತ್ತು ಅನುರಾಧ ನಿರೂಪಿಸಿದರು. ಕಾಲೇಜಿನ ಎಲ್ಲಾ ಬೋಧಕ ಬೋದ–ಕೇತರ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಕನ್ನಡ ರಾಜ್ಯೋತ್ಸವ ಮಕ್ಕಳ ದಿನಾಚರಣೆ ನಾಟಕೋತ್ಸವ



ಶತಾಯುಷಿ ಲಿಂ. ವಿ. ಸಿದ್ಧರಾಮ ಶರಣರು ರಚಿತ ಶಿವಶರಣ ಹರಳಯ್ಯ

ಮಲ್ಲಮ್ಮ ನುಡಿ ವಾರ್ತೆ

ಬೀದರ್. ನ. 13 :– 70ನೇ ಕನ್ನಡ ರಾಜ್ಯೋತ್ಸವ ನಿಮಿತ್ಯ ಬೀದರ ಡಾ॥ ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ವಚನ ಚಾರಿಟೇಬಲ್ ಸೊಸೈಟಿ(ರಿ). ವತಿಯಿಂದ ದಿನಾಂಕ :14/11/2025 ಸಾಯಂಕಾಲ 5:30 ಗಂಟೆಗೆ ಕನ್ನಡ ರಾಜ್ಯೋತ್ಸವ – ಮಕ್ಕಳ ದಿನಾಚರಣೆ ಹಾಗೂ ನಾಟಕೋತ್ಸವ (ಶತಾಯುಷಿ ಲಿಂ. ವಿ. ಸಿದ್ಧರಾಮ ಶರಣರು ರಚಿತ ಶಿವಶರಣ ಹರಳಯ್ಯ) ಆಯೋಜಿಸಲಾಗಿದೆ. ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಪರಮ ಪೂಜ್ಯ ಶ್ರೀ ಡಾ ಸಿದ್ಧರಾಮ ಬೆಲ್ದಾಳ ಶರಣರು ಅಧ್ಯಕ್ಷರು ಬಸವ ಮಹಾಮನೆ ಟ್ರಸ್ಟ್ ಬಸವ ಕಲ್ಯಾಣ ವಹಿಸಲಿದ್ದು, ದಿವ್ಯನೇತೃತ್ವ ಪರಮ ಪೂಜ್ಯ ಶ್ರೀ ಡಾ ಗಂಗಾಂಬಿಕಾ ಅಕ್ಕ ಅಧ್ಯಕ್ಷರು ಬಸವ ಸೇವಾ ಪ್ರತಿಷ್ಠಾನ ಬೀದರ

ಶ್ರೀ ಶಶಿಧರ ಕೋಸಂಬೆ ಅಧ್ಯಕ್ಷರು, ರಾಜ್ಯ ಮಕ್ಕಳಹಕ್ಕು ಆಯೋಗ ಬೆಂಗಳೂರು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶ್ರೀ ಸುರೇಶ ಚನ್ನಶೆಟ್ಟಿ ಅಧ್ಯಕ್ಷರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಬೀದರ, ಶರಣ ಸೂರ್ಯಕಾಂತ ಬಿರಾದಾರ ಉಪಕಾರ್ಯದರ್ಶಿಗಳು ಜಿ.ಪಂ ಬೀದರ ಹಾಗೂ ಗೌರವಾಧ್ಯಕ್ಷರು ಕ.ರಾ.ಸ.ನೌ.ಸಂ.ಬೀದರ ವಹಿಸಲಿದ್ದು ಕಾರ್ಯಕ್ರಮಲ್ಲಿ ಅನುಭಾವವನ್ನು ಡಾ.ಬಿ.ಬಿ. ಪೂಜಾರ ನಿರ್ದೇಶಕ(ನಿ) ಶಾಸ್ತ್ರೀಯ ಕನ್ನಡ ಕೇಂದ್ರ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯ ಕಲಬುರಗಿ(ಸೊಲ್ಲಾಪುರ) ನುಡಿಯಲಿದ್ದು ಇದೇ ಸಂಧರ್ಭದಲ್ಲಿ ಶರಣೆ ರೇಖಾ ಅಪ್ಪರಾವ ಸೌದಿ ಅಧ್ಯಕ್ಷರು ಬೀದರ ಬಿದ್ರಿ ಸಾಂಸ್ಕೃತಿಕ ವೇದಿಕೆ ಅವರನ್ನು ಗೌರವಿಸಲಾಗುತ್ತಿದೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಚನ ಚಾರಿಟೇಬಲ್ ಸೊಸೈಟಿ (ರಿ) ಅಧ್ಯಕ್ಷಕರಾದ ಶಿವಶಂಕರ ಟೋಕರೆ ವಹಿಸಲಿದ್ದಾರೆ. ಪ್ರಾಸ್ತಾವಿಕ ನುಡಿ ಡಾ ಸುರೇಶ ಪಾಟೀಲ, ನಿರ್ದೇಶಕರು ವಚನ ಸಮೂಹ ಸಂಸ್ಥೆ, ಬೀದರ.

ಶರಣ ಶರಣಪ್ಪ ಸಿಕ್ಯಾನಪೂರ ಅಧ್ಯಕ್ಷರು ಗ್ಲೋಬಲ್ ಅಕಾಡೆಮಿ ಬೀದರ ಸುಭಾಶ ಹಮೀಲಪೂರಕರ ಅಧ್ಯಕ್ಷರು ಹರಳಯ್ಯ ಸಮಾಜ ಬೀದರ, ಪಾರ್ವತಿ ವಿಜಯಕುಮಾರ ಸೋನಾರೆ ಜಿಲ್ಲಾಧ್ಯಕ್ಷರು ಮಕ್ಕಳ ಸಾಹಿತ್ಯ ಪರಿಷತ್ತು ಬೀದರ, ಬಿ.ಜೆ.ವಿಷ್ಣುಕಾಂತ ನಿರ್ಮಾಪಕ ನಿರ್ದೇಶಕರು ಶ್ರೀ ಅಕ್ಕಮಹಾದೇವಿ ಸಿನಿಮಾ ಮಂಜು ವ್ಯವಸ್ಥಾಪಕರು ಧಾತ್ರಿ ರಂಗಸಂಸ್ಥೆ ಸಿರಿಗೆರೆ ಸಿರಗುಪ್ಪ ಬೀದರ ಕಾರ್ಯಕ್ರಮದಲ್ಲಿ ಘನ ಉಪಸ್ಥಿತಿ ವಹಿಸಲಿದ್ದಾರೆ.

ದಯವಿಟ್ಟು ಜಿಲ್ಲೆಯ ಸಾಹಿತಿಗಳು, ಕಲಾವಿದರು, ಸಾರ್ವಜನಿಕಬಂಧುಗಳು ಪ್ರಗತಿ ಪರಚಿಂತಕರು ವಿವಿಧ ಸಂಘ ಸಂಸ್ಥೆಯ ಪದಾಧಿಕಾರಿಗಳು ಹಾಗೂ ಮಾಧ್ಯಮದ ಬಂಧುಗಳು ಕಾರ್ಯಕ್ರಮಕ್ಕೆ ಆಗಮಿಸಿ ಸಹಕರಿಸಲು ಸಾರ್ವಜನಿಕ ಹಿತದೃಷ್ಟಿಯಿಂದ ಈ ಮೂಲಕ ಕಳಕಳಿಯ ಪ್ರಾರ್ಥನೆ.

# ಸಿ.ಬಿ.ಸೋಮಶೆಟ್ಟಿಗೆ ಅನುಭವಮಂಟಪ ಪ್ರಶಸ್ತಿ



ಬೀದರ್. ನ. 13 :– ಭಾಲ್ಕಿ ಡಾ.ಚನ್ನಬಸವ ಪಟ್ಟದ್ದೇವರು ಅನುಭವಮಂಟಪ ಪ್ರಶಸ್ತಿಗೆ ಬೀದರ್‌ನ ಚಿತ್ರಕಲಾವಿದ ಸಿ.ಬಿ.ಸೋಮಶೆಟ್ಟಿ ಆಯ್ಕೆಯಾಗಿದ್ದಾರೆ ಎಂದು ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ಬಸವಲಿಂಗ ಪಟ್ಟದ್ದೇವರು ಬುಧವಾರ ಘೋಷಿಸಿದ್ದಾರೆ.

ಬಸವಕಲ್ಯಾಣದಲ್ಲಿ ನ.29, 30ರಂದು ನಡೆಯುವ 46ನೇ ಶರಣ ಕಮ್ಮಟ ಹಾಗೂ ಅನುಭವ ಮಂಟಪ ಉತ್ಸವ–2025ರಲ್ಲಿ ಅನುಭವ ಮಂಟಪದಿಂದ ನೀಡುವ ವಿವಿಧ ಪ್ರಶಸ್ತಿಗಳಿಗೆ ಆಯ್ಕೆಯಾಗಿರುವವರ ಪಟ್ಟಿಯನ್ನು ಬಿಡುಗಡೆಗೊಳಿಸಲಾಗಿದೆ.

ಬಸವಭಾಸ್ಕರ್ ರಾಷ್ಟ್ರೀಯ ಪ್ರಶಸ್ತಿಗೆ ಶಿರೂರಿನ ನಾಟಕಕಾರ ಬಸವರಾಜ ಬೇಂಗೇರಿ, ಅನುಭವಮಂಟಪ ರಾಷ್ಟ್ರೀಯ ಪ್ರಶಸ್ತಿಗೆ ಬೆಂಗಳೂರಿನ ಸುಮಂಗಲಿ ಸೇವಾ ಆಶ್ರಮದ ಅಧ್ಯಕ್ಷೆ ಎಸ್.ಜಿ.ಸುಶೀಲಮ್ಮ ಆಯ್ಕೆಯಾಗಿದ್ದಾರೆ. ಈ ಮೂರೂ ಪ್ರಶಸ್ತಿಯು ತಲಾ 1 ಲಕ್ಷ ನಗದು ಹಾಗೂ ಪ್ರಶಸ್ತಿ ಫಲಕ ಒಳಗೊಂಡಿವೆ.

ಡಾ.ಎಂ.ಎಂ.ಕಲಬುರಗಿ ಸಾಹಿತ್ಯ ಸಂಶೋಧನಾ ರಾಷ್ಟ್ರೀಯ ಪ್ರಶಸ್ತಿಗೆ ಹೊಸಪೇಟೆಯ ಚಿಂತಕ ಕೆ.ರವೀಂದ್ರನಾಥ ಆಯ್ಕೆಯಾಗಿದ್ದಾರೆ. ಪ್ರಶಸ್ತಿಯು 50 ಸಾವಿರ ಹಾಗೂ ಫಲಕ ಹೊಂದಿದೆ.

ಶರಣ ವೈದ್ಯ ಸಂಗಣ್ಣ ಪ್ರಶಸ್ತಿಗೆ ಮಹಾರಾಷ್ಟ್ರದ ದೇಗಲೂರಿನ ಪ್ರಸಿದ್ಧ ವೈದ್ಯ ಮಲ್ಲಿಕಾರ್ಜುನ ರಗಟೆ, ಶರಣ ಒಕ್ಕಲಿಗ ಮುದ್ದಣ್ಣ ಪ್ರಶಸ್ತಿ (2024) ಗೆ ಖಾನಾಪೂರದ ಸಾವಯವ ಕೃಷಿಕ ರಮೇಶ ಮೋರ್ಗೆ, ಶರಣ ಒಕ್ಕಲಿಗ ಮುದ್ದಣ್ಣ ಪ್ರಶಸ್ತಿ (2025) ಯನ್ನು ಹುಡಗಿಯ ಸಾವಯವ ಕೃಷಿಕ ಸೋಮಶಂಕರ ಅವರಿಗೆ ನೀಡಲಾಗುತ್ತಿದೆ. ಈ ಪ್ರಶಸ್ತಿಗಳು ತಲಾ 10 ಸಾವಿರ ನಗದು ಹಾಗೂ ಫಲಕ ಒಳಗೊಂಡಿವೆ.

# ಬೀದರ್ ಜ್ಯಾಂತಿ ಹೊಸ ಬಸ್ ಓಡಿಸಲು ಆಗ್ರಹ



ಬೀದರ್. ನ. 13 :– ಬೀದನಿಂದ ಬ್ಯಾಲಹಳ್ಳಿ, ಕಣಜಿ ಮಾರ್ಗವಾಗಿ ಜ್ಯಾಂತಿಗೆ ಹೊಸ ಬಸ್ ಓಡಿಸಬೇಕು ಎಂದು ನಮ್ಮ ಕರ್ನಾಟಕ ಸೇನೆ ಆಗ್ರಹಿಸಿದೆ.

ಸೇನೆಯ ಜಿಲ್ಲಾ ಘಟಕದ ಪದಾಧಿಕಾರಿಗಳು ನಗರದಲ್ಲಿ ನಿಯೋಗದಲ್ಲಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ವಿಭಾಗೀಯ ನಿಯಂತ್ರಣಾಧಿಕಾರಿ ಅವರಿಗೆ ಈ ಕುರಿತು ಮನವಿ ಪತ್ರ ಸಲ್ಲಿಸಿದರು.

ಹೊಸ ಬಸ್ ಅನ್ನು ಹಲಬರ್ಗಾ, ಪುನಃ ಜ್ಯಾಂತಿ, ಕಣಜಿ, ಬ್ಯಾಲಹಳ್ಳಿ ಮಾರ್ಗವಾಗಿ ಬೀದಗೆ ಓಡಿಸಬೇಕು ಎಂದು ಸೇನೆಯ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ಪಾಟೀಲ ಜ್ಯಾಂತಿ ಬೇಡಿಕೆ ಮಂಡಿಸಿದರು.

ಕಣಜಿ, ಬ್ಯಾಲಹಳ್ಳಿ, ಹಾಲಹಳ್ಳಿ ಹಾಗೂ ಬೀದನಿಂದ ಬ್ಯಾಲಹಳ್ಳಿಗೆ ಹೆಚ್ಚಿನ ಸಂಖ್ಯೆಯಲ್ಲಿ ತಡೆರಹಿತ ಬಗಳು ಇವೆ. ಇದರಿಂದಾಗಿ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ತೊಂದರೆ ಅನುಭವಿಸುವಂತಾಗಿದೆ ಎಂದು ಗಮನ ಸೆಳೆದರು.

ಭಾಲ್ಕಿ ತಾಲ್ಲೂಕಿನ ಹುಣಜಿ(ಎ) ಸಮೀಪದ ಮಹಾತ್ಮ ಗಾಂಧಿ ಸಹಕಾರ ಸಕ್ಕರೆ ಮುಂಭಾಗದ ರಸ್ತೆ ಮೂಲಕವೇ ಹಿಂದೆ ಎಲ್ಲ ಬಗಳು ಸಂಚರಿಸುತ್ತಿದ್ದವು. ಇದೀಗ ಮೇಲ್ಸೆತುವೆ ಮೂಲಕ ಸಂಚರಿಸುತ್ತಿರುವುದರಿಂದ ಕಾರ್ಖಾನೆಯಲ್ಲಿ ಕೆಲಸ ನಿರ್ವಹಿಸುವ ಸುಮಾರು 1,200 ನೌಕರರು, ಕಾರ್ಮಿಕರಿಗೆ ಸಮಸ್ಯೆಯಾಗುತ್ತಿದೆ ಎಂದು ಹೇಳಿದರು.


ಈ ಹಿಂದೆ ಕಾರ್ಮಿಕರಿಗೆ ಆಗುತ್ತಿರುವ ಅನಾನುಕೂಲದ ಬಗ್ಗೆ ಗಮನ ಸೆಳೆದಾಗ, ಕಾರ್ಖಾನೆ ಮುಂಭಾಗದಿಂದ ಬಸ್ ಓಡಿಸಲು ಕ್ರಮ ಕೈಗೊಳ್ಳಲಾಗಿತ್ತು. ನಂತರ ಮತ್ತೆ ಮೇಲ್ಸೆತುವೆ ಮೂಲಕ ಬಸ್ ಓಡಿಸಲಾಗುತ್ತಿದೆ ಎಂದು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ವಿದ್ಯಾರ್ಥಿಗಳ ಅನುಕೂಲಕ್ಕೆ ಸಂಜೆ 4 ರ ನಂತರ ಭಾಲ್ಕಿಯಿಂದ ಉದಗಿರಕ್ಕೆ ಹೆಚ್ಚಿನ ಬಸ್ ಓಡಿಸಬೇಕು. ಹಲಬರ್ಗಾ ಬಸ್ ನಿಲ್ದಾಣದಲ್ಲಿ ಎಲ್ಲ ತಡೆ ರಹಿತ ಬಗಳ ನಿಲುಗಡೆಗೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕೂಡಲೇ ಬೇಡಿಕೆಗೆ ಸ್ಪಂದಿಸದಿದ್ದರೆ ಬಸ್ ತಡೆದು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಸೇನೆಯ ಬೀದರ್ ತಾಲ್ಲೂಕು ಘಟಕದ ಅಧ್ಯಕ್ಷ ಅನಿಲ್ ರಾಜ–ಗೀರಾ, ನಗರ ಘಟಕದ ಅಧ್ಯಕ್ಷ ಸಂತೋಷ್ ಪಾಟೀಲ, ಹರ್ಷ ಬಿರಾದಾರ ಇದ್ದರು.

## ಇಂದು ಪೋಷಕರು, ಶಿಕ್ಷಕರ ಮಹಾಸಭೆ



ಮಲ್ಲಮ್ಮ ನುಡಿವಾರ್ತೆ

ಚಿಟಗುಪ್ಪ: ಸರಕಾರಿ ಶಾಲೆಗಳಲ್ಲಿ ಹಾಜರಾತಿ ಹೆಚ್ಚಿಸುವುದು, ನಿರಂತರತೆ ಕಾಪಾಡಿಕೊಳ್ಳುವ ಸಲುವಾಗಿ ಸರಕಾರದ ಆದೇಶದಂತೆ ನವೆಂಬರ್ 14 ರಂದು ಮಕ್ಕಳ ದಿನಾಚರಣೆ ಪ್ರಯುಕ್ತ ಬೆಳಗ್ಗೆ 10:30ಕ್ಕೆ ಘಾತಿಮಾಪುರನ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಷಕರು ಮತ್ತು ಶಿಕ್ಷಕರ ಮಹಾಸಭೆ ಹಮ್ಮಿಕೊಳ್ಳಲಾಗಿದೆ ಆದ ಕಾರಣ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ

ಸಭೆ ಯಶಸ್ವಿಗೊಳಿಸಬೇಕೆಂದು ಶಾಲೆಯ ಮುಖ್ಯ ಶಿಕ್ಷಕಿ ಪ್ರೇಮಿಳಾ ರೆಡ್ಡಿ ಪತ್ರಿಕಾ ಪ್ರಕಟಣೆ ಮೂಲಕ ಮನವಿ ಮಾಡಿದ್ದಾರೆ.



ಹುಮನಾಬಾದ ಪಟ್ಟಣದಲ್ಲಿ ಹಣ್ಣಿನ ಅಂಗಡಿಗೆ ಸಾಹಿತಿ ವಿಜಯಕುಮಾರ ಚೆಟ್ಟಿ ರವರು ಸೇಬಿನ ಹಣ್ಣು ಖರೀದಿಸುತ್ತಿರುವಾಗ ಒಂದು ಸೇಬಿನಲ್ಲಿ ಎರಡು ಮುಖದ ಸೇಬು ಕೈಗೆ ಸಿಕ್ಕಿದನ್ನು ಕಾಣಬಹುದು.

(ಮಲ್ಲಮ್ಮ ನುಡಿ ಚಿತ್ರ)

# ಷೇರು ವ್ಯತ್ಯಾಸದ ಬಾಕಿ ಮೊತ್ತವನ್ನು ನಿಗದಿತ ಅವಧಿಯೊಳಗಾಗಿ ಸಂಘಕ್ಕೆ ಪಾವತಿಸಲು ಸೂಚನೆ

ಕಲಬುರಗಿ,ನ.13.: ಕಲಬುರಗಿ–ಯಾದಗಿರಿ ಹಾಪಕಾಮ್ಸ್ (ನಿ) ಸಂಘದ ಆಡಳಿತ ಮಂಡಳಿಯ 2025–2030ನೇ ವಾರ್ಷಿಕ ಅವಧಿಗೆ ಚುನಾವಣೆ ಜರುಗಲಿದ್ದು, ಇದಕ್ಕಾಗಿ ಬಾಕಿದಾರರು ಷೇರು ವ್ಯತ್ಯಾಸದ ಮೊಬಲಗು 900 ರೂ.ಗಳನ್ನು 2025ರ ನವೆಂಬರ್ 20ರೊಳಗಾಗಿ ಸಂಘಕ್ಕೆ ಪಾವತಿಸಿ, ಇತ್ತೀಚಿನ ಮೂರು ಭಾವಚಿತ್ರ ಹಾಗೂ ಗುರುತಿನ ಚೀಟಿ (ಖಜಜಟಣುಣಥಿ ಅಚಿಡಿಜ) ಯನ್ನು ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಹಾಪಕಾಮ್ಸ್ ಕಚೇರಿಯಲ್ಲಿ ಕಚೇರಿ ಸಮಯದಲ್ಲಿ ಸಲ್ಲಿಸಬೇಕೆಂದು ಕಲಬುರಗಿ ಮತ್ತು ಯಾದಗಿರಿ ಜಿಲ್ಲಾ ಹಾಪಕಾಮ್ಸ್‌ನ ವ್ಯವಸ್ಥಾಪಕ ನಿರ್ದೇಶಕರು ತಿಳಿಸಿದ್ದಾರೆ.

ಒಂದು ವೇಳೆ ಬಾಕಿದಾರರು ವ್ಯತ್ಯಾಸದ ಷೇರು ಮೊತ್ತವನ್ನು ನಿಗದಿತ ಅವಧಿಯೊಳಗಾಗಿ ಪಾವತಿಸದಿದ್ದಲ್ಲಿ ಕರ್ನಾಟಕ ಸಹಕಾರ ಸಂಘದ ಕಾಯ್ದೆಯ 1959 ರ ಕಲಂ 29ಸಿ(1)(ಎಲ್) ರೀತ್ಯ ಅನರ್ಹತೆಯನ್ನು ಹೊಂದಿ, ಸಂಘದ ಆಡಳಿತ ಮಂಡಳಿಯ ಚುನಾವಣೆಯಲ್ಲಿ ಸ್ಪರ್ಧಿಸಲು ಮತ್ತು ಚುನಾವಣೆಯಲ್ಲಿ ಮತದಾನ ಮಾಡಲು ಅನರ್ಹರಾಗುತ್ತಾರೆ. ಷೇರು ವ್ಯತ್ಯಾಸದ ಮೊತ್ತ ಬಾಕಿ ಇಟ್ಟುಕೊಂಡಿರುವ ಸದಸ್ಯರ ಯಾದಿಯನ್ನು ದಿನಾಂಕ:20–10–2025 ರಂದು ಸಂಘದ ಕಾರ್ಯಾಲಯದಲ್ಲಿ ಇಡಲಾಗಿದೆ.

ಕಲಬುರಗಿ–ಯಾದಗಿರಿ ಹಾಪಕಾಮ್ಸ್ (ನಿ) ಸಂಘದ ಷೇರಿನ ಮುಖ ಬೆಲೆಯನ್ನು ರೂ. 1000ಕ್ಕೆ ಹೆಚ್ಚಿಸಲು ಸನ್ 2012–13ನೇ ಸಾಲಿನ ವಾರ್ಷಿಕ ಮಹಾಸಭೆಯಲ್ಲಿ ನಿರ್ಣಯಿಸಿ, ಸಂಯುಕ್ತ ನಿಬಂಧಕರು, ಸಹಕಾರ ಸಂಘಗಳು, ಕಲಬುರಗಿ ವಿಭಾಗ, ರಾಯಚೂರ ಇವರು ಸಂಘದ ಬೈಲಾವನ್ನು ತಿದ್ದುಪಡಿ ಮಾಡಿ ಸಂಘದ ಷೇರಿನ ಮುಖ ಬೆಲೆಯನ್ನು ರೂ. 1000 ಕ್ಕೆ ಹೆಚ್ಚಿಸಿ ಅನುಮೋದನೆ ನೀಡಿರುತ್ತಾರೆ.



ಕಲಬುರಗಿ: ಎಲ್ಲ ದೇವದಾಸಿ ಮಹಿಳೆಯರು ಮತ್ತು ಅವರ ಕುಟುಂಬದ ಮೂರು ತಲೆಮಾರಿಗೂ ಅನ್ವಯಿಸುವಂತೆ ಗಣತಿಗೆ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿ ಕರ್ನಾಟಕ ರಾಜ್ಯ ದೇವದಾಸಿ ಮಹಿಳೆಯರ ವಿಮೋಚನಾ ಸಂಘ ಜಿಲ್ಲಾ ಸಮಿತಿಯಿಂದ ನಗರದ ಜಗತ್ ವೃತ್ತದಲ್ಲಿ ಧರಣಿ ನಡೆಸಲಾಯಿತು. ಈ ಸಂದರ್ಭದಲ್ಲಿ ಸಮಿತಿ ಜಿಲ್ಲಾಧ್ಯಕ್ಷೆ ಚಂದಮ್ಮ ಗೋಳಾ, ರಾಜ್ಯ ಗೌರವಾಧ್ಯಕ್ಷ ಯು.ಬಸವರಾಜ, ಜಿಲ್ಲಾ ಕಾರ್ಯಾಧ್ಯಕ್ಷ ಸುಧಾಮ ಧನ್ನಿ, ಪಾಂಡುರಂಗ ಮಾವಿನಕರ, ಶೋಭಾ ಭೂಪಾಲ ತೆಗನೂರ, ಶರಣಮ್ಮ ಹನುಮನಗರ, ಎಲ್ಲಮ್ಮ ನೀಲೂರ ಸೇರಿದಂತೆ ಹಲವರಿದ್ದರು.

# ಅನ್ನದಾನ ಸಂತರ್ಪಣೆ ಕಾರ್ಯಕ್ರಮ



ರಾಯಚೂರು, ನ.13–ಅಯ್ಯಪ್ಪ ಸ್ವಾಮಿ ಅನ್ನದಾನ ಸೇವಾ ಸಮಿತಿ ವತಿಯಿಂದ ದಿ. 17 ರಿಂದ ಜ.5ರ ವರೆಗೆ ಮಧ್ಯಾಹ್ನ 1 ರಿಂದ 3 ಗಂಟೆವರೆಗೆ ನಗರದ ಉದಯ ನಗರದಲ್ಲಿ ಇರುವ ಅಯ್ಯಪ್ಪ ಸ್ವಾಮಿ ದೇವಸ್ಥಾನದಲ್ಲಿ ಪ್ರತಿ

ವರ್ಷದಂತೆ ಈ ವರ್ಷವೂ ಅನ್ನದಾನ ಸಂತರ್ಪಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಈಶ್ವರ ಸ್ವಾಮಿ ಹೇಳಿದರು.

ಅವರಿಂದು ನಗರದ ಸುದ್ದಿಗಾರರೊಂದಿಗೆ ಮಾತನಾಡಿ, ಮಂಚಿಕೊಂಡ ನರಸಿಂಹಲು ಅವರು ಅನ್ನದಾನಕ್ಕೆ ಬೇಕಾಗುವ ರೇಷನ್ ಸಾಮಾಗ್ರಿಗಳನ್ನು ಶಾಶ್ವತ ಅನ್ನದಾನ ಸಂತರ್ಪಣೆ ಸೇವೆ ಮಾಡುತ್ತಿದ್ದಾರೆ. ಕಳೆದ ಬಾರಿ ಪುಡ್ಡ ರಾಜೇಂದ್ರ ರೆಡ್ಡಿ ರವರು ಅನ್ನದಾನಕ್ಕೆ ಬೇಕಾಗುವ ಅಕ್ಕಿಯನ್ನು ಶಾಶ್ವತ ಸೇವೆ ನೀಡಿದ್ದು,

ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಹಾಗೂ ಶಿವ ಮಾಲಾಧಾರಿಗಳಿಗೆ ನಮ್ಮ ಸೇವಾ ಸಮಿತಿ ವತಿಯಿಂದ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿದ್ದು, ಸಮಸ್ತ ಎಲ್ಲಾ ಅಯ್ಯಪ್ಪ ಸ್ವಾಮಿ ಮಾಲಾಧಾರಿಗಳು ಮತ್ತು ಶಿವ ಮಾಲಾಧಾರಿಗಳು ಹಾಗೂ ಎಲ್ಲಾ ಸಕಲ ಭಕ್ತಾಧಿಗಳು ತನು ಮನ ಧನದಿಂದ ಭಾಗವಹಿಸಿ ಅನ್ನದಾನ ಸೇವಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು

ಈ ಸಂದರ್ಭದಲ್ಲಿ ಪುಲರಾಜೇಂದ್ರ ರೆಡ್ಡಿ,ವೇಣುಗೋಪಾಲ ಗುರುಸ್ವಾಮಿ ಉಪಸ್ಥಿತರಿದ್ದರು.

CITATION:

IN THE COURT OF THE PRL. CIVIL JUDGE AND JMFC., AT HUMNABAD.

CRL. MISC. No.2636/2025.

Petitioners:

Mahadevi W/o Late Raju Halge, Age: 33-yrs. Occu : Household R/o Indira Nagar Town Humnabad. Dist. Bidar.

Respondent:

The Registrar of Birth and Death through The Chief officer TMC Humnabad. Dist.Bidar

Sub:- Petition U/Sec. 13(3) of Birth and Death Registration Act-1969

Whereas, the above mentioned petitioner has filed the petition under section 13(3) of Birth and Death Registration Act-1969 praying this Honorable Court to issue Death Certificate of Daughter in law of petitioner by namely LATE. LAXMAN S/O SAIBANNA HALGE, who was died on 16.02.2000 at Indira Nagar, Town Humnabad, Dist. Bidar. The petitioner claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 19.12.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 11-11-2025.

//By order of the court//
Chief Ministerial Officer,
Prl. Civil Judge & JMFC Court,
Humnabad

:CITATION:

IN THE COURT OF THE PRL, CIVIL JUDGE AND JMFC., AT HUMNABAD.

CRL. MISC. No.2707/2025.

Petitioners:

1. Md. Feroz khan S/o Late. Azeem khan, Age: 49-year, Occu: Mechanic.
2. Md. Gousuddin S/o Late. Azeem khan, Age: 47-year, Occu: Mechanic.
3. Mohammed Ajmirkhan S/o Late. Azeem khan, Age: 42-year, Occu: Mechanic.
4. Ibrahim khan S/o Late. Azeem khan, Age: 40-years, Occu: Mechanic.
5. Md. Afroz khan S/o Late. Azeem khan, Age: 38-years, Occu: Mechanic.
6. Farhana Begum W/o Md. Shahnawaz, Age : 36-years. Occu : house hold.

All R/o Bi-Bi Galli, Humnabad. Dist. Bidar.

Respondent:

The Registrar of Birth and Death through the Chief Officer TMC Humnabad.

Sub:- Petition U/Sec, 13(3) of Birth and Death Registration Act-1969

Whereas, the above mentioned petitioners have filed the petition under section 13(3) of Birth and Death Registration Act-1969 praying this Honorable Court to issue Death Certificate of Grand father of petitioner No.1 to 6 by namely LATE. MAHINUDDIN KHAN S/O HUSSAIN KHAN, who was died on 15.07.1970 at Bi-Bi Galli Humnabad. Dist. Bidar. The petitioners claiming the Death Certificate of said for transfer of property and other official purpose and home record.

Therefore, it is hereby proclaimed that if any persons have got any objection in this regard, may approach to this Court on 19.12.2025 at 11.00 AM in person or any authorized pleader to answer such claim otherwise the matter will be heard and determined in your absence as per law.

Given under my hand and seal of he court, this the 11-11-2025

//By order of the court//
Chief Ministerial Officer,
Prl. Civil Judge & JMFC Court,
Humnabad

# ರಾಜ್ಯದ ವೈದ್ಯಕೀಯ ಶಿಕ್ಷಣ ಸಚಿವರ ಪ್ರವಾಸ

ಕಲಬುರಗಿ,ನ.13.(ಕರ್ನಾಟಕ ವಾರ್ತೆ)–ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರಾದ ಡಾ. ಶರಣಪ್ರಕಾಶ ಆರ್. ಪಾಟೀಲ್ ಅವರು ಬೀದರದಿಂದ ರಸ್ತೆ ಮೂಲಕ ನವೆಂಬರ್ 14 ರಂದು ಶುಕ್ರವಾರ ಬೆಳಿಗ್ಗೆ 10 ಗಂಟೆಗೆ ಕಲಬುರಗಿಗೆ ಆಗಮಿಸುವರು.

ನಂತರ ಅಂದು ಮಧ್ಯಾಹ್ನ 2 ಗಂಟೆಗೆ ಗುಲಬರ್ಗಾ ವೈದ್ಯಕೀಯ ವಿಜ್ಞಾನಗಳ (ಜಿಮ್ಸ್) ಸಂಸ್ಥೆಗೆ ಭೇಟಿ ನೀಡುವರು. ನವೆಂಬರ್ 15 ರಿಂದ 18 ರವರೆಗೆ ಕಲಬುರಗಿಯಲ್ಲಿ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

# ನವೆಂಬರ್ 15 ರಂದು ಗ್ರಾಹಕರ ಕುಂದುಕೊರತೆ ಸಭೆ

ಕಲಬುರಗಿ,ನ.13.(ಕರ್ನಾಟಕ ವಾರ್ತೆ)–ಕಲಬುರಗಿ ಜೆಸ್ಕಾಂ ಗ್ರಾಮೀಣ ವಿಭಾಗೀಯ ಕಚೇರಿ–2ರ ವ್ಯಾಪ್ತಿಯಲ್ಲಿ ಬರುವ ಜೇವರ್ಗಿ, ಯಡ್ರಾಮಿ, ಚಿತ್ತಾಪೂರ, ಶಹಾಬಾದ ಹಾಗೂ ಕಾಳಗಿ ಉಪವಿಭಾಗಗಳ ಕಚೇರಿಗಳಲ್ಲಿ ಇದೇ ನವೆಂಬರ್ 15 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ವಿದ್ಯುತ್ ಸುರಕ್ಷತಾ ದಿನ ಹಾಗೂ ಗ್ರಾಹಕರ ಕುಂದುಕೊರತೆ ಸಭೆಯವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕಲಬುರಗಿ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ವಿಭಾಗ–2ರ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

ಸಾರ್ವಜನಿಕರು ತಮ್ಮ ಗ್ರಾಮಗಳಲ್ಲಿನ ವಿದ್ಯುತ್ ಸಂಬಂಧಿಸಿದಂತೆ ಸಮಸ್ಯೆಗಳ ನಿವಾರಣೆಗಾಗಿ ಸಭೆ ಕರೆಯಲಾಗಿದ್ದು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಈ ಕುಂದುಕೊರತೆ ಸಭೆಯನ್ನು ಯಶಸ್ವಿಗೊಳಿಸಬೇಕೆಂದು ಅವರು ತಿಳಿಸಿದ್ದಾರೆ.

## ಆಸ್ತಿ ತೆರಿಗೆಯಿಂದ ವಿನಾಯತಿ ನೀಡಲಾದ

# ಸ್ವತ್ತುಗಳಿಗೆ ಸೇವಾ ಶುಲ್ಕ ವಸೂಲಾತಿ

ರಾಯಚೂರು ನವೆಂಬರ್ 13: ರಾಯಚೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿನ ಆಸ್ತಿ ತೆರಿಗೆಯಿಂದ ವಿನಾಯತಿ ನೀಡಲಾದ ಸ್ವತ್ತುಗಳಿಗೆ ಶೇ.25 ರಷ್ಟು ಸೇವಾ ಶುಲ್ಕದ ವಸೂಲಾತಿಗೆ ಬೆಂಗಳೂರಿನ ಪೌರಾಡಳಿತ ನಿರ್ದೇಶನಾಲಯವು ಆ.ಸಂ: 29690 ಡಿಎಂಎ 72 ಡಿಇಬಿಟಿ 2019–20ರ ದಿ ಕರ್ನಾಟಕ ಮುನ್ಸಿಪಲ್ ಕಾರ್ಪೋರೇಶನ್ (ಅಮೆಂಡಮೆಂಟ್) ರೂಲ್ಸ, 2003 ಕಾಲಂ.3, ಇನ್ಸರ್ಟೇಶನ್ ಆಫ್ ನ್ಯೂ ರೂಲ್ಸ್ 7–ಎ. ಆಫ್ಟರ್ ರೂಲ್ 7 ಆಫ್ ಶೆಡ್ಯೂಲ್ 3 (ಟ್ಯಾಕ್ಸೇಶನ್ ರೂಲ್ಸ) ಟು ದಿ ಕರ್ನಾಟಕ ಮುನ್ಸಿಪಲ್ ಕಾರ್ಪೋರೇಶನ್ ಆಕ್ಟ್, 1976 ಸೆಕ್ಷನ್.110 (2)ರ ಪ್ರಕಾರ ತಿಳಿಸಿರುತ್ತದೆ.

ಸರ್ಕಾರಿ ಅಥವಾ ಧಾರ್ಮಿಕ ಸಂಸ್ಥೆಗಳು, ಚಾರಿಟೇಬಲ್ (ದಾನಶೀಲ) ಸಂಸ್ಥೆಗಳು, ಶಿಕ್ಷಣ ಸಂಸ್ಥೆಗಳು ಅಥವಾ ಆಸ್ಪತ್ರೆಗಳು, ಬೇರೆ ಯಾವುದೇ ತೆರಿಗೆ ವಿನಾಯತಿ ಪಡೆದ ಕಟ್ಟಡಗಳು, ಇನ್ನಿತರೆ ಕಟ್ಟಡಗಳಿಗೆ ಆಸ್ತಿ ತೆರಿಗೆಯಿಂದ ವಿನಾಯಿತಿಗೊಂಡು ಕಟ್ಟಡಗಳ ಮೇಲೆ ಸೇವಾ ಶುಲ್ಕವನ್ನು ವಿಧಿಸಲಾಗುತ್ತದೆ ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಶ್ವವಿದ್ಯಾಲಯದಲ್ಲಿ ಕಾನೂನು ಅರಿವು ಕಾರ್ಯಕ್ರಮ

ರಾಯಚೂರು ನವೆಂಬರ್ 13: ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ಹಾಗೂ ನವದೆಹಲಿಯ ರಾಯಚೂರು ವಿಭಾಗದ ಮಾನವ ಹಕ್ಕುಗಳು ಮತ್ತು ಭಷ್ಟಾಚಾರ ವಿರೋಧಿ ಸಂಸ್ಥೆ ಮತ್ತು ಹೆಚ್.ಆರ್.ಎ.ಸಿ.ಎಫ್ ಎಎಸ್‌ಎಂವಿ ಯುನಿವರ್ಸಿಟಿ ಲಿಗಲ್ ಅವಾರ್ನೆಸ್ ಕಮೀಟಿ ಇವರ ಸಂಯುಕ್ತಾಶ್ರಯದಲ್ಲಿ ಕಾನೂನು ಅರಿವು ಕಾರ್ಯಕ್ರಮವು ನಗರದ ಯರಗೇರಾದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನವೆಂಬರ್ 14ರ ಬೆಳಿಗ್ಗೆ 11.30ಕ್ಕೆ ಹಮ್ಮಿಕೊಳ್ಳಲಾಗಿದೆ.

ಗೌರವಾನ್ವಿತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶಶಿಧರ ಶೆಟ್ಟಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಕುಲಪತಿ ಪ್ರೊ.ಶಿವಾನಂದ ಕೆಳಗಿನಮನಿ ಅವರು ಅಧ್ಯಕ್ಷತೆ ವಹಿಸುವರು.

ಮುಖ್ಯ ಅತಿಥಿಗಳಾಗಿ ಹೆಚ್.ಆರ್.ಎ.ಸಿ.ಎಫ್‌ನ ರಾಷ್ಟ್ರೀಯ ಅಧ್ಯಕ್ಷರು ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರಾದ ಡಾ.ಮೋಹನ್‌ರಾವ್ ನಾಲ್ವಡೆ, ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸಾರ್ವಜನಿಕ ಸಂಪರ್ಕ ಅಧಿಕಾರಿ ಪಿ.ಎಂ.ಬಾಲಸುಭ್ರಮಣಿ, ಹಿರಿಯ ಶ್ರೇಣಿಯ ದಿವಾನಿ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಎಚ್.ಎ. ಸಾತ್ವಿಕ್, ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಆಡಳಿತ ವಿಭಾಗದ ಕುಲಸಚಿವರಾದ ಡಾ.ಎ.ಚನ್ನಪ್ಪ, ಆದಿಕವಿ ಶ್ರೀಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಮೌಲ್ಯಮಾಪನ ವಿಭಾಗದ ಕುಲಸಚಿವರಾದ ಪ್ರೊ. ಜ್ಯೋತಿ ದಮ್ಮ ಪ್ರಕಾಶ್, ಹೆಚ್.ಆರ್.ಎ.ಸಿ.ಎಫ್ ಮತ್ತು ಎ.ಎಸ್.ಎಮ್.ವಿ ಯುನಿವರ್ಸಿಟಿ ಲಿಗಲ್ ಅವಾರ್ನೆಸ್ ಕಮೀಟಿಯ ಕಾನೂನು ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ.ರಾಜಾಶಂಕರ, ಹೆಚ್.ಆರ್.ಎ.ಸಿ.ಎಫ್ ಮತ್ತು ಹೆಚ್.ಆರ್.ಎ.ಸಿ.ಎಫ್ ಮತ್ತು ಎ.ಎಸ್.ಎಮ್.ವಿ ಯುನಿವರ್ಸಿಟಿ ಲಿಗಲ್ ಅವಾರ್ನೆಸ್ ಕಮೀಟಿಯ ಸಹ ಅಧ್ಯಕ್ಷರು ಹಾಗೂ ಪ್ರಾಧ್ಯಾಪಕರಾದ ಪ್ರೊ.ಪ್ರಾಣೇಶ ಕುಲಕರ್ಣಿ, ಕಲಬು ರಗಿ ವಕೀಲರ ಸಂಘದ ಮಾಜಿ ಅಧ್ಯಕ್ಷರು ಹಾಗೂ ಹಿರಿಯ ನ್ಯಾಯವಾದಿಗಳಾದ ಅರುಣ್ ಕುಮಾರ ಬಿ.ಕಿನ್ನಿ, ಹುಬ್ಬಳ್ಳಿ ನೈರುತ್ಯ ವಲಯದ ಕಾನೂನು ಸಲಹೆಗಾರರು ಮತ್ತು ರಾಯಚೂರಿನ ಮಾಜಿ ಪಬ್ಲಿಕ್ ಪ್ರಾಸಿಕ್ಯೂಟರ್ ಹಾಗೂ ಹಿರಿಯ ನ್ಯಾಯವಾದಿಗಳಾದ ಶಿವಶಂಕರ ಎನ್. ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

# ಪ.ಪಂ ಮೇಲ್ದರ್ಜೆಗೆ ನನ್ನ ಪರಿಶ್ರಮ: ಚವ್ಹಾಣ

ಮಲ್ಲಮ್ಮ ನುಡಿ ವಾರ್ತೆ



ಕಮಲನಗರ: ಕಮಲನಗರ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಲು ಸಚಿವ ಸಂಪುಟ ಒಪ್ಪಿಗೆ ನೀಡಿದ್ದು, ನನ್ನ ಪರಿಶ್ರಮಕ್ಕೆ ಫಲ ಸಿಕ್ಕಿದೆ ಎಂದು ಶಾಸಕರಾದ ಪ್ರಭು.ಬಿ ಚವ್ಹಾಣ ಅವರು ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ಹೊರಡಿಸಿರುವ ಅವರು, ಗಡಿ ಭಾಗದಲ್ಲಿರುವ ಕಮಲನಗರದ ಸಮಗ್ರ ಅಭಿವೃದ್ಧಿಗೆ ಪಣ ತೊಟ್ಟಿರುವ ನಾನು ಶಾಸಕನಾದ ನಂತರ ಸಾಕಷ್ಟು ಅಭಿವೃದ್ಧಿ ಕೆಲಸಗಳನ್ನು ಕೈಗೊಂಡಿದ್ದೇನೆ. ಹಿಂದೆ ಇಲ್ಲಿನ ಜನತೆ ಕಛೇರಿ ಕೆಲಸಗಳಿಗೆ ಔರಾದಗೆ ಹೋಗಬೇಕಿತ್ತು. ಗ್ರಾಮೀಣ ಜನತೆಗೆ ಸಾಕಷ್ಟು ಅನಾನುಕೂಲ ಆಗುತ್ತಿತ್ತು. ಇದನ್ನು ತಪ್ಪಿಸಿ ಅಭಿವೃದ್ಧಿಗೆ ಹೊಸ ಆಯಾಮ ನೀಡುವ ಉದ್ದೇಶದಿಂದ ಬಹಳಷ್ಟು ಪ್ರಯತ್ನಪಟ್ಟು ಹೊಸ ತಾಲ್ಲೂಕು ಕೇಂದ್ರವನ್ನಾಗಿ ಮಾಡುವಲ್ಲಿ ಯಶಸ್ವಿಯಾಗಿದ್ದೇನೆ.

ಪಟ್ಟಣ ಬೆಳೆಯುತ್ತಾ ಹೋದಂತೆ ಜನಸಂಖ್ಯೆಗೆ ಅನುಗುಣವಾಗಿ ಸರ್ಕಾರದ ಸೌಲಭ್ಯಗಳನ್ನು ಜನತೆಗೆ ತಲುಪಿಸಬೇಕು. ಮತ್ತು ಅಭಿವೃದ್ಧಿ ಕೆಲಸಗಳನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಗ್ರಾಮ ಪಂಚಾಯಿತಿಯಿಂದ ಪಟ್ಟಣ ಪಂಚಾಯಿತಿಗೆ ಮೇಲ್ದರ್ಜೆಗೆ ಏರಿಸುವುದು ಅತ್ಯಂತ ಅವಶ್ಯಕವಾಗಿತ್ತು.

ಆದ್ದರಿಂದ ಮುಖ್ಯಮಂತ್ರಿಗಳು, ಸಂಬಂಧಪಟ್ಟ ಸಚಿವರು ಮತ್ತು ಅಧಿಕಾರಿಗಳನ್ನು ಪದೇ ಪದೇ ಭೇಟಿಯಾಗಿ ಕಮಲನಗರವನ್ನು ಮೇಲ್ದರ್ಜೆಗೆ ಏರಿಸುವಂತೆ ಮನವಿ ಸಲ್ಲಿಸಿದ್ದೇನೆ. ಅನೇಕ ಪತ್ರಗಳನ್ನು ಬರೆದಿದ್ದೇನೆ. ವಿಧಾನಸಭಾ ಅಧಿವೇಶನದಲ್ಲಿ ಧ್ವನಿ ಎತ್ತಿದ್ದೇನೆ. ನಾನು ಸಚಿವನಾಗಿದ್ದ ಸಂದರ್ಭದಲ್ಲಿ ಕೆಲವು ತಾಂತ್ರಿಕ ಕಾರಣಗಳಿಂದ ವಿಳಂಬವಾಗಿತ್ತು. ಈಗ ಎಲ್ಲ ತೊಡಕುಗಳನ್ನು ಸರಿಪಡಿಸಲಾಗಿದೆ.

ಕೆಲ ದಿನಗಳ ಹಿಂದೆಯೇ ಮುಖ್ಯಮಂತ್ರಿ ಮತ್ತು ಸಚಿವರನ್ನು ಖುದ್ದಾಗಿ ಭೇಟಿಯಾಗಿ ಕೆಲಸ ಶೀಘ್ರ ಮಾಡಿಕೊಡುವಂತೆ ಮನವಿ ಸಲ್ಲಿಸಿದ್ದೆ. ನನ್ನ ಮನವಿಗೆ ಸ್ಪಂದಿಸಿ ಸರ್ಕಾರವು ಕಮಲನಗರ ಗ್ರಾಮ ಪಂಚಾಯಿತಿಯನ್ನು

ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಲು ನಿರ್ಣಯಿಸಿದೆ. ನನ್ನ ಬೇಡಿಕೆಗೆ ಸ್ಪಂದಿಸಿದ ಮುಖ್ಯಮಂತ್ರಿಗಳು, ಪೌರಾಡಳಿತ ಮತ್ತು ಜಿಲ್ಲಾ ಉಸ್ತುವಾರಿ ಸಚಿವರಿಗೆ ಕಮಲನಗರ ಮಹಾಜನತೆಯ ಪರವಾಗಿ ಧನ್ಯವಾದ ಸಲ್ಲಿಸುತ್ತೇನೆ. ಕಮಲನಗರದ ಸರ್ವಾಂಗೀಣ ಅಭಿವೃದ್ಧಿಗಾಗಿ ನಿರಂತರ ಶ್ರಮ ವಹಿಸುತ್ತಿದ್ದು, ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗುತ್ತಿದೆ. ನೂತನ ಪ್ರಜಾಸೌಧ ನಿರ್ಮಾಣ ಕೆಲಸಕ್ಕೆ ಚಾಲನೆ ನೀಡಿದ್ದು, ಕರ್ನಾಟಕ ಪಬ್ಲಿಕ್ ಶಾಲೆ, ಸರ್ಕಾರಿ ಐಟಿಐ ಕಾಲೇಜು, ವಸತಿ ಶಾಲೆ, ಅಗ್ನಿಶಾಮಕ ಠಾಣೆ ಸೇರಿದಂತೆ ಹತ್ತು ಹಲವು ಅಭಿವೃದ್ಧಿ ಕೆಲಸಗಳಾಗುತ್ತಿವೆ. ಮುಂದಿನ ದಿನಗಳಲ್ಲಿ ಅನುದಾನ ಹೆಚ್ಚಳವಾಗಿ ವಾರ್ಡ್ ವಾರು ಅಭಿವೃದ್ಧಿ ಕೆಲಸಗಳನ್ನು ಕೈಗೊಳ್ಳಲು ನೆರವಾಗಲಿದೆ. ಕಮಲನಗರವನ್ನು ಮಾದರಿ ಪಟ್ಟಣವಾಗಿಸುವ ಸಂಕಲ್ಪ ಸಾಕಾರಗೊಳ್ಳಲಿದೆ ಎಂದು ಶಾಸಕರು ತಿಳಿಸಿದ್ದಾರೆ.

## ಮಕ್ಕಳ ರಕ್ಷಣಾ ಕಾಯ್ದೆಗಳ ಕುರಿತು ಒಂದು ದಿನದ ತರಬೇತಿ ಕಾರ್ಯಗಾರ

# ಮಕ್ಕಳ ರಕ್ಷಣೆ, ಸುರಕ್ಷತೆ ನಮ್ಮೆಲ್ಲರ ಜವಾಬ್ದಾರಿ: ವೆಂಕಟೇಶ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ನವೆಂಬರ್ 13 : ಮಕ್ಕಳು ದೇಶದ ಆಸ್ತಿ, ಅವರ ರಕ್ಷಣೆ, ಸುರಕ್ಷತೆ ನಮ್ಮೆಲ್ಲರ ಜವಾಬ್ದಾರಿಯಾಗಿದ್ದು, ಈ ದಿಶೆಯಲ್ಲಿ ಮಕ್ಕಳ ಹಕ್ಕುಗಳನ್ನು ಸುಲಭವಾಗಿ ಅನುಷ್ಠಾನಗೊಳಿಸಲು ಕಾಯ್ದೆಗಳನ್ನು ಅರಿತುಕೊಳ್ಳಬೇಕು. ಇದರಿಂದ ಮಕ್ಕಳಿಗೆ ಉತ್ತಮ ಭವಿಷ್ಯ ರೂಪಿಸಿ ಕೊಡಬಹುದಾಗಿದೆ ಎಂದು ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಸದಸ್ಯರಾದ ವೆಂಕಟೇಶ ಅವರು ಹೇಳಿದರು.

ಬೆಂಗಳೂರಿನ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ನಗರದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನವೆಂಬರ್ 13ರಂದು ನಡೆದ ಬಾಲನ್ಯಾಯ (ಪೋಷಣೆ ಮತ್ತು ರಕ್ಷಣೆ) ಕಾಯ್ದೆ–2015, ಬಾಲ್ಯವಿವಾಹ ನಿಷೇಧ ಕಾಯ್ದೆ–2006, ಪೋಕ್ಸ ಕಾಯ್ದೆ–2012 ಹಾಗೂ ದತ್ತು ನಿಯಾಮವಳಿಗಳು–2022ರ ಕುರಿತು ಒಂದು ದಿನದ ತರಬೇತಿ ಕಾರ್ಯಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮಲ್ಲಿರುವ ಕಾನೂನುಗಳು ಮಾನವೀಯ ಮೌಲ್ಯಗಳಿಂದ ಕೂಡಿವೆ. ಡಾ.ಬಿ.ಆರ್.ಅಂಬೇಡ್ಕರ್ ಅವರು ಹೇಳುವಂತೆ ಕಾನೂನುಗಳ ಸಮರ್ಪಕ ಅನುಷ್ಠಾನವು ನಮ್ಮಲ್ಲಿನ ಇಚ್ಛಾಶಕ್ತಿಯ ಮೇಲೆ ನಿಂತಿದೆ ಎಂದು ತಿಳಿಸಿದರು.

ಬಾಲ್ಯ ವಿವಾಹ, ಭಿಕ್ಷಾಟನೆ, ಲೈಂಗಿಕ ದೌರ್ಜನ್ಯದಂತಹ ಪ್ರಕರಣಗಳು ಜಿಲ್ಲೆಯಲ್ಲಿ ಶೂನ್ಯಕ್ಕಿಳಿಯುವ ದಿಶೆಯಲ್ಲಿ ಪ್ರತಿಯೊಬ್ಬರು ಜವಾಬ್ದಾರಿಯಿಂದ ಕೆಲಸ ಮಾಡಬೇಕಿದೆ ಎಂದು ಹೇಳಿದರು.

ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಯು ಕೇವಲ ಒಂದು ದಿನ ಅಥವಾ ಸಹಾಯವಾಣಿ ಕರೆಗಳು ಬಂದಾಗ ಮಾತ್ರ ಕಾರ್ಯಾಚರಣೆ ನಡೆಸಬಾರದು. ನಿತ್ಯ ಕಾರ್ಯಾಚರಣೆಯಲ್ಲಿ ತೊಡಗಿಕೊಳ್ಳಬೇಕು. ಮಕ್ಕಳ ರಕ್ಷಣೆಯ ಜವಾಬ್ದಾರಿಯು ಪೊಲೀಸ್ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಗೆ ಸಂಬಂಧಿಸಿದ್ದಾಗಿ ಎಂದು ಯಾರು ತಿಳಿಯಬಾರದು. ಮಕ್ಕಳ ರಕ್ಷಣೆಗೆ ಬೇರೆ ಬೇರೆ ಇಲಾಖೆಗಳು ಸಹ ಕೈಜೋಡಿಸಬೇಕು. ಮುಖ್ಯವಾಗಿ ಸಾರ್ವಜನಿಕರು ಸಹಕಾರ ನೀಡಬೇಕೆಂದರು.



ಈ ವೇಳೆ ಸಂಪನ್ಮೂಲ ವ್ಯಕ್ತಿಗಳಾಗಿ ಬೆಂಗಳೂರಿನ ಸಿ.ಐ.ಡಿ. ಕಚೇರಿಯ ಪೊಲೀಸ್ ತರಬೇತುದಾರರಾದ ರೋಹಿತ್ ಸಿ.ಜೆ. ಅವರು ಮಾತನಾಡಿ, ಮಕ್ಕಳ ವಲಸೆ, ಗುಳೆ, ಮಕ್ಕಳ ಸಾಗಾಣಿಕೆ, ಮಕ್ಕಳ ಬಿಕ್ಷಾಟನೆ ನಿರ್ಮೂಲನೆ, ಪೊಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇಧ ಕಾಯ್ದೆ, ಬಾಲ ನ್ಯಾಯ ಕಾಯ್ದೆ–2015, ಪೋಕ್ಸೋ, ಬಾಲ್ಯ ವಿವಾಹ ನಿಷೇಧ ಕಾಯ್ದೆ, ಮಕ್ಕಳ ಬಿಕ್ಷಾಟನೆ ನಿರ್ಮೂಲನೆ ಕುರಿತು ಮಾಹಿತಿ ನೀಡಿದರು.

ಭಿಕ್ಷಾಟನೆ ಮಾಡುತ್ತಿರುವ ಮಕ್ಕಳು, ಬಾಲ ಕಾರ್ಮಿಕ ಮಕ್ಕಳು, ಕಾಣೆಯಾದ ಮಕ್ಕಳು, ಒಂಟಿ ಮಕ್ಕಳು, ಮಾದಕ ವ್ಯಸನಿ, ಬಾಲ್ಯ ವಿವಾಹ, ಲೈಂಗಿಕ ದೌರ್ಜನ್ಯ, ಹಿಂಸೆ ಮತ್ತು ಅತ್ಯಾಚಾರ, ಶಿಕ್ಷಣ ವಂಚಿತ ಮಕ್ಕಳು ಕಂಡು ಬಂದಲ್ಲಿ ತಕ್ಷಣವೇ 1098 ಅಥವಾ 112 ಗೆ ಕರೆ ಮಾಡಬಹುದು ಎಂದು ತಿಳಿಸಿದರು.


ಪ್ರತಿಜ್ಞಾ ವಿಧಿ ಬೋಧನೆ: ಬಾಲನ್ಯಾಯ ಕಾಯ್ದೆ 2015ರ ಸೆಕ್ಷನ್ 81 ರನ್ವಯ ಮಕ್ಕಳನ್ನು ಮಾರಾಟ ಮಾಡಿದವರಿಗೂ ಹಾಗೂ ಮಕ್ಕಳನ್ನು ಕೊಂಡುಕೊಳ್ಳುವವರಿಗೆ 5 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ ಹಾಗೂ 1 ಲಕ್ಷ ರೂ.ಗಳ ದಂಡವನ್ನು ವಿಧಿಸಬಹುದು. ಒಂದು ವೇಳೆ ಅಂತಹ ಪ್ರಕರಣಗಳಲ್ಲಿ ಆಸ್ಪತ್ರೆ ಸಿಬ್ಬಂದಿಯವರು ಶಾಮೀಲಾಗಿದ್ದಲ್ಲಿ 7 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆಯನ್ನು ವಿಧಿಸಲು ಅವಕಾಶ ಕಲ್ಪಿಸಲಾಗಿದೆ. ಈ ನಿಟ್ಟಿನಲ್ಲಿ ಕುಟುಂಬವಿಲ್ಲದ ಮಕ್ಕಳಿಗೆ ಕಾನೂನು ಬದ್ಧವಾಗಿ ಕುಟುಂಬವನ್ನು ಒದಗಿಸುವುದು. ಅನಾಥ,

ಒಪ್ಪಿಸಲ್ಪಟ್ಟ, ನಿರ್ಗತಿಕ ಮತ್ತು ಪರಿತ್ಯಕ್ತ ಮಕ್ಕಳು ಕಂಡು ಬಂದಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ: 1098/112ಗೆ ಕರೆ ಮಾಡುವುದರ ಮುಖಾಂತರ ಮಕ್ಕಳ ಭವಿಷ್ಯತ್ತಿನ ಹಿತಾಸಕ್ತಿಗಾಗಿ

ಎಲ್ಲರೂ ಕೈಜೋಡಿಸಿ ಮಕ್ಕಳನ್ನು ಅನಾಥ ಪ್ರಜ್ಞೆಯಿಂದ ಕಾಪಾಡುವುದರೊಂದಿಗೆ ತಾಯಿತನದ ಹಂಬಲವನ್ನು ನೀಗಿಸೋಣ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ ಅವರು ಪ್ರತಿಜ್ಞಾ ವಿಧಿ ಬೋಧಿಸಿದರು.

ಪೋಸ್ಟರ್ ಬಿಡುಗಡೆ: ಈ ವೇಳೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಬೆಂಗಳೂರು ಇವರ ವತಿಯಿಂದ ದತ್ತು ಪ್ರಕ್ರಿಯೆ ಹಾಗೂ 1098 ಮಕ್ಕಳ ಸಹಾಯವಾಣಿ ಪೋಸ್ಟರ್‌ಗಳನ್ನು ವಿವಿಧ ಗಣ್ಯರಿಂದ ಬಿಡುಗಡೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ಮಕ್ಕಳ ರಕ್ಷಣಾ ಆಯೋಗದ ಜಿಲ್ಲಾ ಸದಸ್ಯರಾದ ಜಯ ಸುಧಾರಾಣಿ, 1ನೇ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಸ್.ಜೆ. ಕುಮಾರಸ್ವಾಮಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ಯು. ನವೀನ್ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಅಮರೇಶ, ಪೊಲೀಸ್ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವಿವಿಧ ಅಧಿಕಾರಿ, ಸಿಬ್ಬಂದಿ ಇದ್ದರು.




ಕಲಬುರಗಿ: ಹುಮನಾಬಾದ್ ರಿಂಗ್ ರಸ್ತೆಯಲ್ಲಿ ಶಹಾ ಹುಂಡೈ ಶೋರೂಂನಲ್ಲಿ ಹುಂಡೈ ಕಂಪನಿಯ ಹೊಸ ಮಾದರಿಯ ಹುಂಡೈ ವೇನ್ಯೂ ನೂತನ ಮಾದರಿ ಕಾರನ್ನು ಕಲಬುರಗಿ ನಗರ ಪೊಲೀಸ್ ಆಯುಕ್ತರಾದ ಡಾ. ಶರಣಪ್ಪ ಎಸ್. ಡಿ ಅವರು ಮಾರುಕಟ್ಟೆಗೆ ಬಿಡುಗಡೆಗೊಳಿಸಿದರು. ಶಹಾ ಗ್ರೂಪ್ ನ ವ್ಯವಸ್ಥಾಪಕ ನಿರ್ದೇಶಕರಾದ ಆನಂದ ಶಹಾ ಹಾಗೂ ಶೋರೂಂ ಸಿಬ್ಬಂದಿವರ್ಗದವರು ಇದ್ದರು.

## ಮೌಲಾನಾ ಆಜಾದ ಶಾಲೆಗಳ ವಿದ್ಯಾರ್ಥಿಗಳಿಗೆ ಶಿಕ್ಷಣದ ಬಗ್ಗೆ ಅರಿವು ಜಾಗೃತಿ ಜಾಥ




ಯಾದಗಿರಿ : ನವೆಂಬರ್ 12, (ಕ.ವಾ) : ಜಿಲ್ಲೆಯಾದ್ಯಂತ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆದಿಂದ ಎಲ್ಲಾ ವಸತಿ ಶಾಲೆಗಳು ಹಾಗೂ ಮೌಲಾನಾ ಆಜಾದ ಮಾದರಿ ಶಾಲೆಗಳ ವಿದ್ಯಾರ್ಥಿಗಳಿಗೆ ಶಿಕ್ಷಣದ ಬಗ್ಗೆ ಅರಿವು ಮೂಡಿಸಲು ನಗರದ ಓಣಿಗಳಲ್ಲಿ ಹಾಗೂ ರಸ್ತೆಗಳಲ್ಲಿ ಜಾಗೃತಿ ಜಾಥ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು ಎಂದು ಯಾದಗಿರಿ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಶ್ರೀಮತಿ ಭಾಗ್ಯಶ್ರೀ ಕುಂಬಾರ ಅವರು ಹೇಳಿದರು.

ನಗರದ ನ.11 ರಂದು ಮೌಲಾನಾ ಅಬುಲ್ ಕಲಾಂ ಆಜಾದ ರವರ ಜನ್ಮ ದಿನಾಚಾರಣೆ-ಯ ಅಂಗವಾಗಿ ರಾಷ್ಟ್ರೀಯ ಶಿಕ್ಷಣ ದಿನಾಚರಣೆ ನಿಮಿತ್ಯ ಯಾದಗಿರಿ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಹಾಗೂ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರದಿಂದ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾದಗಿರಿ ಮೌಲಾನಾ ಆಜಾದ ಮಾದರಿ ಶಾಲೆದಿಂದ ರಾಷ್ಟ್ರೀಯ ಶಿಕ್ಷಣ ದಿನಾಚರಣೆಯನ್ನು ಮುಖ್ಯ ಅತಿಥಿಗಳಾಗಿ ಪ್ರಧಾನ ಮಂತ್ರಿಗಳ 15 ಅಂಶಗಳ ಜಾರಿಗೊಳಿಸಿದೆ.

ಈ ಸಂದರ್ಭದಲ್ಲಿ ಕಾರ್ಯಕ್ರಮದ ನಾಮ ನಿರ್ದೇಶಿತ ಸದಸ್ಯರುಗಳಾದ, ಶ್ರೀವಹೀದಮಿಯಾ ತಂದೆ ಮೊಹಮ್ಮದ್ ಅಬ್ದುಲ್ ಜೈ, ಶ್ರೀ ಮಾಂಗಿ ಲಾಲ್ ಜೈನ್, ಶ್ರೀ ಇಮ್ಯಾನುವೆಲ್ ಫೆಡರಿಕ್, ಶ್ರೀ ಬಾಲಮಿತ್ರ, ಶ್ರೀ ಸೈಯದ್ ಜೈನುಲ್ ಆಬಿದಿನ್, ಶ್ರೀ ದೀನ್ ಮೊಹಮ್ಮದ್ ಸಲ್ಮಾನ್, ಹಾಗೂ ಶ್ರೀ ಉಮೇಶ ಲಿಂಗದಳ್ಳಿ, ತಾಲೂಕು ಅಲ್ಪಸಂಖ್ಯಾತರ ವಿಸ್ತರಣಾಧಿಕಾರಿಗಳು, ಯಾದಗಿರಿ ಉಪ ವಿಭಾಗ, ಯಾದಗಿರಿ ಮೌಲಾನಾ ಆಜಾದ ಮಾದರಿ ಶಾಲೆ ಮುಖ್ಯೋಪಾಧ್ಯಾಯರು ಶ್ರೀ ತಿರುಪತಿ ಉಪಸ್ಥಿತರಿದ್ದರು.

## ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿ ಎನ್.ಜಿ.ಓ ಗಳಿಂದ ಅರ್ಜಿ ಆಹ್ವಾನ

ಯಾದಗಿರಿ : ನವೆಂಬರ್ 13, (ಕ.ವಾ): ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘವು 2025-26 ನೇ ಸಾಲಿನ ಆರೋಗ್ಯ ಇಲಾಖೆ ಅಂಧತ್ವನಿಯಂತ್ರಣಕಾರ್ಯಕ್ರಮದಡಿ ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಶಿಬಿರ ಹಾಗೂ ಇತರೆ ಕಣ್ಣಿನ ಖಾಯಿಲೆಗಳಿಗೆ ಚಿಕಿತ್ಸಾ ಕಾರ್ಯಕ್ರಮಕ್ಕಾಗಿ ಆಸಕ್ತಿಯುಳ್ಳ ಹಾಗೂ ಅನುಭವವುಳ್ಳ ಅರ್ಹಸ್ವಯಂಸೇವಾಸಂಸ್ಥೆಗಳಿಂದ {ಇಥರಿಡಿಫುಠಟಿ ಠಜಿಌಟಿಣಜಡಿ-ಫಣ] ಇಔಖ ಎನ್.ಜಿ.ಓ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಅವರು ತಿಳಿಸಿದ್ದಾರೆ.

ಹೆಚ್ಚಿನ ಮಾಹಿತಿ ವೆಬ್‌ಸೈಟ್ ಇಠಿಠಿಠಿ.ಇಚಿಡಿಟಿಚಿಣಚಿಇಚಿ. ರಠತ.ಏಟಿ/ತಿಜಭ ಕಠಡಿಣಚಿಟ ನಲ್ಲಿ ಯಾದಗಿರಿ ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ವಿಭಾಗ ಹಾಗೂ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಛೇರಿ ದೂ.ಸಂ.9686781037ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪಂಚ ಗ್ಯಾರಂಟಿ ಯೋಜನೆಗಳ ಜಾಗೃತಿಯ ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿಗಳಿಂದ ಚಾಲನೆ

ಯಾದಗಿರಿ : ನವೆಂಬರ್ 13, (ಕ.ವಾ) : ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಎಲ್‌ಇಡಿ ಸಂಚಾರ ವಾಹನಕ್ಕೆ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಇಂದು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ರಾಜ್ಯ ಸರಕಾರವು ಸಾಮಾನ್ಯ ಜನರ ಜೀವನಮಟ್ಟ ಸುಧಾರಣೆಗಾಗಿ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಶಕ್ತಿ ಯೋಜನೆ, ಯುವನಿಧಿ,

ಗೃಹಜ್ಯೋತಿ, ಅನ್ನಭಾಗ್ಯ ಬಗ್ಗೆ ಎಲ್‌ಇಡಿ ವಾಹನ ಹಾಗೂ ಬೀದಿ ನಾಟಕ ತಂಡಗಳು ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.

ಸರ್ಕಾರದ ಯೋಜನೆಗಳ ಲಾಭ ನೇರವಾಗಿ ಜನರಿಗೆ ತಲುಪಬೇಕೆಂಬ ಉದ್ದೇಶದಿಂದ ಎಲ್‌ಇಡಿ ವಾಹನದ ಮೂಲಕ ಅರಿವು ಮೂಡಿಸಲಾಗುತ್ತದ್ದು, ಅರ್ಹ ಫಲಾನುಭವಿಗಳು ಇದರ ಸದುಪಯೋಗಪಡೆಯುವಂತೆ ಕೋರಲಾಗಿದೆ.

ಈ ವಾಹನಗಳು ಜಿಲ್ಲೆಯ ಯಾದಗಿರಿ ಹಾಗೂ ಗುರುಮಠಕಲ್ ತಾಲೂಕಿನ ತಲ 10 ಗ್ರಾಮಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಿದೆ, ಬೀದಿ ನಾಟಕ ತಂಡಗಳು,

ದಿನಕ್ಕೆ 2 ರಂತೆ ಬೀದಿ ನಾಟಕಗಳ ಮೂಲಕ ಅರಿವು ಮೂಡಿಸಲಿವೆ, ಅದರಂತೆ ಎಲ್‌ಇಡಿ ಮೂಲಕವು ಜನರಿಗೆ ಯೋಜನೆಗಳ ವನವರಿಕೆ ಮಾಡಲಾಗುತ್ತದೆ.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು (ಪ್ರ) ಶ್ರೀ ಸುಲೈಮಾನ ಡಿ.ನದಾಫ್, ದತ್ತಾಂಶ ನಮೂದು ಸಹಾಯಕ (ಬೆರಳಚ್ಚುಗಾರರು) ಭೀಮಣ್ಣ ನಾಯಕ, ಸಿಬ್ಬಂದಿ ವಿಜಯಲಕ್ಷ್ಮೀ ಇನ್ನಿತರರು ಉಪಸ್ಥಿತರಿದ್ದರು.

## ಮಕ್ಕಳ ಪ್ರತಿಭೆ ಅನಾವರಣಕ್ಕೆ ಸೂಕ್ತ ವೇದಿಕೆ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಮಕ್ಕಳಲ್ಲಿರುವ ಸುಪ್ತ ಪ್ರತಿಭೆಯನ್ನು ಅನಾವರಣಗೊಳಿಸುವುದೇ ಪ್ರತಿಭಾ ಕಾರಂಜಿ ಕಾರ್ಯಕ್ರಮ ಉದ್ದೇಶವಾಗಿದೆ ಎಂದು ತಾಲೂಕು ಸರಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ ಬನ್ನಾಳೆ ಹೇಳಿದರು.

ತಾಲೂಕಿನ ಕೋನಮೇಳಕುಂದಾ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಆವರಣದಲ್ಲಿ ಬುಧವಾರ ಆಯೋಜಿಸಿದ್ದ 2025-26ನೇ ಸಾಲಿನ ಹಲಬರ್ಗಾ ಕ್ಲಸ್ಟರ್ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸ್ಥಳೀಯ ಜನಪದ ನೃತ್ಯ ಮತ್ತು ಗಾಯನ, ಚಿತ್ರಕಲೆ, ಪ್ರಬಂಧ, ಚರ್ಚಾಸ್ಪರ್ಧೆ, ಏಕಾಪಾತ್ರಾಭಿನಯ, ಸಾಮಾಜಿಕ ಮತ್ತು ಪೌರಾಣಿಕ ನಾಟಕಗಳು ಅನೇಕ ಕಲಾತ್ಮಕ ಸಾಂಸ್ಕೃತಿಕ ಚಟುವಟಿಕೆಗಳು ಪ್ರತಿಭಾ ಕಾರಂಜಿ ವ್ಯಾಪ್ತಿಯಲ್ಲಿ ಬರುವುದರಿಂದ ಕಾರ್ಯಕ್ರಮದಲ್ಲಿ ಭಾಗವಹಿಸುವುದರ ಜತೆಗೆ ಮಕ್ಕಳಲ್ಲಿ ಕಲಾಭಿರುಚಿಯ ಸಾಮರ್ಥ್ಯವನ್ನು ಸಾಬೀತು ಮಾಡಲು ಇದೊಂದು ಉತ್ತಮ ವೇದಿಕೆ ಎಂದು ತಿಳಿಸಿದರು

ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಮಾತನಾಡಿ, ಪ್ರತಿಭಾ ಕಾರಂಜಿ ಎಂಬುದು ಕಲಾ ಪ್ರತಿಭೆಗಳ ಚಿಣ್ಣರ ಹಬ್ಬ, ಪೋಷಕರಿಗಲ್ಲದೆ ಸಾರ್ವಜನಿಕರು ಖುಷಿ ಪಡುವ ಹಬ್ಬ. ಮಕ್ಕಳ ಪ್ರತಿಭೆಯನ್ನು ತಂದೆ ತಾಯಿಗಳು ಹತ್ತಿರದಿಂದ ಕಣ್ತುಂಬಿಕೊಳ್ಳುವ ವೇದಿಕೆಯಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿ ಅಧ್ಯಕ್ಷ ಸಂತೋಷ ಮಾನಕಾರ್, ಅಭಿವೃದ್ಧಿ ಅಧಿಕಾರಿ ವಿಶ್ವಶಾಲಾ, ಎಸ್‌ಡಿಎಂಸಿ ಅಧ್ಯಕ್ಷ ರೇವಣಸಿದ್ದಯ್ಯಸ್ವಾಮಿ, ಸಮೂಹ ಸಂಪನ್ಮೂಲ ವ್ಯಕ್ತಿ ಭುವನೇಶ್ವರ್, ದಾನಿಗಳಾದ ಶಂಕರ, ಬಸಪ್ಪ, ಶಿವಕಾಂತ, ಸೂರ್ಯಕಾಂತ ಮಾಳಿಗೆ, ಲತಾ, ಲಕ್ಷ್ಮಿ ಸೇರಿದಂತೆ ಹಲವರು ಇದ್ದರು.

ಮುಖ್ಯಶಿಕ್ಷಕಿ ಅನ್ನಪೂರ್ಣ ಸಿ.ಎಸ್ ಸ್ವಾಗತಿಸಿದರು. ನಾಗಶೆಟ್ಟಿ ಬಿರಾದಾರ್ ನಿರೂಪಿಸಿದರು. ಅನಿಲಕುಮಾರ್ ಬಿರಾದಾರ್ ವಂದಿಸಿದರು.

## ಸಾದಾ ಪರಿವಾರದ ನಾಮಕರಣ ಸಮಾರಂಭದಲ್ಲಿ ಅಸ್ಲಾಂಮಿಯಾ ಭಾಗಿ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ತಾಲೂಕಿನ ಮುಸ್ತರಿ ಗ್ರಾಮದ ಹೇಮಾವತಿ ಶ್ರೀಶೈಲ ಸಾದಾ ದಂಪತಿಗಳ ಸುಪುತ್ರನ ನಾಮಕರಣ ಕಾರ್ಯಕ್ರಮದಲ್ಲಿ ಪಟ್ಟಣದ ಸಮಾಜ ಕಾರ್ಯಕರ್ತ ಮಹಮ್ಮದ್ ಅಸ್ಲಾಂಮಿಯಾ ಭಾಗವಹಿಸಿ ಶುಭ ಹಾರೈಸಿದರು. ಈ ಸಂದರ್ಭದಲ್ಲಿ ರಾಜಕುಮಾರ್ ಆರ್. ಹಡಪದ, ಉದಯಕುಮಾರ ತಂಗಾ, ಶ್ರೀಕಾಂತ ಭಟ್, ಶೈಲೇಶ, ರಮೇಶ ಬಿರಾದಾರ್, ಮಹಮ್ಮದ್ ಮಧರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಪಂಚ ಗ್ಯಾರಂಟಿ ಯೋಜನೆಗಳ ಜಾಗೃತಿಯ ಸಂಚಾರಿ ವಾಹನಕ್ಕೆ ಜಿಲ್ಲಾಧಿಕಾರಿಗಳಿಂದ ಚಾಲನೆ




ಯಾದಗಿರಿ : ನವೆಂಬರ್ 13, : ರಾಜ್ಯ ಸರ್ಕಾರದ ಮಹತ್ವಾಕಾಂಕ್ಷಿ ಪಂಚ ಗ್ಯಾರಂಟಿ ಯೋಜನೆಗಳ ಕುರಿತು ಜಾಗೃತಿ ಮೂಡಿಸುವ ಎಲ್‌ಇಡಿ ಸಂಚಾರ ವಾಹನಕ್ಕೆ ಜಿಲ್ಲಾಧಿಕಾರಿ ಶ್ರೀ ಹರ್ಷಲ್ ಭೋಯರ್ ಅವರು ಇಂದು ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ರಾಜ್ಯ ಸರಕಾರವು ಸಾಮಾನ್ಯ ಜನರ ಜೀವನಮಟ್ಟ ಸುಧಾರಣೆಗಾಗಿ ಪಂಚ ಗ್ಯಾರಂಟಿ ಯೋಜನೆಗಳಾದ ಗೃಹಲಕ್ಷ್ಮೀ, ಶಕ್ತಿ ಯೋಜನೆ, ಯುವನಿಧಿ, ಗೃಹಜ್ಯೋತಿ, ಅನ್ನಭಾಗ್ಯ ಬಗ್ಗೆ ಎಲ್‌ಇಡಿ ವಾಹನ ಹಾಗೂ ಬೀದಿ ನಾಟಕ ತಂಡಗಳು ಮೂಲಕ ಜಾಗೃತಿ ಮೂಡಿಸಲಾಗುತ್ತಿದೆ.

ಸರ್ಕಾರದ ಯೋಜನೆಗಳ ಲಾಭ ನೇರವಾಗಿ ಜನರಿಗೆ ತಲುಪಬೇಕೆಂಬ ಉದ್ದೇಶದಿಂದ ಎಲ್‌ಇಡಿ ವಾಹನದ ಮೂಲಕ ಅರಿವು ಮೂಡಿಸಲಾಗುತ್ತದ್ದು, ಅರ್ಹ ಫಲಾನುಭವಿಗಳು ಇದರ ಸದುಪಯೋಗಪಡೆಯುವಂತೆ ಕೋರಲಾಗಿದೆ.

ಈ ವಾಹನಗಳು ಜಿಲ್ಲೆಯ ಯಾದಗಿರಿ ಹಾಗೂ ಗುರುಮಠಕಲ್ ತಾಲೂಕಿನ ತಲ 10 ಗ್ರಾಮಗಳಲ್ಲಿ ಸಂಚರಿಸಿ ಜಾಗೃತಿ ಮೂಡಿಸಲಿದೆ, ಬೀದಿ ನಾಟಕ ತಂಡಗಳು, ದಿನಕ್ಕೆ 2 ರಂತೆ ಬೀದಿ ನಾಟಕಗಳ ಮೂಲಕ ಅರಿವು ಮೂಡಿಸಲಿವೆ, ಅದರಂತೆ ಎಲ್‌ಇಡಿ ಮೂಲಕವು ಜನರಿಗೆ ಯೋಜನೆಗಳ ವನವರಿಕೆ ಮಾಡಲಾಗುತ್ತದೆ.

ಈ ಸಂದರ್ಭದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಿರಿಯ ಸಹಾಯಕ ನಿರ್ದೇಶಕರು (ಪ್ರ) ಶ್ರೀ ಸುಲೈಮಾನ ಡಿ.ನದಾಫ್, ದತ್ತಾಂಶ ನಮೂದು ಸಹಾಯಕ (ಬೆರಳಚ್ಚುಗಾರರು) ಭೀಮಣ್ಣ ನಾಯಕ, ಸಿಬ್ಬಂದಿ ವಿಜಯಲಕ್ಷ್ಮೀ ಇನ್ನಿತರರು ಉಪಸ್ಥಿತರಿದ್ದರು.

## ವಿದ್ಯುತ್ ವ್ಯತ್ಯಯ ಉಂಟಾಗಲಿದೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ನವೆಂಬರ್ 13, : 110ಕೆವಿ ಹತ್ತಿಗೂಡೂರುದಿಂದ ದೇವಾಪೂರ ಮಾರ್ಗದ ಇನ್ಸೂಲೇಟರ್‌ಗಳನ್ನು ಬದಲಾಯಿಸುವ ಹಿನ್ನೆಲೆ 110 ಕೆವಿ ವಿದ್ಯುತ್ ಕೇಂದ್ರದಿಂದ ಹೊರ ಹೊಗುವ ಎಲ್ಲಾ 11/33 ಕೆವಿ ಮಾರ್ಗಗಳು ಹಾಗೂ ಐಪಿಪಿ ಮಾರ್ಗಗಳ ವಿದ್ಯುತ್ ಸಂಪರ್ಕವನ್ನು 2025ರ ನವೆಂಬರ್ 15ರ ಶನಿವಾರ ರಂದು ಬೆಳಿಗ್ಗೆ 10 ರಿಂದ ಸಂಜೆ 5 ಗಂಟೆಯ ವರೆಗೆ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಸುರಪುರ ಗುಲಬರ್ಗಾ ವಿದ್ಯುತ್ ಸರಬರಾಜು ಕಂಪನಿ ನಿಯಮಿತ ಕಾರ್ಯ ಮತ್ತು ಪಾಲನಾ ವಿಭಾಗ ಕಾರ್ಯನಿರ್ವಾಹಕ ಅಭಿಯಂತರರು (ವಿ) ಅವರು ತಿಳಿಸಿದ್ದಾರೆ.

ಕಾಮಗಾರಿ ಪದೇ ಪದೇ 110ಕೆವಿ ಮಾರ್ಗವು ಟ್ರೀಪ್ ಆಗುವುದನ್ನು ತಡೆಗಟ್ಟಲು ಬರ್ಡ್ ಗೈರ್ಡ್ಸ್ ಅಳವಡಿಸುವ ಪ್ರಯುಕ್ತ 110ಕೆವಿ ಹತ್ತಿಗೂಡೂರು ದೇವಾಪೂರ ವಿದ್ಯುತ್ ಮಾರ್ಗದ ಕಡಿತಗೊಳಿಸಲಾಗುವುದು. 110/33/11 ಕೆವಿ ವಿದ್ಯುತ್ ವಿತರಣಾ ಕೇಂದ್ರ ಸುರಪುರ. 110/33/11ಕೆವಿ ವಿದ್ಯುತ್ ವಿತರಣಾ ಕೇಂದ್ರ ದೇವಾಪೂರ, ಮೆ.ಪರಮಪೂಜ್ಯ ಸೋಲಾರ್ ಪ್ರೈವೆಟ್ ಲಿಮಿಟೆಡ್, ಮೆ.ವರದಾ ಸೋಲಾರ್ ಪ್ರೈವೆಟ್ ಲಿಮಿಟೆಡ್, ಎಲ್ಲಾ ಐಪಿಪಿ ಹಾಗೂ ಮಿನಿ ಹೈಡ್ರೋ, ಸುರಪುರ, ರಂಗಂಪೇಠ, ತಿಂಥಣಿ, ದೇವತ್ಕಲ್, ಕಕ್ಕೇರಾ, ಪೇಠಅಮ್ಮಾಪೂರ, ದೇವರಗೋನಾಲ, ಸೂಗೂರು, ಕರ್ನಾಳ, ದೇವಿಕೇರಾ, ಕೃಷ್ಣಾಪೂರ ಹಾಗೂ ಸುತ್ತಮುತ್ತಲಿನ ತಾಂಡಾ, ದೊಡ್ಡಿ, ಗ್ರಾಮಗಳ ಸಾರ್ವಜನಿಕರು ಹಾಗೂ ಗ್ರಾಹಕರು ಜೆಸ್ಕಾಂಗೆ ಸಹಕರಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೃಹತ್ ಆರೋಗ್ಯ ಕಾನೂನು ಸಾಕ್ಷರತಾ ಕಾರ್ಯಕ್ರಮ

ರಾಯಚೂರು ನವೆಂಬರ್ 13 (ಕರ್ನಾಟಕ ವಾರ್ತೆ): ದೇವದಾಸಿ ಪದ್ಧತಿ ನಿರ್ಮೂಲನೆ ವಿಷಯದ ಕುರಿತಂತೆ, ಬೆಂಗಳೂರಿನ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ರಾಯಚೂರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ವಕೀಲರ ಸಂಘ, ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಬೃಹತ್ ಆರೋಗ್ಯ ಶಿಬಿರ ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮವು ನವೆಂಬರ್ 15ರ ಬೆಳಿಗ್ಗೆ 9.30ಕ್ಕೆ ನಗರದ ಪಂಡಿತ ಶ್ರೀ ಸಿದ್ದರಾಮ ಜಂಬಲದಿನ್ನಿ ಜಿಲ್ಲಾ ರಂಗಮಂದಿರದಲ್ಲಿ ನಡೆಯಲಿದೆ.

ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಪೋಷಕರು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ಗೌರವಾನ್ವಿತ ಮುಖ್ಯ ನ್ಯಾಯಮೂರ್ತಿಗಳಾದ ವಿಭು ಬಖ್ರು ಅವರು ಕಾರ್ಯಕ್ರಮ ಉದ್ಘಾಟಿಸುವರು. ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ರಾಯಚೂರು ಆಡಳಿತಾತ್ಮಕ ನ್ಯಾಯಮೂರ್ತಿಗಳಾದ ಗೌರವಾನ್ವಿತ ಎಂ.ಜಿ. ಶುಕುರೆ ಕಮಲ್, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರು ಹಾಗೂ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾದ ಗೌರವಾನ್ವಿತ ಶ್ರೀಮತಿ ನ್ಯಾಯಮೂರ್ತಿ ಅನು ಸಿವರಾಮನ್ ಅವರು ಉಪಸ್ಥಿತಿ ವಹಿಸುವರು.

ಮುಖ್ಯ ಅತಿಥಿಗಳಾಗಿ ಗೌರವಾನ್ವಿತ ರಾಯಚೂರಿನ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಮಾರುತಿ ಬಾಗಡೆ, ಕರ್ನಾಟಕ ಹೈಕೋರ್ಟ್‌ನ ರಿಜಿಸ್ಟ್ರಾರ್ ಜನರಲ್ ಕೆ.ಎಸ್. ಭರತ್ ಕುಮಾರ್, ಜಿಲ್ಲಾಧಿಕಾರಿ ನಿತೀಶ್ ಕೆ., ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹೆಚ್.ಶಶಿಧರ ಶೆಟ್ಟಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಹಾಗೂ ಹಿರಿಯ ಶ್ರೇಣಿ ದಿವಾನಿ ನ್ಯಾಯಾಧೀಶರಾದ ಹೆಚ್.ಎ.ಸಾತ್ವಿಕ್, ವಕೀಲರ ಸಂಘದ ಜಿಲ್ಲಾಧ್ಯಕ್ಷರಾದ ಮಲ್ಲಿಕಾರ್ಜುನ್, ಅಪರ ಜಿಲ್ಲಾಧಿಕಾರಿ ಶಿವಾನಂದ, ಕೆಎಸ್‌ಎಲ್‌ಎಸ್‌ಎದ ಉಪ ಕಾರ್ಯದರ್ಶಿ ಶ್ರೀಧರ ಎಂ ಅವರು ಉಪಸ್ಥಿತರಿರುವರು.

ಗೋಷ್ಠಿಗಳು: ನವೆಂಬರ್ 15ರಂದು ಜಿಲ್ಲಾ ರಂಗಮಂದಿರದಲ್ಲಿ ನಡೆಯುವ ಬೃಹತ್ ಆರೋಗ್ಯ ಶಿಬಿರ ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮದಲ್ಲಿ ಬೆಳಗ್ಗೆ 11.45 ರಿಂದ ನಾಲ್ಕು ಗೋಷ್ಠಿಗಳು ನಡೆಯಲಿವೆ. ಬೆಳಿಗ್ಗೆ 11.45 ರಿಂದ ಮಧ್ಯಾಹ್ನ 12.15ರವರೆಗೆ ನಡೆಯಲಿರುವ 1ನೇ ಗೋಷ್ಠಿಯಲ್ಲಿ 'ಕಾನೂನು ಜ್ಞಾನದ ಮಹತ್ವ' ವಿಷಯದ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಪುಟ್ಟಮಾದಯ್ಯ ಅವರು ಉಪನ್ಯಾಸ ನೀಡುವರು. ಮಧ್ಯಾಹ್ನ 12.16 ರಿಂದ ಮಧ್ಯಾಹ್ನ 12.45ರವರೆಗೆ ನಡೆಯಲಿರುವ ಎರಡನೇ ಗೋಷ್ಠಿಯಲ್ಲಿ 'ದೇವದಾಸಿ ಮಹಿಳೆಯರಿಗೆ ಸರ್ಕಾರದ ವಿವಿಧ ಸೌಲಭ್ಯಗಳು' ವಿಷಯದ ಮೇಲೆ ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನ 12.46 ರಿಂದ ಮಧ್ಯಾಹ್ನ 01.15ರವರೆಗೆ ನಡೆಯಲಿರುವ ಮೂರನೇ ಗೋಷ್ಠಿಯಲ್ಲಿ 'ದೇವದಾಸಿ ಮಹಿಳೆಯರು ಮತ್ತು ಅವರ ಕುಟುಂಬದವರಿಗೆ ಸರ್ಕಾರದ ವಿವಿಧ ಯೋಜನೆಗಳು ಮತ್ತು ಅನುಕೂಲತೆಗಳು' ವಿಷಯದ ಮೇಲೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಅವರು ಉಪನ್ಯಾಸ ನೀಡಲಿದ್ದಾರೆ. ಮಧ್ಯಾಹ್ನ 1.16 ರಿಂದ ಮಧ್ಯಾಹ್ನ 1.45ರವರೆಗೆ ನಡೆಯಲಿರುವ ನಾಲ್ಕನೇ ಗೋಷ್ಠಿಯಲ್ಲಿ 'ದೇವದಾಸಿ ಮಹಿಳೆಯರು ಮತ್ತು ಅವರ ಹೋರಾಟದ ಹಕ್ಕುಗಳು' ವಿಷಯದ ಮೇಲೆ ಸಂಪನ್ಮೂಲ ವ್ಯಕ್ತಿ ಶ್ರೀಮತಿ ಮೋಕ್ಷಮ್ಮ ಅವರು ಉಪನ್ಯಾಸ ನೀಡಲಿದ್ದಾರೆ.

## ಜಿಲ್ಲಾಧಿಕಾರಿ ನೇತೃತ್ವದ ಸಭೆ ವಿಫಲ ಕಬ್ಬಿಗೆ ರೂ.3,300 ದರದ ಒತ್ತಾಯ, ರೈತರ ಧರಣಿ



ಬೀದರ್: ಸರ್ಕಾರ ಘೋಷಿಸಿರುವ ಪ್ರತಿ ಟನ್ ಕಬ್ಬಿಗೆ ರೂ.3,300 ದರವನ್ನು ಬೀದರ್ ಜಿಲ್ಲೆಯಲ್ಲಿ ಕೂಡ ಜಾರಿಗೆ ತರಬೇಕೆಂದು ಆಗ್ರಹಿಸಿ, ರೈತ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಪ್ರವಾಸಿ ಮಂದಿರದ ಎದುರು ರೈತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತ ಧರಣಿ ನಡೆಸಿದರು.

ಕಬ್ಬು ಬೆಲೆ ನಿಗದಿ ಕುರಿತು ಇಂದು ಜಿಲ್ಲಾಧಿಕಾರಿ ನೇತೃತ್ವದಲ್ಲಿ ನಡೆದ ಸಭೆ ವಿಫಲವಾಗಿದೆ. "ರೈತರ ಕಣ್ಣೀರು ಒರೆಸುವ ಕೆಲಸ ಆಡಳಿತದಿಂದ ಆಗಬೇಕು, ಕಣ್ಣೊರೆಸುವ ನಾಟಕ ಬೇಡ" ಎಂದು ರೈತ ನಾಯಕರು ಖಂಡಿಸಿದರು.

ಅತಿವೃಷ್ಟಿಯಿಂದ ಮುಂಗಾರಿನ ಪ್ರಮುಖ ಬೆಳೆಗಳು ಹಾನಿಗೊಳಗಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಪ್ರಸ್ತುತ ಜಿಲ್ಲೆಯ ಸುಮಾರು 50 ಸಾವಿರ ಎಕರೆಯಲ್ಲಿ ಕಬ್ಬು ಬೆಳೆ ಬೆಳೆಯಲಾಗಿದ್ದು, 15 ಲಕ್ಷ ಟನ್‌ಗಳಿಗಿಂತ ಅಧಿಕ ಉತ್ಪಾದನೆ ನಿರೀಕ್ಷೆಯಿದೆ. ಈ ಪರಿಸ್ಥಿತಿಯಲ್ಲಿ ರೈತರಿಗೆ ನ್ಯಾಯಯುತ ಬೆಲೆ ನೀಡಬೇಕು ಎಂದು ಆಗ್ರಹಿಸಲಾಗಿದೆ.

ರೈತ ಸಂಘಟನೆಗಳು 2025-26ನೇ ಸಾಲಿನ ಕಬ್ಬು ಬೆಲೆ ಪ್ರತಿ ಟನ್‌ಗೆ ಕನಿಷ್ಠ ರೂ.3,300 ನಿಗದಿಪಡಿಸಲು ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಕಡ್ಡಾಯವಾಗಿ ಪಾವತಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಬೇಡಿಕೊಂಡಿವೆ.

ಧರಣಿಯಲ್ಲಿ ರೈತ ಮುಖಂಡರಾದ ಮಲ್ಲಿಕಾರ್ಜುನ ಸ್ವಾಮಿ, ಸಿದ್ರಾಮಪ್ಪಾ ಆಣದೂರೆ, ಶ್ರೀಮಂತ ಬಿರಾದಾರ, ದಯಾನಂದ ಸ್ವಾಮಿ, ಶಂಕರೆಪ್ಪಾ ಮರ್ಕಲ್, ಕೊಂಡಿಬಾ ಪಾಂಡ್ರೆ, ಶಿವರಾಜ ಪಾಟೀಲ್, ಬಾಬು ಹೊನ್ನಾ, ನಜೀರ್ ಅಹ್ಮದ್ ಚೊಂಡಿ, ಪ್ರಕಾಶ ಬಾವುಗೆ, ಶಾಂತಮ್ಮ ಮೂಲಗೆ, ಶಿವಲೀಲಾ ಹೋಳಸಮುದ್ರ, ವಿಜಯಕುಮಾರ ಬಾವುಗೆ, ವೀರಾ-ರೆಡ್ಡಿ, ವಿಠಲ್ ರಾವ, ನಾಗಶೆಟ್ಟಿ, ಭೀಮರಾವ, ಖಮರ ಪಟೇಲ್ ಸೇರಿದಂತೆ ಅನೇಕ ರೈತ ನಾಯಕರು ಉಪಸ್ಥಿತರಿದ್ದರು.

## ಬಾಗಲಕೋಟೆಯಲ್ಲಿ ನ.15-16 ನಾದಬ್ರಹ್ಮ ವಿಠ್ಠಲೋತ್ಸವ ಆಚರಣೆ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.13-ಹರಿದಾಸ ಶ್ರೀ ಪ್ರಸನ್ ವೆಂಕಟದಾಸರ ಹುಟ್ಟೂರಾದ ಬಾಗಲಕೋಟೆಯಲ್ಲಿ ಪೂರ್ಣಪ್ರಜ್ಞ ಯುವಕ ಮಂಡಳಿ ವತಿಯಿಂದ ನ.15 ಮತ್ತು 16 ರಂದು ವಿದ್ಯಾಗಿರಿ ವಿಪ್ರ ರಾಯರ ಮಠದಲ್ಲಿ ನಾದಬ್ರಹ್ಮ ವಿಠ್ಠಲೋತ್ಸವವನ್ನು ವಿಜೃಂಭಣೆಯಿಂದ ಆಚರಿಸಲಾಗುತ್ತಿದೆ ಎಂದು ಪಂಡಿತ ಬಿಂಧುಮಾಧವಾಚಾರ್ಯ ನಾಗಸಂಪಗಿ ತಿಳಿಸಿದರು.

ನಗರದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ನ.15ರಂದು ಶನಿವಾರ ಸಂಜೆ 5 ಗಂಟೆಗೆ ಕೃಷ್ಣಾಜಿ ಕ್ಷತ್ರಿಯ ಅವರ ಶಹನಾಯಿ ವಾದನದೊಂದಿಗೆ ಕಾರ್ಯಕ್ರಮ ಆರಂಭವಾಗಲಿದ್ದು, ಕೂಡಲಿ ಆರ್ಯ ಅಕ್ಷೋಭ್ಯತೀರ್ಥ ಮಠದ 1008 ಶ್ರೀ ರಘುವಿಜಯತೀರ್ಥ ಶ್ರೀಪಾದಂಗಳವರ ದಿವ್ಯ ಸಾನ್ನಿಧ್ಯದಲ್ಲಿ ಉತ್ಸವ ಉದ್ಘಾಟನೆ ನಡೆಯಲಿದೆ ಎಂದು ತಿಳಿಸಿದರು.

ಮುಖ್ಯಅತಿಥಿಗಳಾಗಿಡಾ.ರಘೋತ್ತಮಾಚಾರ್ಯ ನಾಗಸಂಪಗಿ, ಭೀಮಸೇನಾಚಾರ್ಯ ನಾಗಸಂಪಗಿ ಮತ್ತು ವಿಜಯೀಂದ್ರಾಚಾರ್ಯ ಯತ್ನಟ್ಟಿ ಆಗಮಿಸಲಿದ್ದು, ವಿದ್ಯಾ ಪ್ರಸಾರಕ ಮಂಡಳಿಯ ಗೌರವಾಧ್ಯಕ್ಷ ಡಾ.ಗಿರೀಶ ಮಾಸೂರಕರ, ಜಿಲ್ಲಾ ಬ್ರಾಹ್ಮಣ ಮಹಾಸಭಾ ಅಧ್ಯಕ್ಷ ನರಸಿಂಹ ಆಲೂರ, ಮಾಧವ ಸೇವಾ ಕೇಂದ್ರದ ಅಧ್ಯಕ್ಷ ನಾಗರಾಜ ಹದ್ಲಿ, ವಿಪ್ರ ಅಭಿವೃದ್ಧಿ ಮಂಡಳಿಯ ಜಿ.ಆರ್.ಕುಲಕರ್ಣಿ ಮುಂತಾದ ಗಣ್ಯರು ಉಪಸ್ಥಿತರಿರಲಿದ್ದಾರೆಂದರು.

ಕಾರ್ಯಕ್ರಮದ ಅಂಗವಾಗಿ ನಟರಾಜ ಸಂಗೀತ ನೃತ್ಯ ನಿಕೇತನ ವತಿಯಿಂದ ನೃತ್ಯ ರೂಪಕ, ನಂತರ ಪದ್ಮಶ್ರೀ ವೆಂಕಟೇಶಕುಮಾರ ಅವರಿಂದ ಹಿಂದೂಸ್ತಾನಿ ಶಾಸ್ತ್ರೀಯ ದಾಸವಾಣಿ ಜರುಗಲಿದೆ.

ನ.16ರಂದು ರವಿವಾರ ದ್ವಾದಶಿ ದಿನದಂದು ಸಂಜೆ 5 ಗಂಟೆಗೆ ಬೆಂಗಳೂರಿನ ಕುಮಾರ ಅಮೋಘ ಜೋಶಿಯವರಿಂದ ಕೊಳಲು ವಾದನ, ಶ್ರೀ ರಘುವಿಜಯತೀರ್ಥ ಶ್ರೀಪಾದಂಗಳವರ ದಿವ್ಯ ಸಾನ್ನಿಧ್ಯದಲ್ಲಿ ರಘೋತ್ತಮಾಚಾರ್ಯ ನಾಗಸಂಪಗಿ ಅವರಿಂದ ಪ್ರವಚನ, ನಟರಾಜ ಸಂಗೀತ ವಿದ್ಯಾಲಯದ ವಿದ್ಯಾರ್ಥಿಗಳಿಂದ ತಬಲಾ ಸೋಲೊ, ಪ್ರಸನ್ನವೆಂಕಟದಾಸರ ವಂಶಸ್ಥ ವಾದಿರಾಜ ಕಾಖಂಡಕಿ ಅವರಿಂದ ದಾಸವಾಣಿ ಕಾರ್ಯಕ್ರಮ ನಡೆಯಲಿದೆ ಎಂದು ಅವರು ತಿಳಿಸಿದರು.

ಬಿವಿವಿ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ, ನಗರಸಭೆ ಉಪಾಧ್ಯಕ್ಷೆ ಶೋಭಾ ರಾವ್, ಶ್ರೀಮತಿ ಶುಭದಾ ದೇಶಪಾಂಡೆ, ಯುವ ಮುಖಂಡ ಪವನ ಮಂಕಣಿ, ಎಸ್. ಕೆ.ಕುಲಕರ್ಣಿ ಹಾಗೂ ಅನೇಕ ಗಣ್ಯರು ಉಪಸ್ಥಿತರಿರಲಿದ್ದಾರೆ. ನಂತರ ವಿದ್ವಾಂಸ ಮೈಸೂರ ರಾಮಚಂದ್ರ ಆಚಾರ್ಯ ಹಾಗೂ ಬಿಂಧುಮಾಧವಾಚಾರ್ಯ ನಾಗಸಂಪಗಿ ಅವರಿಂದ ಹರಿದಾಸರ ಉಗಾಭೋಗ ಗಾಯನ ನಡೆಯಲಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಡಾ.ಗಿರೀಶ ಮಾಸೂರಕರ, ನರಸಿಂಹ ಆಲೂರ, ಸಂತೋಷ ಗದ್ದನಕೇರಿ, ಪವನ ಮಂಕಣಿ, ಗಿರೀಶ ಆಶ್ರಿತ ಉಪಸ್ಥಿತರಿದ್ದರು.

# ಬೃಹತ್ ಆರೋಗ್ಯ ಶಿಬಿರ, ಕಾನೂನು ಸಾಕ್ಷರತಾ ಕಾರ್ಯಕ್ರಮ: ಶೆಟ್ಟಿ



ರಾಯಚೂರು ನವೆಂಬರ್ 13: ಬೆಂಗಳೂರಿನ ಕಾನೂನು ಸೇವೆಗಳ ಪ್ರಾಧಿಕಾರವು ರಾಯಚೂರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಮತ್ತು ಜಿಲ್ಲಾ ವಕೀಲರ ಸಂಘದಿಂದ ನವೆಂಬರ್ 15ರಂದು ರಾಯಚೂರು ಜಿಲ್ಲಾ ಕೇಂದ್ರದಲ್ಲಿ ಬೃಹತ್ ಆರೋಗ್ಯ ಶಿಬಿರ ಮತ್ತು ಕಾನೂನು ಸಾಕ್ಷರತಾ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಗೌರವಾನ್ವಿತ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ

ಎಸ್ ಶಶಿಧರ ಶೆಟ್ಟಿ ಅವರು ಹೇಳಿದರು.

ಜಿಲ್ಲಾ ಕೋರ್ಟ ಸಂಕೀರ್ಣದ ಸಭಾಂಗಣದಲ್ಲಿ ನವೆಂಬರ್ 13ರಂದು ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ದೇವದಾಸಿಯರ ಸಮೀಕ್ಷೆ ಚಾಲ್ತಿಯಲ್ಲಿದೆ. ಅದರಂತೆ ದೇವದಾಸಿ ಪದ್ಧತಿಯನ್ನು ಹೋಗಲಾಡಿಸುವ ಮುಖ್ಯ ಉದ್ದೇಶದೊಂದಿಗೆ ನವೆಂಬರ್ 15ರಂದು ದೇವದಾಸಿಯರ ಸ್ಥಿತಿಗತಿ ವಿಶೇಷ ಉಪನ್ಯಾಸ ಮತ್ತು ನಾನಾ ಕಾರ್ಯಕ್ರಮ ಆಯೋಜಿಸಲಾಗಿದೆ.

ನಮ್ಮ ಮಧ್ಯೆ ಇರುವ ಅನೇಕ ಮಹಿಳೆಯರು ಮತ್ತು ವಿಶೇಷವಾಗಿ ದೇವದಾಸಿ ಮಹಿಳೆಯರಿಗೆ ಇದುವರೆಗೆ ಸರಿಯಾದ ಆಧಾರ್ ಕಾರ್ಡ ಇಲ್ಲ. ಕೆಲವರಿಗೆ ಪಡಿತರ ಚೀಟಿ ದೊರೆತಿಲ್ಲ. ಸರ್ಕಾರದ ಯೋಜನೆಗಳ ಲಾಭ ದೊರೆತಿಲ್ಲ. ಕಾನೂನು ಜ್ಞಾನದ ಕೊರತೆಯಿಂದ ಕೆಲವರು ಇದುವರೆಗೆ ಡ್ರೈವಿಂಗ್ ಲೈಸೆನ್ಸ್ ಕೂಡ ಮಾಡಿಸಿಲ್ಲ. ಹೀಗಾಗಿ ನಾವೇ ಜನರ ಬಳಿಗೆ ಹೋಗಿ ಅವರೊಂದಿಗೆ ಮಾತನಾಡಬೇಕು. ಅವರ ಅಹವಾಲುಗಳಿಗೆ ಸ್ಪಂದನೆ ನೀಡಬೇಕು ಎಂದು ಯೋಜಿಸಿ ಈ ಕಾರ್ಯಕ್ರಮ ಆಯೋಜನೆ ಮಾಡಿದ್ದೇವೆ. ಜಿಲ್ಲೆಯಲ್ಲಿನ ಒಂದು ಗ್ರಾಮವನ್ನಾದರು ವ್ಯಾಜ್ಯ ಮುಕ್ತ ಮಾಡಬೇಕು ಎಂಬುದು ನಮ್ಮ ಗುರಿಯಾಗಿದೆ ಎಂದು ಅವರು ತಿಳಿಸಿದರು.ಆರೋಗ್ಯ ಇಲಾಖೆಯ ಜೊತೆಗೆ ಸೇರಿ ದೇವದಾಸಿಯರು ಸೇರಿದಂತೆ ಇನ್ನುಳಿದ ಮಹಿಳೆಯರಿಗೆ ಮೆಗಾ ಹೆಲ್ತ್ ಕ್ಯಾಂಪ್ ಆಯೋಜನೆ ಮಾಡಿದ್ದೇವೆ. ಎಷ್ಟೊ ಜನರಿಗೆ ನಾನಾ ಕಾಯಿಲೆಗಳ ಬಗ್ಗೆ ಅರಿವಿಲ್ಲ. ಜನತೆಗೆ ಜಾಗೃತಿ ಮೂಡಿಸಲು ಅಂದು ಕಾರ್ಯಕ್ರಮದ ಸ್ಥಳದಲ್ಲಿ ಸ್ಟಾಲ್ ಅಳವಡಿಸಿ ಆರೋಗ್ಯ ಸೇರಿದಂತೆ ನಾನಾ ಸರ್ಕಾರಿ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸುತ್ತಿದ್ದೇವೆ. ಇದೆ ವೇಳೆ ಮಹಿಳೆಯರಿಗೆ ಆರೋಗ್ಯ ತಪಾಸಣೆ ನಡೆಯಲಿದೆ.

ದೇವದಾಸಿಯರಿಗೆ ಇರುವ ಸರ್ಕಾರದ ಸೌಲಭ್ಯಗಳು ಮತ್ತು ನಾನಾ ವಿಷಯದ ಮೇಲೆ ಉಪನ್ಯಾಸ ನಡೆಯಲಿದೆ.

ಕಾರ್ಯಕ್ರಮಕ್ಕೆ ಆಗಮಿಸಲು ಅನುಕೂಲವಾಗುವಂತೆ ದೇವದಾಸಿ ಮಹಿಳೆಯರಿಗೆ ಸಾರಿಗೆ ವ್ಯವಸ್ಥೆ ಮಾಡಲಾಗಿದೆ. ಅಂದು ಊಟದ ವ್ಯವಸ್ಥೆ ಕೂಡ ಮಾಡಿದ್ದೇವೆ ಎಂದು ಸಮಾರಂಭದ ಕುರಿತು ವಿವರಿಸಿದರು.

ಅಂದು, ಗೌರವಾನ್ವಿತ ಕರ್ನಾಟಕದ ಹೈಕೋರ್ಟನ ಮುಖ್ಯ ನ್ಯಾಯಮೂರ್ತಿಗಳು ಕಾರ್ಯಕ್ರಮ ಉದ್ಘಾಟಿಸುವರು. ಹೈಕೋರ್ಟನ ನ್ಯಾಯಾಧೀಶರು ಹಾಗೂ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯಪಾಲಕ ಅಧ್ಯಕ್ಷರು,

ರಾಯಚೂರು ಜಿಲ್ಲಾ ಆಡಳಿತಾತ್ಮಕ ನ್ಯಾಯಾಧೀಶರು, ರಾಯಚೂರು ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಧೀಶರು, ಹೈಕೋರ್ಟನ ರಿಜಿಸ್ಟಾರ್ ಜನರಲ್, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಬಾರ್ ಅಸೋಸಿಯೇಶನ್ ಅಧ್ಯಕ್ಷರು ಸೇರಿದಂತೆ ಗಣ್ಯ ಮಾನ್ಯರು ಭಾಗಿಯಾಗಲಿದ್ದಾರೆ ಎಂದು ಅವರು ತಿಳಿಸಿದರು.ಸುದ್ದಿಗೋಷ್ಠಿಯಲ್ಲಿ ಗೌರವಾನ್ವಿತ ಪ್ರಧಾನ ಜಿಲ್ಲಾ ಹಾಗೂ ಸತ್ರ ನ್ಯಾಯಾಧೀಶರಾದ ಮಾರುತಿ ಶಿ ಬಾಗಡೆ, ಹಿರಿಯ ಶ್ರೇಣಿ ದಿವಾನಿ ನ್ಯಾಯಾಧೀಶರಾದ ಹೆಚ್ ಎ ಸಾತ್ವಿಕ್, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯರಾದ ನಲವಾಡೆ, ಸಾರ್ವಜನಿಕ ಸಂಪರ್ಕ ಅಧಿಕಾರಿ ಬಾಲಸುಬ್ರಮಣ್ಯ ಇದ್ದರು.

# ಗಡಿನಾಡು ಕನ್ನಡಿಗ ವಿದ್ಯಾರ್ಥಿಗಳ ಸಮಸ್ಯೆಗಳಿಗೆ ಪರಿಹಾರ ಒದಗಿಸಲೂ ಮನವಿ



ರಾಯಚೂರು;ಜಿಲ್ಲೆಯ ಗಡಿನಾಡು ಭಾಗದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಮಾಡುತ್ತಿರುವ ಮಕ್ಕಳಿಗೆ ಸೂಕ್ತ ಸೌಲಭ್ಯಗಳು ಮತ್ತು ಉದ್ಯೋಗದಲ್ಲಿ ಮೀಸಲಾತಿ ಒದಗಿಸ ಕೊಡಬೇಕೆಂದು ವಿದ್ಯಾರ್ಥಿಗಳ ಸಂಘದ ವತಿಯಿಂದ ರಾಯಚೂರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯ ಗಡಿ ಭಾಗದಲ್ಲಿರುವ ತೆಲಂಗಾಣ ರಾಜ್ಯದ ಕೃಷ್ಣ ಗ್ರಾಮದಲ್ಲಿ ಕಳೆದ 50 ವರ್ಷಗಳಿಂದ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕಾಗಿ ಕರ್ನಾಟಕ ಸರ್ಕಾರದಿಂದ ಯಾವುದೇ ಸೌಲಭ್ಯಗಳು ಈ ಭಾಗದ ವಿದ್ಯಾರ್ಥಿಗಳಿಗೆ ಇಲ್ಲಿಯವರೆಗೂ ಸೌಲಭ್ಯಗಳು ದೊರೆತಿಲ್ಲ ಹಾಗೂ ಸಾಕಷ್ಟು ತೊಂದರೆಗಳನ್ನು ಅನುಭವಿಸುತ್ತಾ ಬಂದಿರುತ್ತಾರೆ.

ಹಾಗೆಯೇ 2017 ರಲ್ಲಿ ಆಗಿನ ಮುಖ್ಯಮಂತ್ರಿಯಾಗಿದ್ದ ಶ್ರೀ ಯಡಿಯೂರಪ್ಪನವರು ದೇಶದ ಯಾವುದೇ ಭಾಗದಲ್ಲಿ 1ರಿಂದ 10ನೇ ತರಗತಿಯಲ್ಲಿ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡಿದ ಕನ್ನಡಿಗರಿಗೆ ಶೇಕಡಾ 5% ರಷ್ಟು ನಾಗರಿಕ ಸೇವಾ ಹುದ್ದೆಗಳ ನೇರ ನೇಮಕಾತಿಯಲ್ಲಿ ಮೀಸಲಾತಿ ಕೊಡುತ್ತೇವೆ ಎಂದು ಆದೇಶ ಹೊರಡಿಸಿದರು. ಆ ಆದೇಶ ಇಲ್ಲಿಯವರೆಗೂ ಜಾರಿಗೆ ತಂದಿರುವುದಿಲ್ಲ. ಇಲ್ಲಿಯವರೆಗೂ ಈ ಭಾಗದಲ್ಲಿ ಕನ್ನಡ ಮಾಧ್ಯಮದಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಮಾತ್ರ ಕರ್ನಾಟಕ ಸರ್ಕಾರದಿಂದ ಯಾವುದೇ ರೀತಿಯ ಸೌಲಭ್ಯಗಳು ದೊರೆಯುತ್ತಿಲ್ಲ. ನಾಗರಿಕ ಸೇವಾ ನೇಮಕಾತಿಯಲ್ಲಿ ಉದ್ಯೋಗ-ಕ್ಕೆ ಅವಕಾಶವಾಗಲಿ, ಹಾಸ್ಟೆಲ್ ವ್ಯವಸ್ಥೆ, ಬಸ್ ಪಾಸ್, ವಿದ್ಯಾರ್ಥಿ ವೇತನ, ಜಾತಿಪ್ರಮಾಣ ಪತ್ರ, ಇತರೆ ಸೌಲಭ್ಯಗಳು ಸಿಗದಿದ್ದರೂ ಇಲ್ಲಿನ ವಿದ್ಯಾರ್ಥಿಗಳು ಕನ್ನಡದಲ್ಲಿಯೇ ಅಭ್ಯಾಸ ಮುಂದುವರೆಸುತ್ತಾ ಇದ್ದಾರೆ.

ಇಲ್ಲಿನ ಮಕ್ಕಳ ಮುಂದಿನ ಉದ್ಯೋಗದ ಭವಿಷ್ಯತ್ತಿನ ಕನಸುಗಳು ಕನಸಾಗಿಯೇ ಉಳಿಯುತ್ತಿವೆ. ಲಕ್ಷಾಂತರ ರೂಪಾಯಿ ಖರ್ಚು ಮಾಡಿ ಪಿಯುಸಿ, ಡಿಗ್ರಿ, ಬಿ.ಎಡ್, ಡಿ.ಎಡ್, ಇಂಜನೀಯರಿಂಗ್, ಇತರೆ ಕೋರ್ಸುಗಳನ್ನು ಮಾಡಿದರೂ ಕೊನೆಗೆ ಯಾವುದೇ ರೀತಿಯಿಂದಲೂ ಕರ್ನಾಟಕ ಸರ್ಕಾರ ನಡೆಸುವ ಉದ್ಯೋಗ ನೇಮಕಾತಿಯಲ್ಲಿ ಇಲ್ಲಿನ ಮಕ್ಕಳಿಗೆ ಅವಕಾಶ ಸಿಗುತ್ತಿಲ್ಲ. ಈ ಎಲ್ಲ ಸಮಸ್ಯೆಗಳನ್ನು ಮಾನ್ಯ ಮುಖ್ಯಮಂತ್ರಿಗಳ ದೃಷ್ಟಿಗೆ ತಲುಪಿಸಿ, ಆದಷ್ಟು ಬೇಗ ಈ ಸಮಸ್ಯೆಗಳನ್ನು ಪರಿಹರಿಸಬೇಕು ಎಂದೂ ಜಿಲ್ಲಾಧಿಕಾರಿಯವರಿಗೆ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿಗಳಾದ ಯೂ.ಭೀಮಾಶಂಕರ, ಮಹೇಶ ನಾಯಕ, ಮಹೇಶ ಪೂಜಾರಿ, ಹಣಮಂತ, ಶಂಕರ, ನವೀನ ಕುಮಾರ, ಅಶೋಕ, ಜಿ.ವಿಶ್ವನಾಥ, ಎನ್. ಶ್ರೀನಿವಾಸ, ಬಸವರಾಜ, ಸುರೇಶ, ಕೀರಪ್ಪ, ವಿಶ್ವರಾಧ್ಯ, ನರಸಿಂಹರೆಡ್ಡಿ, ಮಹಾದೇವ, ಪ್ರಕಾಶ, ಕಾವೇರಿ, ಮಾನಸ, ಮಂಜುಳ ಹಾಗೂ ಗಡಿ ಅಭಿವೃದ್ಧಿ ಅಧ್ಯಕ್ಷರು ರಾಮಲಿಂಗಪ್ಪ, ಶಿಕ್ಷಕರಾದ ನಿಜಾಮುದ್ದೀನ್, ನಾಗಭೂಷಣ, ಅನಿಲಕುಮಾರ ಸೇರಿದಂತೆ ಇನ್ನಿತರರಿದ್ದರು.

# ಸಂಗೀತದಿಂದ ಮನಸ್ಸಿಗೆ ನೆಮ್ಮದಿ



ರಾಯಚೂರು, ನ 13-ಇತ್ತೀಚಿಗೆ ಇಂಟರ್‌ನ್ಯಾಷನಲ್ ದೆಹಲಿ ಪಬ್ಲಿಕ್ ಶಾಲೆಯ ವಿದ್ಯಾರ್ಥಿಗಳು ವಚನ ಗಾಯನ ನಡೆಸಿ ಕೊಟ್ಟರು ಹಿಂದೂಸ್ತಾನಿ ಗಾಯಕರಾದ ಶ್ರೀನಿವಾಸ್ ಆಶಾಪುರ ಅವರ ಮಾರ್ಗದರ್ಶನದಲ್ಲಿ ಆಲ್ ಇಂಡಿಯಾ ರೇಡಿಯೋದಲ್ಲಿ ಮನೋಹರ ಸಂಗೀತ ಕಾರ್ಯಕ್ರಮವನ್ನು ನಡೆಸಿದರು. ವಿದ್ಯಾರ್ಥಿಗಳಾದ ಸುದಿಕ್ಷ.ರಾಧೆನಾಯಕ. ಹರ್ಷವರ್ಧನ್.ಕೃತಿಕ.ಗೋಪುರ. ಮನೀಶ್ ವಿಶ್ವಗುರು ಬಸವಣ್ಣನವರ ವಚನಗಳನ್ನು ಭಕ್ತಿಯಿಂದ ಶ್ರದ್ಧೆಯಿಂದ ಹಾಡಿದರು ಶಿಸ್ತು ಮತ್ತು ಸಮನ್ವಯ ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು

ಈ ಕಾರ್ಯಕ್ರಮಕ್ಕೆ ಶಾಲಾ ನಿರ್ವಹಣಾ ಮಂಡಳಿಯಿಂದ ಅಪಾರ ಪ್ರೋತ್ಸಾಹ ದೊರೆಯಿತು. ಅಧ್ಯಕ್ಷರಾದ ಜಗನ್ ಮೋಹನ್ ರೆಡ್ಡಿ ಅವರು ವಿದ್ಯಾರ್ಥಿಗಳು ಮತ್ತು ಸಿಬ್ಬಂದಿಯನ್ನು ಅಭಿನಂದಿಸಿ, ಶಾಲೆಗೆ ಗೌರವ ತಂದಕ್ಕಾಗಿ ಮೆಚ್ಚುಗೆ ವ್ಯಕ್ತಪಡಿಸಿದರು. ನಂತರ ಮಾತನಾಡಿ,ಸಂಗೀತದಿಂದ ಮಾನಸಿಕ ಒತ್ತಡ ಕಡಿಮೆಯಾಗಿ ಮನಸ್ಸಿಗೆ ಶಾಂತಿ ನೆಮ್ಮದಿ ತಂದುಕೊಡುತ್ತದೆ. ಸಂಗೀತ ರೋಗವನ್ನು ನಿವಾರಿಸುವ ಶಕ್ತಿ ಹೊದಿದೆ ಎಂದರು.ಪ್ರಾಚಾರ್ಯರಾದ ಮೋನಿಕಾ ಸ್ವಾಮಿ ಅವರು ವಿದ್ಯಾರ್ಥಿಗಳ ಶ್ರಮವನ್ನು ಶ್ಲಾಘಿಸಿ, ಇಂತಹ ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಭಾಗವಹಿಸಲು ಪ್ರೋತ್ಸಾಹಿಸಿದರು. ಉಪಪ್ರಾಚಾರ್ಯರಾದ ಪ್ರಶಾಂತ್ ಸರ್ ಅವರು ಕಾರ್ಯಕ್ರಮದ ಯಶಸ್ಸಿಗೆ ಅಗತ್ಯವಾದ ಮಾರ್ಗದರ್ಶನ ಮತ್ತು ಸಹಕಾರ ನೀಡಿದರು. ಅವರ ಸಹಕಾರದಿಂದ ಕಾರ್ಯಕ್ರಮವು ಸ್ಮರಣೀಯ ಮತ್ತು ಯಶಸ್ವಿಯಾಯಿತು. ನಮ್ಮ ಶಾಲೆ ಈಗ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ವೇಗವಾಗಿ ಮುನ್ನಡೆಯುತ್ತಿದೆ. ನಿರ್ವಹಣಾ ಮಂಡಳಿಯ ಪ್ರೋತ್ಸಾಹದೊಂದಿಗೆ ಇಂಟರ್‌ನ್ಯಾಷನಲ್ ದೆಹಲಿ ಪಬ್ಲಿಕ್ ಶಾಲೆ ಮುಂದಿನ ದಿನಗಳಲ್ಲಿ ಇನ್ನಷ್ಟು ದೊಡ್ಡ ಮತ್ತು ಭವ್ಯ ಕಾರ್ಯಕ್ರಮಗಳನ್ನು ಆಯೋಜಿಸಲು ಉತ್ಸುಕವಾಗಿದೆ.

# ನಾಳೆ ವಿದ್ಯುತ್ ವ್ಯತ್ಯಯ

ಬೀದರ, ನವೆಂಬರ್.13 :- ಬೀದರ ವೃತ್ತ ವ್ಯಾಪ್ತಿಯಲ್ಲಿ ಬರುವ ಕಮಠಾಣ ಉಪ-ವಿಭಾಗದ 110/33/11 ಕೆ.ವಿ. ಸಬ್-ಸ್ಟೇಷನ್ ಕಮಠಾಣ ವಿದ್ಯುತ್ ವಿತರಣಾ ಕೇಂದ್ರದಿಂದ 33ಕೆವಿ ಮನ್ನಳ್ಳಿ, 33ಕೆವಿ ಕಮಠಾಣ ಮತ್ತು 33ಕೆವಿ ಜಿ.ಜಿ.ಪಿ.ಎಲ್. ವಿದ್ಯುತ್ ವಿತರಣಾ ಕೇಂದ್ರಕ್ಕೆ ಹಾದು ಹೋಗುವ ಲೈನಗಳ ತುರ್ತು ಕೆಲಸದ ನಿಮಿತ್ತ ದುರಸ್ತಿ ಕೈಗೊಳ್ಳುತ್ತಿರುವುದರಿಂದ 11ಕೆವಿ ಕಾಲೇಜ್, 11ಕೆವಿ ಎನ್.ಜೆ.ವಾಯ್ ಕಮಠಾಣ, 11ಕೆವಿ ಎನ್.ಜೆ.ವಾಯ್ ಬಾವಗಿ, 11ಕೆವಿ ಐ.ಪಿ ಕಗಂನಕೋಟ್, 11ಕೆವಿ ಎನ್.ಜೆ.ವಾಯ್ ಮಿರ್ಜಾಪೂರ 11ಕೆವಿ ಐ.ಪಿ ಬೆಳ್ಳೂರಾ ಫೀಡರಗಳ ವ್ಯಾಪ್ತಿಗೆ ಬರುವ ಸುತ್ತಲಿನ ಗ್ರಾಮಗಳಾದ ಬಾವಗಿ, ಮಿರ್ಜಾಪೂರ, ಬೆಳ್ಳೂರ ಮತ್ತು ಸುತ್ತಲಿನ ಗ್ರಾಮಗಳಿಗೆ ದಿನಾಂಕ: 15-11-2025 ರಂದು ಬೆಳಿಗ್ಗೆ 9 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.

ಕಾರಣ ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಲು ಬೀದರ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಇಂಜಿನಿಯರ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನ.16 ರಂದು ವಿದ್ಯುತ್ ವ್ಯತ್ಯಯ

ಬೀದರ, ನವೆಂಬರ್.13:- ಬೀದರ ವೃತ್ತ ವಾಪ್ತಿಯಲ್ಲಿ ಮನ್ನಾಎಖ್ಖೇಳ್ಳಿ ಉಪ-ವಿಭಾಗದ 110/33/11 ಕೆ.ವಿ. ಸಬ್-ಸ್ಟೇಷನ್ ಮನ್ನಾಎಖ್ಖೇಳ್ಳಿ ವಿದ್ಯುತ್ ವಿತರಣಾ ಕೇಂದ್ರದಿಂದ ಬೇಮಳಖೇಡಾ ಮತ್ತು ಬಗದಲ 33 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರಕ್ಕೆ ಹಾದು ಹೋಗುವ ಲೈನಗಳ ತುರ್ತು ಕೆಲಸದ ನಿಮಿತ್ತೆ ದುರಸ್ತಿ ಕೈಗೊಳ್ಳುತ್ತಿರುವುದರಿಂದ 11ಕೆವಿ ಎನ್.ಜೆ.ವಾಯ್ ಮರಕುಂದಾ, 11ಕೆವಿ ಭಂಗೂರ ಐ.ಪಿ., 11ಕೆವಿ ಎನ್.ಜೆ.ವಾಯ್ ನಿಡವಂಚ, 11ಕೆವಿ ಖೇಣಿರಾಂಜೋಳ ಐ.ಪಿ, 11ಕೆವಿ ಬೋರಾಳ ಎನ್.ಜೆ.ವಾಯ್, 11ಕವಿ ಮೀನಕೇರಾ ಐ.ಪಿ., 11ಕೆವಿ ಮಂಗಲಗಿ ಐ.ಪಿ., 11ಕೆವಿ ರೇಕುಳಗಿ ಐ.ಪಿ., 11ಕೆವಿ ಮನ್ನಾಎಖ್ಖೇಳ್ಳಿ ಫೀಡರಗಳ ವ್ಯಾಪ್ತಿಗೆ ಬರುವ ಸುತ್ತಲಿನ ಗ್ರಾಮಗಳಾದ ಮರಕುಂದ, ಭಂಗೂರ, ಮನ್ನಳ್ಳಿ, ಬೋರಾಳ, ಮೀನಕೇರಾ, ಮಂಗಲಗಿ, ನಿಡವಂಚಾ, ರೇಕುಳಗಿ ಮತ್ತು ಸುತ್ತಲಿನ ಗ್ರಾಮಗಳಿಗೆ ದಿನಾಂಕ:16-11-2025 ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ. ಕಾರಣ ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಲು ಬೀದರ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಇಂಜಿನಿಯರ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿವಿಧೆಡೆ ವಿದ್ಯುತ್ ವ್ಯತ್ಯಯ

ಬೀದರ, ನವೆಂಬರ್.13 :- ಬೀದರ ವೃತ್ತ ವ್ಯಾಪ್ತಿಯಲ್ಲಿ ಬರುವ ಗ್ರಾಮೀಣ ಉಪ-ವಿಭಾಗದ 110/11ಕೆ.ವಿ. ಸಬ್-ಸ್ಟೇಷನ್ ಯಕಾತಪೂರ ವಿದ್ಯುತ್ ವಿತರಣಾ ಕೇಂದ್ರದಿಂದ ಹಾದು ಹೋಗುವ ಲೈನಗಳ ತುರ್ತು ಕೆಲಸದ ನಿಮಿತ್ತ ದುರಸ್ತಿ ಕೈಗೊಳ್ಳುತ್ತಿರುವುದರಿಂದ (1) 11ಕೆವಿ ಯಕಾತ್ತಪೂರ ಎನ್.ಜೆವಾಯ್ ಫೀಡರ್ ಮೇಲೆ ಬರುವ ಹಳ್ಳಿಗಳಾದ ಯಕಾತ್ತಪೂರ, ಸಾತೋಳ್ಳಿ, ಬುದೇರಾ, ನಾಗೂರಾ, ಟಿ.ಮೀಜಾಪೂರ, ಗೊಡಂಪಳ್ಳಿ, ಹಾಗೂ ಸುತ್ತಲಿನ ಗ್ರಾಮಗಳು (2) 11ಕೆವಿ ಮನ್ನಳ್ಳಿಎನ್.ಜೆವಾಯ್, ಫೀಡರ್ ಮೇಲೆ ಬರುವ ಮನ್ನಳ್ಳಿ ಗ್ರಾಮ, ಭವಾನಿ ಖಾಂಡಸಾರಿ, ಸಿದೋಲ್ ಇಂಡಸ್ಟ್ರಿ ಹಾಗೂ ಸುತ್ತಲಿನ ಗ್ರಾಮಗಳು (3) ಚಿಂತಲಗೇರಾ ಎನ್.ಜೆ.ವಾಯ್ ಫೀಡರ್ ಮೇಲೆ ಬರುವ ಹೊಕ್ಕರಾಣಾ(ಬಿ), ಹೊಕ್ಕರಾಣಾ(ಕೆ), ಚಿಂತಲಗೇರಾ, ಧರ್ಮಾಪೂರ, ಬರೂರ ಹಾಗೂ ಸುತ್ತಲಿನ ಗ್ರಾಮಗಳು (4) 11ಕೆವಿ ಚಟ್ನಾಳ ಐ.ಪಿ, 11ಕೆವಿ ತಡಪಳ್ಳಿ ಐ.ಪಿ, 11ಕೆವಿ ಹೊಕ್ಕರಾಣಾ ಐ.ಪಿ, 11ಕೆವಿ ಮನ್ನಳ್ಳಿ ಐ.ಪಿ, 11ಕೆವಿ ಇಂಡಸ್ಟ್ರಿ, 11ಕೆವಿ ರಾಜಗೀರಾ ಐ.ಪಿ., 11ಕೆವಿ ನಾಗೂರಾ ಐ.ಪಿ, 11ಕೆವಿ ಯಕತ್ತಪೂರ ಎನ್.ಜೆ.ವಾಯ್,11ಕೆವಿ ಶೇಕಾಪೂರ ಎನ್.ಜೆ.ವಾಯ್ ಫೀಡರಗಳ ವ್ಯಾಪ್ತಿಗೆ ಬರುವ ಸುತ್ತಲಿನ ಗ್ರಾಮಗಳಲ್ಲಿ ದಿನಾಂಕ:16-11-2025 ರಂದು ಬೆಳಗ್ಗೆ 9 ರಿಂದ ಮಧ್ಯಾಹ್ನ 4 ಗಂಟೆಯವರೆಗೆ ವಿದ್ಯುತ್ ಸರಬರಾಜು ಇರುವುದಿಲ್ಲ.ಕಾರಣ ವಿದ್ಯುತ್ ಗ್ರಾಹಕರು ಜೆಸ್ಕಾಂ ಇಲಾಖೆಯೊಂದಿಗೆ ಸಹಕರಿಸಲು ಬೀದರ ಕಾರ್ಯ ಮತ್ತು ಪಾಲನೆ ವೃತ್ತದ ಅಧೀಕ್ಷಕ ಇಂಜಿನಿಯರ (ವಿ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹೆಚ್.ಶಿವರಾಮೇಗೌಡ ರ ಕರವೇ ಯಿಂದ ಪತ್ರಕರ್ತ ವಿಶ್ವನಾಥ ಹೂಗಾರ್‌ಗೆ ಸನ್ಮಾನ



ಲಿಂಗಸುಗೂರು : 2025 ನೇ ಸಾಲಿನ ರಾಯಚೂರು ಜಿಲ್ಲಾ ಕಾರ್ಯನಿರತ ಪತ್ರಕರ್ತ ಸಂಘದ ಚುನಾವಣೆಯಲ್ಲಿ ಜಿಲ್ಲಾ ಕಾರ್ಯಕಾರಿ ಸಮಿತಿಗೆ ಆಯ

ಸ್ಕೆಯಾದನ್ಯೂಸ್18ಟಿವಿ ಮಾದ್ಯಮದ ಜಿಲ್ಲಾವರದಿಗಾರ ವಿಶ್ವನಾಥ್ ಹೂಗಾರ ಗೆ ಕರ್ನಾಟಕ ರಕ್ಷಣಾ ವೇದಿಕೆ( ಹೆಚ್.ಶಿವರಾಮೇಗೌಡ)ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂಧರ್ಭದಲ್ಲಿ ಕರವೇ ಅಧ್ಯಕ್ಷ ಮಾದೇಶ ಸರ್ಜಾಪುರ, ಉಪಾಧ್ಯಕ್ಷ ಬಸವರಾಜ ಪೇರಿ, ಪ್ರದಾನ ಕಾರ್ಯದರ್ಶಿ

ಶರಣಬಸವ ಈಚನಾಳ, ಸಂ. ಕಾರ್ಯದರ್ಶಿ ಮುತ್ತಣ್ಣ ಗುಡಿಹಾಳ, ಖಜಾಂಚಿ ಮಹಾಂತೇಶ ಹೂಗಾರ, ಕಾರ್ಮಿಕ ಘಟಕ ಅಧ್ಯಕ್ಷ ಆಂಜನೇಯ ನಾಯಕ,

ಬಸವರಾಜಗೋಲಪಲ್ಲಿ, ಮಂಜುನಾಥ ಬಳ್ಳಾರಿ, ಜಗನ್ನಾಥ ಚಿತ್ತಾಪುರ, ಸುರೇಶ ಭೋವಿ,

ಆನಂದ ದೋತರಿ, ಶಿವು ಸೇರಿದಂತೆ ಇತರರಿದ್ದರು.

# ಪ, ಪಂ, ಕಾಂಗ್ರೆಸ್ ಕೊಡಗೆ:ಶಿಂಧೆ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ: ಕಮಲನಗರ ಗ್ರಾಮ ಪಂಚಾಯಿತಿಯನ್ನು ಕಾಂಗ್ರೆಸ್ ಸರಕಾರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಕಾಲ ಕೂಡಿ ಬಂದಿದೆ ಎಂದು ನಿವೃತ್ತ ಸಿಎಂ ಅಪರ ಕಾರ್ಯದರ್ಶಿ, ಕಾಂಗ್ರೆಸ್ ಮುಖಂಡ ಡಾ. ಭೀಮಸೇನರಾವ ಶಿಂಧೆ ಹೇಳಿದರು.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಕಾಂಗ್ರೆಸ್ ಸರಕಾರ ಮಾಡಿರುವ ಕೆಲಸಗಳು ನಾನೇ ಮಾಡುತ್ತಿದ್ದೇನೆ ಎಂದು ಹೇಳಿಕೊಳ್ಳುತ್ತಿದ್ದಾರೆ. ಹಿಂದಿನ ಬಿಜೆಪಿ ಸರಕಾರ ಕ್ಷೇತ್ರದಲ್ಲಿ ಮಾಡದ ಕೆಲಸಗಳು ನಮ್ಮ ಕಾಂಗ್ರೆಸ್ ಸರಕಾರ ಮಾಡುತ್ತಿದೆ. ಔರಾದ್ ಪಟ್ಟಣ ಪಂಚಾಯಿತಿಯನ್ನು ಪುರಸಭೆ ಮಾಡಿದ್ದು, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ ಅವರಿಂದ ಹೊರತು ಶಾಸಕ ಪ್ರಭು ಚವ್ಹಾಣ ಅವರಿಂದ ಅಲ್ಲ. ಜಿಲ್ಲೆಯವರೇ ಆದ ಪೌರಾಡಳಿತ ಸಚಿವ ರಹೀಂಖಾನ, ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಅವರು ಸತತ ಪ್ರಯತ್ನದಿಂದ ಆಗಿದೆ. ನಾನು ಕುಡಾ ಸಿಎಂ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದೇನೆ ಎಂದರು. ಕಮಲನಗರ ಪಟ್ಟಣ ಪಂಚಾಯಿತಿಯೂ ಕಾಂಗ್ರೆಸ್ ಸರಕಾರದ ಕೊಡುಗೆಯಾಗಲಿದೆ. ಆದರೆ ಪಟ್ಟಣ ಪಂಚಾಯಿತಿ ಆಗುತ್ತಿರುವ ವಿಷಯ ತಿಳಿದ ಶಾಸಕ ಪ್ರಭು ಚವ್ಹಾಣ ಪಟ್ಟಣ ಪಂಚಾಯಿತಿ ಶ್ರೇಯಸ್ಸು ಪಡೆಯಲು, ಮಾದ್ಯಮದಲ್ಲಿ ಪ್ರಚಾರ ಪಡೆಯವದು ಸರಿಯಲ್ಲ. ಜನ ಬುದ್ಧಿವಂತರಾಗಿದ್ದಾರೆ. ಬಿಜೆಪಿ ಸರಕಾರದಲ್ಲಿ ಎರಡು ಬಾರಿ ಪ್ರಭು ಚವ್ಹಾಣ ಸಚಿವರಾದ ಅವಧಿಯಲ್ಲಿಯಾಕೆ ಔರಾದ್ ಪಟ್ಟಣ ಪಂಚಾಯಿತಿಯನ್ನು ಪುರಸಭೆ, ಕಮಲನಗರ ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿ ಮಾಡಲು ಆಗಿಲ್ಲ ಎಂದು ಪ್ರಶ್ನಿಸಿದರು.

ಕ್ಷೇತ್ರದ ಜನರ ಸಮಸ್ಯೆಗಳು ಅಗತ್ಯ ಅಭಿವೃದ್ಧಿಯ ಬಗ್ಗೆ ನಾನಾ ಯೋಜನೆಗಳು ರೂಪಿಸಿಕೊಂಡು ಸರಕಾರಕ್ಕೆ ಮನವಿ ಮಾಡುವ ಮೂಲಕ ಕೆಲಸಗಳು ಮಾಡುತ್ತಿದ್ದೇನೆ. ಆದರೆ ಕೆಲಸ ಮಾಡಿರುವದು ಕಾಂಗ್ರೆಸ್ ಸರಕಾರ ಮತ್ತು ಪೌರಾಡಳಿತ ಸಚಿವರು ಅವರ ಕೆಲಸಕ್ಕೆ ಪ್ರಭು ಚವ್ಹಾಣ ಕೃತಜ್ಞತೆ ಸಲ್ಲಿಸಬೇಕು ಹೊರತು ನಾನೇ ಮಾಡಿದ್ದೇನೆ ಎನ್ನುವದು ಸರಿಯಾದ ಕ್ರಮವಲ್ಲ ಎಂದು ಪ್ರಕಟಣೆಯಲ್ಲಿ ಡಾ. ಶಿಂಧೆ ತಿಳಿಸಿದ್ದಾರೆ.

# ಅಂಗನವಾಡಿ ಸಹಾಯಕಿ ಆಯ್ಕೆಯಲ್ಲಿ ಅಧಿಕಾರಿಗಳ ವಿಳಂಬ ಜಿಲ್ಲಾಧಿಕಾರಿ ಪರಿಗಣನೆ

ರಾಯಚೂರು,ನ.12:ಗಿಲ್ಲೇಸೂಗೂರು ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯ ಎಸ್.ಮಲ್ಕಾಪುರ ಅಂಗನವಾಡಿ ಕೇಂದ್ರದ ಸಹಾಯಕಿ ಹುದ್ದೆಗೆ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿ-ದ್ದರೂ ಅಂತಿಮ ಆದೇಶವನ್ನು ವಿಳಂಬಗೊಳಿಸಿರುವ ಅಧಿಕಾರಿಗಳ ನಿರ್ಲಕ್ಷ್ಯ ಕ್ರಮವನ್ನು ಜಿಲ್ಲಾಧಿಕಾರಿ ಗಂಭೀರವಾಗಿ ಪರಿಗಣಿಸಿದ್ದಾರೆ.

ಶ್ರೀಮತಿ ರಾಜೇಶ್ವರಿ ಗಂ/ ಚಂದ್ರಶೇಖರ್, ಎನ್.ಮಲ್ಕಾಪುರ ಇವರು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿ ಆಯ್ಕೆಯಾಗಿದ್ದು, ಅವರ ವಾಸಸ್ಥಳ ಪರಿಶೀಲನೆಗಾಗಿ ತಹಶೀಲ್ದಾರರು, ರಾಯಚೂರು ಅವರಿಗೆ ಪತ್ರವ್ಯವಹಾರ ಮಾಡಲಾಗಿತ್ತು. ತಹಶೀಲ್ದಾರರು ದಿನಾಂಕ 06-09-2025ರಂದು ಸಲ್ಲಿಸಿದ ವರದಿಯಲ್ಲಿ ರಾಜೇಶ್ವರಿ ಅವರ ವಾಸಸ್ಥಳ ನೈಜವಾಗಿದೆ ಎಂದು ದೃಢಪಡಿಸಿದ್ದರು.

ಆದಾಗ್ಯೂ, ಅಂತಿಮ ಆಯ್ಕೆ ಪ್ರಸ್ತಾವನೆ ಸಲ್ಲಿಸಲು ಸಂಬಂಧಿಸಿದ ಅಧಿಕಾರಿಗಳು ಉದ್ದೇಶಪೂರ್ವಕವಾಗಿ ವಿಳಂಬ ಮಾಡುತ್ತಿರುವುದು ಮೇಲ್ಮಟ್ಟದ ಅಧಿಕಾರಿಗಳ ಗಮನಕ್ಕೆ ಬಂದಿದ್ದು, ಇದು ಇಲಾಖೆಯ ವಿರುದ್ಧ ಸಾರ್ವಜನಿಕರಲ್ಲಿ ಕೆಟ್ಟ ಅಭಿಪ್ರಾಯ ಮೂಡಿಸುತ್ತಿದೆ ಎಂದು ತಿಳಿದುಬಂದಿದೆ.

ಈ ಹಿನ್ನೆಲೆಯಲ್ಲಿ ಗಿಲ್ಲೇಸೂಗೂರು ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸಂಬಂಧಿಸಿದ ಅಧಿಕಾರಿಗಳಿಗೆ "ಕಾರಣ ಸೂಚನಾ ನೋಟಿಸ್" ನೀಡಿದ್ದು, ತಕ್ಷಣ ಸ್ಪಷ್ಟೀಕರಣ ಸಲ್ಲಿಸಲು ಸೂಚನೆ ನೀಡಿದ್ದಾರೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಈ ವಿಷಯವನ್ನು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿರುವುದಾಗಿ ಮೂಲಗಳು ತಿಳಿಸಿವೆ.

# ಪ್ರತಿ ಟನ್ ಕಬ್ಬಿಗೆ 2900 ರೂ. ದರ ನಿಗದಿಪಡಿಸಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಬೀದರ, ನವೆಂಬರ್.13 : ಕಬ್ಬು ದರ ನಿಗದಿ ಸಂಬಂಧ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರ ಅಧ್ಯಕ್ಷತೆಯಲ್ಲಿ ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಸಭೆಯಲ್ಲಿ ಪ್ರತಿ ಟನ್ ಕಬ್ಬಿಗೆ 2900 ರೂ. ದರ ನಿಗದಿಪಡಿಸುವುದಾಗಿ ಜಿಲ್ಲಾಧಿಕಾರಿಗಳು ತಿಳಿಸಿದರು.

ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಮಾತನಾಡಿ, ರೈತರಿಗು ಹಾಗೂ ಕಾರ್ಖಾನೆಯವರಿಗೂ ಅನ್ಯಾಯವಾಗದಂತೆ 2900 ರೂ. ದರ ನಿಗದಿಪಡಿಸುವುದಾಗಿ ಹಾಗೂ ಇದು ಕಳೆದ ವರ್ಷಕ್ಕಿಂತ 250 ರೂ. ಹೆಚ್ಚಿನ ದರ ಲಭಿಸುವುದಾಗಿ ತಿಳಿಸಿದರು. ಕಳೆದ ವರ್ಷ ಪ್ರತಿ ಟನ್ ಕಬ್ಬಿಗೆ 2650 ರೂ. ನೀಡಲಾಗುತ್ತಿತ್ತು, ಆದರೆ ಈ ವರ್ಷ 2750 ರೂ. ರಾಜ್ಯ ಸರ್ಕಾರದಿಂದ 50 ರೂ. ಹಾಗೂ ಸಕ್ಕರೆ ಕಾರ್ಖಾನೆಗಳಿಂದ 50 ರೂ. ಹೆಚ್ಚುವರಿಯಾಗಿ 2850 ರೂ. ನೀಡುವ ಬಗ್ಗೆ ಚರ್ಚೆಯಾಗಿತ್ತು. ಆದರೆ ಜಿಲ್ಲೆಯ ಕಬ್ಬು ಬೆಳೆಗಾರರು ನಿನ್ನೆ ಹುಮನಾಬಾದ್‌ನಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಂಡಿದ್ದವು.

ಪ್ರತಿಭಟನಾ ಸ್ಥಳಕ್ಕೆ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಇಂದು ಸಭೆ ನಡೆಸುವುದಾಗಿ ತಿಳಿಸಿದ್ದರು. ಈ ಹಿನ್ನೆಲೆಯಲ್ಲಿ ಇಂದು ಎಲ್ಲ ರೈತ ಮುಖಂಡರ ಹಾಗೂ ಕಬ್ಬು ಬೆಳೆಗಾರ ಸಂಘಟನೆಗಳ ಹಾಗೂ ಸಕ್ಕರೆ ಕಾರ್ಖಾನೆಗಳ ವ್ಯವಸ್ಥಾಪಕ ನಿರ್ದೇಶಕರ ಸಭೆ ಜರುಗಿತು.

ಈ ವರ್ಷ ಅತೀವೃಷ್ಠಿಯಿಂದಾಗಿ ಬಹುತೇಕ ಬೆಳೆಗಳು ಕೈಕೊಟ್ಟಿದ್ದು ಕಬ್ಬು ಬೆಳೆಗೆ 3100 ರೂ. ಪ್ರತಿ ಟನ್‌ಗೆ ದರ ನಿಗದಿಪಡಿಸುವಂತೆ ಸಭೆಯಲ್ಲಿ ರೈತ ಮುಖಂಡರು ಆಗ್ರಹಿಸಿದರು.

ಜಿಲ್ಲಾಧಿಕಾರಿಗಳು ಮಾತನಾಡಿ, ರೈತರು ಹಾಗೂ ಕಾರ್ಖಾನೆಗಳು ಇಬ್ಬರೂ ಉಳಿಯಬೇಕು, ಈ ನಿಟ್ಟಿನಲ್ಲಿ 2900 ರೂ. ದರ ನಿಗದಿಪಡಿಸುವುದಾಗಿ ತಿಳಿಸಿದರು. ಕಳೆದ ವರ್ಷಕ್ಕಿಂತ 250 ರೂ. ಹೆಚ್ಚಿನ ದರ ರೈತರಿಗೆ ಲಭಿಸಲಿದೆ. ಅಲ್ಲದೇ 2900 ರೂ. ಕಾರ್ಖಾನೆಗಳು ತಪ್ಪದೇ ಜಮೆ ಮಾಡುವಂತೆ ತಾವು ನೋಡಿಕೊಳ್ಳುವುದಾಗಿ ಸಹ ತಿಳಿಸಿದರು.

ಬೀದರನಲ್ಲಿ 9.6 ರಿಕವರಿ ದರ ಇದ್ದು, ಹಾವೇರಿಯಲ್ಲಿಯೂ ಸಹ ಸಮನಾಗಿದ್ದು ಅಲ್ಲಿಯ ರೈತರು 2900 ರೂ. ದರಕ್ಕೆ ಒಪ್ಪಿಕೊಂಡಿರುವ ಬಗ್ಗೆ ತಿಳಿಸಿದರು. ಆದರೆ ರೈತ ಮುಖಂಡರು 3100 ರೂ. ದರ ನಿಗದಿಪಡಿಸುವಂತೆ ಕೋರಿದರು.

ಜಿಲ್ಲಾಧಿಕಾರಿಗಳು 2900 ರೂ. ನಿಗದಿಪಡಿಸುವುದಾಗಿ ತಮ್ಮ ನಿರ್ಧಾರವನ್ನು ತಿಳಿಸಿದರು. ಇದಕ್ಕೆ ಒಪ್ಪದ ರೈತ ಮುಖಂಡರು ತಮ್ಮ ಹೋರಾಟ ಮುಂದುವರೆಸುವುದಾಗಿ ತಿಳಿಸಿದರು.

ಈ ಸಭೆಯಲ್ಲಿ ಆಹಾರ ನಾಗರೀಕ ಸರಬರಾಜು ಉಪನಿರ್ದೇಶಕರಾದ ಪ್ರವೀಣ ಬರಗಲ್ ಸೇರಿದಂತೆ ವಿವಿಧ ರೈತ ಮುಖಂಡರು ಹಾಗೂ ಸಕ್ಕರೆ ಕಾರ್ಖಾನೆ ಎಂ.ಡಿ.ಗಳು ಮಾಲೀಕರು ಉಪಸ್ಥಿತರಿದ್ದರು.

# ಮಾಚಿದೇವ ಅಭಿವೃದ್ಧಿ ನಿಗಮದ ಅಧ್ಯಕ್ಷರಿಗೆ ಮಡಿವಾಳ ಸಮಾಜದಿಂದ ಅಭಿನಂದನೆ



ರಾಯಚೂರು : ಮಡಿವಾಳರು ಸರ್ಕಾರದ ಸೌಲಭ್ಯ ಪಡೆದು ಸಮಾಜದ ಮುಖ್ಯ ವಾಹಿನಿಗೆ ಬರಲಿ ಸಿ ನಂಜಪ್ಪ ಮಡಿವಾಳ ಸಮಾಜದವರು ಸರ್ಕಾರದ ಮತ್ತು ನಿಗಮ ಮಂಡಳಿಯ ಸೌಲಭ್ಯಗಳನ್ನು ಪಡೆದುಕೊಂಡು ಸಮಾಜದ ಮುಖ್ಯ ವಾಹಿನಿಗೆ ಬರಬೇಕು ಎಂದು ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದ ನೂತನ ಅಧ್ಯಕ್ಷರಾದ ಸಿ ನಂಜಪ್ಪ ಅವರು ಕರೆ ನೀಡಿದರು

ವೇದಿಕೆಯಲ್ಲಿ ಜಿಲ್ಲಾ ಮಡಿವಾಳ ಸಮಾಜದ ಅಧ್ಯಕ್ಷರು ಜಂಬಣ್ಣ ಎಂ ಹುಸೇನಪ್ಪ ಟ ಮಲ್ಲೇಶ್ ಗೌರರಾಧ್ಯಕ್ಷ ಏ ಎಲ್ ವೆಂಕಟೇಶ್ ಜಿಲ್ಲಾ ಕಾರ್ಯಾಧ್ಯಕ್ಷ

ಜಿ ವೆಂಕಟೇಶ್ ಜಿಲ್ಲಾ ಖಜಾಂಚಿ ಯು ಆಂಜನೇಯ ಪ್ರಧಾನ ಕಾರ್ಯದರ್ಶಿ ಎ ಶಾಂತಪ್ಪ ಎ ಚಂದ್ರಶೇಖರ್ ಎಚ್ ಮುನಿಸ್ವಾಮಿ ಪರಶುರಾಮ್ ವಿನೋದ್ ಕುಮಾರ್ ಎನ್ ಸುರೇಶ್ ದೋಬಿ ಘಾಟ್ ಕ್ಷೇಮ ಅಭಿವೃದ್ಧಿ ಸಂಘದ ಅಧ್ಯಕ್ಷ ಈ ಚಂದಪ್ಪ ಎಸ್ ಹನುಮಂತಪ್ಪ ಬಿಚ್ಚಲಿ ವಿರುಪಾಕ್ಷಪ್ಪ ಬಿಚಲಿ ನಾಗರಾಜ್ ಗುಬ್ಬಲ ವೆಂಕಟೇಶ್ ಮಹಿಳಾ ಘಟಕದ ಜಿಲ್ಲಾಧ್ಯಕ್ಷರಾದ ಜಮುನಾ ಲಾವಣ್ಯ ಇನ್ನಿತರು ಮುಖಂಡರು ಉಪಸ್ಥಿತಿ ಇದ್ದರು.

## ತೋರಣಗಲ್ಲು: ನಕಲಿ ವೈದ್ಯ ವೃತ್ತಿ ಮಾಡುತ್ತಿದ್ದ ಓರ್ವನ ಕ್ಲಿನಿಕ್ ಸೀಜ್




ಬಳ್ಳಾರಿ,ನ.13:ಯಾವುದೇ ವೈದ್ಯಕೀಯ ಪದವಿ ಪಡೆಯದೇ ಜನತೆಗೆ ತಾನು ವೈದ್ಯನೆಂದು ಸುಳ್ಳು ಹೇಳಿ ವೈದ್ಯ ವೃತ್ತಿ ಮಾಡುತ್ತಿದ್ದ ಸಂಡೂರಿನ ತೋರಣಗಲ್ಲು ಗ್ರಾಮದ ಅಭಿಲಾಷ್ ಕ್ಲಿನಿಕ್ ನ ಬಿ.ಎನ್.ವೀರೇಶ್ ಎಂಬುವನ ಕ್ಲಿನಿಕ್ ನ್ನು ಸೀಜ್ ಮಾಡಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಹೇಳಿದ್ದಾರೆ.

ಬಿ.ಎನ್.ವೀರೇಶ್ ಯಾವುದೇ ವೈದ್ಯಕೀಯ ಪದವಿ ಪಡೆಯದೇ ಕೇವಲ 10ನೇ ತರಗತಿಯವರೆಗೆ ವಿದ್ಯಾಭ್ಯಾಸ ಮಾಡಿ ಔಷಧಿಗಳ ಬಗ್ಗೆ ಮಾಹಿತಿ ಪಡೆದುಕೊಂಡು ಸಾರ್ವಜನಿಕರಿಗೆ ತಾವು ವೈದ್ಯರೆಂದು ಬಿಂಬಿಸಿ ರೋಗಿಗಳಿಗೆ ಚಿಕಿತ್ಸೆ ನೀಡುತ್ತಿದ್ದನು.

ಸಾರ್ವಜನಿಕರಿಂದ ದೂರು ಬಂದ ಹಿನ್ನಲೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಯವರ ಆದೇಶದ ಮೇರೆಗೆ ಸಂಡೂರು ತಾಲ್ಲೂಕು ನೋಡಲ್ ಅಧಿಕಾರಿಯೂ ಆಗಿರುವ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ ಮತ್ತು ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಭರತ್ ನೇತೃತ್ವದ ತಂಡವು ದಾಳಿ ನಡೆಸಿ, ಕ್ಲಿನಿಕ್ ನ್ನು ಸೀಜ್ ಮಾಡಿ ಜಿಲ್ಲಾಧಿಕಾರಿಗಳ ಮುಂದಿನ ಕ್ರಮಕ್ಕಾಗಿ ವರದಿ ನೀಡಲಾಗಿದೆ ಎಂದು ತಿಳಿಸಿದ್ದಾರೆ.

ಆರೋಗ್ಯದ ದೃಷ್ಟಿಯಿಂದ ಅಧಿಕೃತ ವೈದ್ಯ ಪದವಿ ಪಡೆದ ವೈದ್ಯರ ಬಳಿ ತಪಾಸಣೆ ಮಾಡಿಸುವ ಮೂಲಕ ಸೂಕ್ತ ಚಿಕಿತ್ಸೆ ಪಡೆಯುವುದರಿಂದ ಆರೋಗ್ಯದ ಮೇಲೆ ಉಂಟಾಗಬಹುದಾದ ಗಂಭೀರ ಪರಿಣಾಮಗಳನ್ನು ತಡೆಯಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಯವರು ಸಾರ್ವಜನಿಕರಲ್ಲಿ ಕೋರಿದ್ದಾರೆ.

ಹಾಗಾಗಿ ಗ್ರಾಮಗಳಲ್ಲಿ ವೈದ್ಯ ವೃತ್ತಿ ಮಾಡುತ್ತಿರುವವರು ಕಂಡುಬಂದಲ್ಲಿ, ಅವರ ವೈದ್ಯಕೀಯ ಪದವಿ ಮಾಹಿತಿ ಪಡೆದುಕೊಂಡು ಚಿಕಿತ್ಸೆ ಪಡೆಯಬೇಕು. ನಕಲಿ ವೈದ್ಯರು ಎಂದು ಕಂಡುಬಂದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಕಾರ್ಯಾಲಯಕ್ಕೆ ದೂರು ನೀಡಿದರೆ ಕರ್ನಾಟಕ ಖಾಸಗಿ ವೈದ್ಯಕೀಯ ಸಂಸ್ಥೆಗಳ ಅಧಿನಿಯಮ 2007 ರಡಿ ಕ್ರಮ ಜರುಗಿಸಲಾಗುವುದು.

ದಾಳಿಯ ಸಂದರ್ಭದಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಬಂಡೆಗೌಡ, ಆರೋಗ್ಯ ನಿರೀಕ್ಷಣಾಧಿಕಾರಿ ನಿಜಾಮುದ್ದೀನ್ ಹಾಜರಿದ್ದರು.

### ಮೇಯರ್, ಉಪಮೇಯರ್ ಹಾಗೂ ಸ್ಥಾಯಿ ಸಮಿತಿ ಸ್ಥಾನಗಳಿಗೆ ಚುನಾವಣೆ

## ಮಹಾನಗರ ವ್ಯಾಪ್ತಿ: ನಿಷೇಧಾಜ್ಞೆ ಜಾರಿ ಜಿಲ್ಲಾಧಿಕಾರಿ ಆದೇಶ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.13:ಬಳ್ಳಾರಿ ಮಹಾನಗರ ಪಾಲಿಕೆಯ 24ನೇ ಅವಧಿಯ ಮೇಯರ್, ಉಪ ಮೇಯರ್ ಹಾಗೂ ಸ್ಥಾಯಿ ಸಮಿತಿ ಸ್ಥಾನಗಳಿಗೆ ನವೆಂಬರ್ 15 ರಂದು ನಡೆಯಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಜನ ಆಗಮಿಸುವುದರಿಂದ ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ರಕ್ಷಣೆ ಒದಗಿಸುವ ಹಿತದೃಷ್ಠಿಯಿಂದ ಭಾರತೀಯ ನಾಗರಿಕ ಸುರಕ್ಷಾ ಸಂಹಿತಾ 2023 ಕಲಂ 163 ರಡಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಬಳ್ಳಾರಿ ಮಹಾನಗರ ಪಾಲಿಕೆ ಸುತ್ತ-ಮುತ್ತಲಿನ 500 ಮೀಟರ್ ವ್ಯಾಪ್ತಿಯ ಪ್ರದೇಶದಲ್ಲಿ ನಿಷೇಧಾಜ್ಞೆ ಜಾರಿಗೊಳಿಸಿ ಜಿಲ್ಲಾ ದಂಡಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಆದೇಶಿಸಿದ್ದಾರೆ.



**ನಿಷೇಧಿಸಲಾದ ಚಟುವಟಿಕೆ:**

ಇಂಕ್ (ಮಸಿ), ನೀರು, ಬೆಂಕಿ ಪೊಟ್ಟಣ, ಲೈಟರ್ ಮತ್ತು ಇತರೆ ಅಪಾಯಕಾರಿ ವಸ್ತುಗಳನ್ನು ತೆಗೆದುಕೊಂಡು ಹೋಗುವುದು. ಶಸ್ತ್ರ, ಬಡಿಗೆ, ಬರ್ಚಿಗದೆ, ಬಂದೂಕು,

ಚಾಕು, ಚೂರಿ, ಕೋಲು, ಲಾಠಿ ಅಥವಾ ಶರೀರಕ್ಕೆ ಗಾಯ ಮಾಡಲು

ಉಪಯೋಗಿಸಬಹುದಾದ ಯಾವುದೇ ವಸ್ತು ತೆಗೆದುಕೊಂಡು ಹೋಗುವುದು.

ಯಾವುದೇ ದಾಹಕ (ನಾಶಕಾರಿ) ಇಲ್ಲವೆ ಸ್ಫೋಟಕ ವಸ್ತು ಒಯ್ಯುವುದು, ಪಟಾಕಿ/ಸಿಡಿಮದ್ದು ಸಿಡಿಸುವುದು.

ಕಲ್ಲು ಎಸೆಯುವ ವಸ್ತು ಅಥವಾ ಅಂತಹ ವಸ್ತುಗಳನ್ನು ಎಸೆಯುವ ಅಥವಾ ಬಿಡುವ ಶಸ್ತ್ರಗಳು ಅಥವಾ ಸಾಧನಗಳು ಇವುಗಳನ್ನು ತೆಗೆದುಕೊಂಡು ತಿರುಗಾಡುವುದು.

ಕಾರು, ಮೋಟರ್ ಬೈಕ್ ಮತ್ತು ಇತರೆ ವಾಹನಗಳಲ್ಲಿ ರ್‍ಯಾಲಿಯನ್ನು

ಆಯೋಜಿಸುವುದು. ವಿಜಯೋತ್ಸವಗಳನ್ನು ಆಚರಿಸುವುದು ಹಾಗೂ ಭೋಜನಕೂಟಗಳನ್ನು ಏರ್ಪಡಿಸುವುದು. 5 ಕ್ಕಿಂತ ಹೆಚ್ಚು ಜನರು ಗುಂಪುಗೂಡಿ ತಿರುಗಾಡುವುದು (ಮಹಾನಗರ ಪಾಲಿಕೆ ಸಿಬ್ಬಂದಿ ಹಾಗೂ ಮಹಾನಗರ ಪಾಲಿಕೆ ಸದಸ್ಯರು ಹೊರಡುಪಡಿಸಿ).

ಬಹಿರಂಗವಾಗಿ ಘೋಷಣೆ ಕೂಗುವುದು, ಪದ ಹಾಕುವುದು, ವಾದ್ಯ ಬಾರಿಸುವುದು, ವ್ಯಾಖ್ಯಾನ ಕೊಡುವುದು, ಸನ್ನೆ ಅಥವಾ ನಕಲಿ ಪ್ರದರ್ಶನ ಹಾಗೂ ಆಫೀಸರ್ ಅಭಿಪ್ರಾಯದಲ್ಲಿ ಸಭ್ಯತೆ,

ನೀತಿಯನ್ನು ಅತಿಕ್ರಮಿಸಬಹುದಾದ ಯಾವುದೇ ವಸ್ತು ಅಥವಾ ಪದಾರ್ಥದ ತಯಾರಿ ಪ್ರದರ್ಶನ ಅಥವಾ ಪ್ರಸಾರ ಮಾಡುವುದು ನಿಷೇಧಿಸಲಾಗಿದೆ ಎಂದು ಜಿಲ್ಲಾ ದಂಡಾಧಿಕಾರಿಯೂ ಆಗಿರುವ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ತಿಳಿಸಿದ್ದಾರೆ.

## ಗರ್ಭಿಣಿಯರ ಆರೋಗ್ಯ ತಪಾಸಣೆ ನಿರಂತರವಾಗಿರಲಿ: ಡಿಹೆಚ್ಓ




ಬಳ್ಳಾರಿ,ನ.13:ಜಿಲ್ಲೆಯ ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಗರ್ಭಿಣಿ ಮಹಿಳೆಯರ ಆರೋಗ್ಯ ತಪಾಸಣೆ ಕೈಗೊಳ್ಳುವ ಕಾರ್ಯ ನಿರಂತರವಾಗಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಗುರುವಾರ, ಸಿರುಗುಪ್ಪ ತಾಲ್ಲೂಕಿನ ತೆಕ್ಕಲಕೋಟೆಯ ಸಮುದಾಯ ಆರೋಗ್ಯ ಕೇಂದ್ರಕ್ಕೆ ಭೇಟಿ ಭೇಟಿ ನೀಡಿ ಆಸ್ಪತ್ರೆ ಕಾರ್ಯ ವೈಖರಿ ಕುರಿತು ಮೇಲ್ವಿಚಾರಣೆ ನಡೆಸಿ ಅಲ್ಲಿನ ಪ್ರಸೂತಿ ತಜ್ಞರು ಮತ್ತು ಮಕ್ಕಳ ತಜ್ಞರೊಂದಿಗೆ ಚರ್ಚಿಸಿ ಮಾತನಾಡಿದ ಅವರು, ಗರ್ಭಿಣಿ ಮಹಿಳೆಯರು ಹಾಗು ಮಕ್ಕಳ ಆರೋಗ್ಯ ಸೇವೆಗಳ ನಿರಂತರವಾಗಿರಬೇಕು ಎಂದು ತಿಳಿಸಿದರು.

ಗರ್ಭಿಣಿ ಮಹಿಳೆಯರು ಮತ್ತು ಮಕ್ಕಳ ತಾಯಂದಿರು ಪೌಷ್ಟಿಕ ಆಹಾರ ಸೇವನೆ, ಶಿಶುಗಳ ಆರೈಕೆ, ಎದೆ ಹಾಲುಣಿಸುವಿಕೆ, ಲಸಿಕೆಗಳ ಮಹತ್ವ ಕುರಿತು ಅರಿವು ಹೊಂದಬೇಕು. ಮಕ್ಕಳಲ್ಲಿ ಯಾವುದಾದರೂ ರೋಗಲಕ್ಷಣಗಳು ಕಂಡುಬಂದಲ್ಲಿ ತಕ್ಷಣವೇ ಆಸ್ಪತ್ರೆಗೆ ಕರೆತರಬೇಕು. 5 ವರ್ಷದೊಳಗಿನ ಮಕ್ಕಳ ಉಸಿರಾಟ ತೊಂದರೆ ಕಂಡುಬಂದಲ್ಲಿ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಯ ವೈದ್ಯರ ಬಳಿ ತೆರಳಬೇಕು ಎಂದು ತಿಳಿಸಿದರು.

ಮುಖ್ಯವಾಗಿ ಗಂಡಾಂತರ ಗರ್ಭಿಣಿಯರು ಎಂದು ಗುರ್ತಿಸಿದ ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ-ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗುವುದು, ಮೊದಲ ಹೆರಿಗೆ ಸಿಸೇರಿಯನ್ ಮುಂತಾದ ಕಾರಣಗಳಿದ್ದರೆ ನಿರ್ಲಕ್ಷಿಸಿಸಬಾರದು. ನಿಯಮಿತವಾಗಿ ತಪಾಸಣೆಗೆ ಒಳಗಾಗಬೇಕು ಎಂದು ಸೂಚಿಸಿದರು.

ತೀವ್ರ ರಕ್ತಹೀನತೆಯಂತಹ ಸನ್ನಿವೇಶದಲ್ಲಿ ಸ್ಥಳೀಯವಾಗಿ ನೀಡುವ ಚಿಕಿತ್ಸೆಯಾದ ಐಎಫ್ಎ ಮಾತ್ರೆ, ಐರನ್ ಸುಕ್ರೋಸ್, ರಕ್ತ ಹಾಕಿಸುವಿಕೆ ಕೈಗೊಳ್ಳಬೇಕು. ಸುಧಾರಣೆಯಾಗದಿದ್ದಲ್ಲಿ ತಜ್ಞರ ಬಳಿ ತಪ್ಪದೇ ತೆರಳಬೇಕು. ಅಗತ್ಯವಿದ್ದಲ್ಲಿ ಸ್ಕ್ಯಾನ್ ಮಾಡಿಸಬೇಕು. ಮೊದಲ ಹೆರಿಗೆ ಶಸ್ತ್ರಚಿಕಿತ್ಸೆಯಾದಲ್ಲಿ ಪುನಃ ಗರ್ಭಿಣಿಯಾಗುವ ಅವಧಿಯನ್ನು ಕನಿಷ್ಟ 3 ವರ್ಷಕ್ಕೆ ಕಡ್ಡಾಯವಾಗಿ ಮುಂದೂಡಬೇಕು. ಇದಕ್ಕಾಗಿ ಅಂತರ ಚುಚ್ಚುಮದ್ದು, ಕಾಪರ-ಟಿ, ನೀರೊಧ್ ಬಳಸಬೇಕು ಎಂದರು.

ರಕ್ತಹೀನತೆ ತಡೆಗಟ್ಟಲು ಎಲ್ಲಾ ಗರ್ಭಿಣಿ ತಾಯಂದಿರು ಕಬ್ಬಿಣಾಂಶ ಮಾತ್ರೆ ಜೊತೆಗೆ ಪೌಷ್ಟಿಕ ಆಹಾರ ಸೇವನೆ

ಮಾಡಬೇಕು. 6 ತಿಂಗಳ ನಂತರ ಮಕ್ಕಳ ಪೂರಕ ಪೌಷ್ಟಿಕ ಆಹಾರ ನೀಡಬೇಕು ಎಂದು ಮಹಿಳೆಯರಿಗೆ ತಿಳಿಸಿದರು.

ಮುಖ್ಯವಾಗಿ ತೊಡಕಿನ ಗರ್ಭಿಣಿಯರ ಬಗ್ಗೆ ಕಾಳಜಿ ಇರಲಿ, ನಿಯಮಿತ ಆರೋಗ್ಯ ತಪಾಸಣೆ ಹಾಗು ಉತ್ತಮ ಹೆರಿಗೆ ಆಗುವಂತೆ ನೋಡಿಕೊಳ್ಳಬೇಕು. ತೊಡಕಿನ ಗರ್ಭಿಣಿಯರನ್ನು ಮುಂಚೂಣಿಯಾಗಿ ಮಾಹಿತಿ ನೀಡಿ ಹೆರಿಗೆಗಾಗಿ ಜಿಲ್ಲಾ ಆಸ್ಪತ್ರೆಗೆ ಶಿಫಾರಸ್ಸು ಮಾಡಬೇಕು ಎಂದು ವೈದ್ಯರಿಗೆ ಸೂಕ್ತ ಸಲಹೆ ಸೂಚನೆ ನೀಡಿದರು.

ಈ ಸಂದರ್ಭದಲ್ಲಿ ಆಡಳಿತ ವೈದ್ಯಾಧಿಕಾರಿ ಟಿ.ರಾಮಕೃಷ್ಣ, ಪ್ರಸೂತಿ ತಜ್ಞರಾದ ಡಾ.ಶಾರದ, ಡಾ.ಅರುಣ್ ಕುಮಾರ್, ಪ್ರಭಾರಿ ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಮಹಮ್ಮದ್ ಖಾಸೀಂ ಸೇರಿದಂತೆ ಆಶಾ ಕಾರ್ಯಕರ್ತೆಯರು, ತಾಯಂದಿರು ಉಪಸ್ಥಿತರಿದ್ದರು.

## ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿ: ಮೊದಲ ದಿನ 200 ಯುವಕರು ಮುಂದಿನ ಹಂತಕ್ಕೆ ಆಯ್ಕೆ



ಬಳ್ಳಾರಿ,ನ.13: ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ನ.13 ರಂದು (ಮೊದಲ ದಿನವಾದ ಗುರುವಾರ) ಅಗ್ನಿವೀರ್ ಸೇನಾ ನೇಮಕಾತಿ ರ್‍ಯಾಲಿಯು ಯಶಸ್ವಿಯಾಗಿ ನಡೆದಿದೆ.

ಈ ಸೇನಾ ನೇಮಕಾತಿಗೆ ಸಾಮಾನ್ಯ ಪ್ರವೇಶ ಪರೀಕ್ಷೆಯಲ್ಲಿ ಅರ್ಹತೆ ಪಡೆದ ಬೆಂಗಳೂರು ಆರ್‌ಓ ಕಚೇರಿ ವ್ಯಾಪ್ತಿಯ 13 ಜಿಲ್ಲೆಗಳ ಸುಮಾರು 400 ಯುವಕರು ಉತ್ಸಾಹದಿಂದ ಭಾಗಿಯಾಗಿದ್ದರು.

ರ್‍ಯಾಲಿ ನಡೆಯುವ ನಿಗದಿಪಡಿಸಿದ ಸಮಯಕ್ಕೆ ಸರಿಯಾಗಿ ಅಭ್ಯರ್ಥಿಗಳು ವರದಿ ಮಾಡಿಕೊಂಡು ತಮ್ಮ ಸಾಮರ್ಥ್ಯ ಪ್ರದರ್ಶಿಸಿದರು.

ಶಾರೀರಿಕ ಪರೀಕ್ಷೆ, ಓಟ, ದೈಹಿಕ ಸಾಮರ್ಥ್ಯ ಪರೀಕ್ಷೆ ಸೇರಿದಂತೆ ವಿವಿಧ ರೀತಿಯ ಪರೀಕ್ಷಾ ಹಂತಗಳನ್ನು ಯಶಸ್ವಿಯಾಗಿ ಪೂರೈಸಿ 200 ಯುವಕರು ಮುಂದಿನ ಹಂತಕ್ಕೆ ಆಯ್ಕೆಯಾದರು.

ಈ ಸೇನಾ ರ್‍ಯಾಲಿ ಪ್ರಕ್ರಿಯೆಯನ್ನು ಮೊದಲನೇ ದಿನ ಸೇನಾ ನೇಮಕಾತಿ ಮಂಡಳಿ ಅಧಿಕಾರಿಗಳು ಶಿಸ್ತುಬದ್ಧವಾಗಿ ಮುನ್ನಡೆಸಿದರು. ಅಗ್ನಿವೀರ್ ಸೇನೆಗಾಗಿ ಮುಂದಿನ ಹಂತಕ್ಕೆ ಆಯ್ಕೆಯಾದ ಅಭ್ಯರ್ಥಿಗಳಿಗೆ ಅಗತ್ಯ ಮಾರ್ಗದರ್ಶನ ನೀಡಲಾಗಿದೆ ಎಂದು ಸೇನಾ ಅಧಿಕಾರಿಗಳು ತಿಳಿಸಿದರು.

## ಗುತ್ತಿಗೆದಾರ ಸಂಘದಿಂದ ನಗರದಲ್ಲಿ ಬೃಹತ್ ಪ್ರತಿಭಟನೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕ್ರಷರ್ ಮತ್ತು ಸಿವಿಲ್ ಕಾಮಗಾರಿಗಳಿಗೆ ಬೇಕಾಗುವ ಸಾಮಗ್ರಿಗಳನ್ನು ಕೊಪ್ಪಳ ಸಂಸದ ರಾಘವೇಂದ್ರ ಹಿಟ್ನಾಳ್ ಅವರ ಒಡೆತನದ ಸಂಸ್ಥೆಯಾದ ಪ್ರೇರಣಾ ಸಂಸ್ಥೆಯ ಮೂಲಕವೇ ಖರೀದಿಸಬೇಕು ಎಂದು ನಿಯಮ ಹೇರಲಾಗಿದೆ ಎಂದು ಆರೋಪಿಸಿ ಕೊಪ್ಪಳ ಜಿಲ್ಲಾ ಗುತ್ತಿಗೆದಾರ ಸಂಘದಿಂದ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ಅಶೋಕ ವೃತ್ತದಿಂದ ಜಿಲ್ಲಾಧಿಕಾರಿಗಳ ಕಚೇರಿಯ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಈ ಸಂದರ್ಭದಲ್ಲಿ ಗುತ್ತಿಗೆದಾರರು ತಮಗೆ ಸೇರಿದ ಟಿಪ್ಪರ್, ಜೆಸಿಬಿ, ರೋಲರ್ ಮತ್ತು ಟ್ರಾಕ್ಟರ್ ನಂತಹ ವಾಹನಗಳನ್ನು ರಸ್ತೆಗೆ ಇಳಿಸಿದ್ದರಿಂದ ಕೆಲಕಾಲ ಸಂಚಾರ ದಟ್ಟಣೆ ಉಂಟಾಗಿತ್ತು.

## ವಿದ್ಯುತ್ ಗ್ರಾಹಕರ ಕುಂದು-ಕೊರತೆ ಸಭೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.13:ಬಳ್ಳಾರಿ ಗ್ರಾಮೀಣ ಜೆಸ್ಕಾಂ ಕಾರ್ಯ ಮತ್ತು ಪಾಲನಾ ಶಾಖೆ-2 ವ್ಯಾಪ್ತಿಯಲ್ಲಿ ಬರುವ ವಿದ್ಯುತ್ ಗ್ರಾಹಕರಿಗೆ ವಿದ್ಯುತ್ ಸಂಬಂಧಿಸಿದ ಸಮಸ್ಯೆಗಳನ್ನು ಬಗೆಹರಿಸಲು ನ.15 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 01.30 ಗಂಟೆಯವರೆಗೆ ಎಸ್.ಜೆ ಕೋಟೆ ಗ್ರಾಮದ ಗ್ರಾಮ ಪಂಚಾಯಿತಿ ಕಚೇರಿ ಆವರಣದಲ್ಲಿ ವಿದ್ಯುತ್ ಗ್ರಾಹಕರ ಕುಂದು-ಕೊರತೆ ಸಭೆ ಆಯೋಜಿಸಲಾಗಿದೆ.

ವಿದ್ಯುತ್ ಗ್ರಾಹಕರು ಮತ್ತು ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಮೋಹನಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿವಿಧೆಡೆ ದಾಳಿ: ಓರ್ವ ಬಾಲಕಾರ್ಮಿಕನ ರಕ್ಷಣೆ



ಬಳ್ಳಾರಿ,ನ.13:ಸಂಡೂರು ತಾಲ್ಲೂಕಿನ ಕುಡತಿನಿ, ತೋರಣಗಲ್ಲು ಮತ್ತು ವಡ್ಡು ಗ್ರಾಮಗಳ ಮುಖ್ಯರಸ್ತೆಗಳಲ್ಲಿನ ಗ್ಯಾರೇಜ್, ಮೆಕ್ಯಾನಿಕ್ ಶಾಪ್, ಕಟ್ಟಡ ನಿರ್ಮಾಣ ಕೆಲಸ, ಬೇಕರಿ ಇತ್ಯಾದಿ ಉದ್ದಿಮೆಗಳ ಮೇಲೆ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್ ಫೋರ್ಸ್ ಸಮಿತಿಯು ದಾಳಿ ನಡೆಸಿ ಓರ್ವ ಬಾಲಕಾರ್ಮಿಕನನ್ನು ರಕ್ಷಿಸಲಾಗಿದೆ.

ಜಿಲ್ಲಾಧಿಕಾರಿಯವರ ನಿರ್ದೇಶನದ ಮೇರೆಗೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ತಾಲೂಕು ಟಾಸ್ಕ್‌ಪೋರ್ಸ್ ಸಮಿತಿ ಅಧ್ಯಕ್ಷರಾದ ತಹಶೀಲ್ದಾರರ ನೇತೃತ್ವದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕರ ಟಾಸ್ಕ್‌ಫೋರ್ಸ್ ಸಮಿತಿ ಸಭೆ ನಡೆಸಿ ಈ ದಾಳಿ ಕೈಗೊಳ್ಳಲಾಗಿದೆ.

ಮಗುವಿನ ಹೇಳಿಕೆಯನ್ನು ಸ್ಥಳದಲ್ಲಿ ಪಡೆದುಕೊಂಡು ಪುನರ್ವಸತಿಗಾಗಿ ಮಕ್ಕಳ ಕಲ್ಯಾಣ ಸಮಿತಿ ಮುಂದೆ ಹಾಜರುಪಡಿಸಲಾಗಿದೆ. ಎಲ್ಲಾ ಉದ್ದಿಮೆಗಳ ಮಾಲೀಕರಿಗೆ ಕರಪತ್ರ ಹಾಗೂ ಪೋಸ್ಟರ್‌ಗಳನ್ನು ನೀಡಿ ಜಾಗೃತಿ ಮೂಡಿಸಲಾಯಿತು.

ಈ ಟಾಸ್ಕ್‌ಪೋರ್ಸ್ ಸಮಿತಿಯಲ್ಲಿ ಉಪತಹಶೀಲ್ದಾರ ದೇಸಾಯಿ, ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕ ವೆಂಕಟೇಶ್, ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್, ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು, ಮಕ್ಕಳ ಸಹಾಯವಾಣಿ ಸಿಬ್ಬಂದಿಯಾದ ಕಾರ್ತಿಕ್ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

## ಯುವಕರು ಉದ್ಯೋಗಿಯಾಗದೆ ಉದ್ಯೋಗದಾತರಾಗಬೇಕು: ಜಾಂತಿಕರ್




ಬೀದರ:ಔರಾದ ಪಟ್ಟಣದ ಸರ್ಕಾರಿ ಪದವಿ ಪ್ರಥಮ ದರ್ಜೆ ಕಾಲೇಜಿನಲ್ಲಿ "ಸಹಕಾರ ಮತ್ತು ಯುವಕರು" ಎಂಬ ಸಂವಾದ ಕಾರ್ಯಕ್ರಮವು ಇಂದು ಭಾನುವಾರ ನಡೆಯಿತು. ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ರಾಜ್ಯ ಸೌಹಾರ್ದ ಸಂಯುಕ್ತ ಸಹಕಾರಿ ನಿ., ಬೆಂಗಳೂರು ಕಲಬುರಗಿ ಪ್ರಾಂತ್ಯ ಕಚೇರಿಯ ಮಾನ್ಯ ನಿರ್ದೇಶಕರಾದ ಗುರುನಾಥ ಜಾಂತಿಕರ್ ಅವರು, ಯುವಕರು ಶಿಕ್ಷಣವನ್ನು ಕೇವಲ ಉದ್ಯೋಗಕ್ಕಾಗಿ ಪಡೆಯದೆ, ಸ್ವಾವಲಂಬಿಯಾಗಿ ಉದ್ಯೋಗದಾತರಾಗಬೇಕೆಂದು ಕರೆ ನೀಡಿದರು.

ಅವರು ಮುಂದುವರಿದು ಹೇಳಿದರು "ವಿದ್ಯಾರ್ಥಿಗಳು ಜ್ಞಾನವನ್ನು ಕೌಶಲ್ಯವಾಗಿ ಪರಿವರ್ತಿಸಿ, ಸ್ಥಳೀಯ ಮಟ್ಟದಲ್ಲಿ ಹೊಸ ಉದ್ಯೋಗಾವಕಾಶಗಳನ್ನು ಸೃಷ್ಟಿಸಬೇಕು. ದೇಶದ ಪ್ರತಿಯೊಬ್ಬ ಯುವಕನಿಗೂ ಸರ್ಕಾರ ಉದ್ಯೋಗ ನೀಡಲು ಸಾಧ್ಯವಿಲ್ಲ. ಆದ್ದರಿಂದ ಸಹಕಾರ ಕ್ಷೇತ್ರವು ಸ್ವಾವಲಂಬನೆ ಮತ್ತು ಉದ್ಯಮಶೀಲತೆಯ ವೇದಿಕೆಯಾಗಿದೆ," ಎಂದರು.

ರಾಜ್ಯದಲ್ಲಿ 75,000 ಕ್ಕಿಂತ ಹೆಚ್ಚು ಜನರಿಗೆ ಸೌಹಾರ್ದ ಸಹಕಾರ ಸಂಸ್ಥೆಗಳು ನೇರವಾಗಿ ಉದ್ಯೋಗ ಒದಗಿಸುತ್ತಿರುವುದು ಹೆಮ್ಮೆಯ ವಿಷಯ ಎಂದು ಗುರುನಾಥ ಜಾಂತಿಕರ್ ಹೇಳಿದರು. ಯುವಕರು ಸಹಕಾರ ಕ್ಷೇತ್ರದಲ್ಲಿ ತೊಡಗಿಸಿಕೊಂಡರೆ ಸಮಾಜದ ಆರ್ಥಿಕ ಬಲವರ್ಧನೆಗೆ ಸಹಕಾರಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ಕಾಲೇಜಿನ ಪ್ರಾಂಶುಪಾಲೆ ಅಂಬಿಕಾದೇವಿ, ಹಿರಿಯ ಸಹಕಾರಿಗಳು ಸತೀಶ ಪಾಟೀಲ್, ಮಾರುತಿ ವಾಡೇಕರ್, ಅಧಿಕಾರಿಗಳಾದ ಸೂರ್ಯಕಾಂತ್, ರಾಜೇಶ್, ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷ ಅಂಬದಾಸ್ ನೆರಿಗೆ ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಸ್ವಾಗತವನ್ನು ವಾಣಿಜ್ಯಶಾಸ್ತ್ರ ಪ್ರಾಧ್ಯಾಪಕ ದಯಾನಂದ ಬಾವಿಗೆ ನೆರವೇರಿಸಿದ್ದು, ವಂದನೆಯನ್ನು ಅಂಬದಾಸ್ ನೆರಿಗೆ ಹಾಗೂ ಅಭಿವೃದ್ಧಿ ಅಧಿಕಾರಿ ರಾಜೇಶ್ ಸಲ್ಲಿಸಿದರು.

ಕಾರ್ಯಕ್ರಮದ ನಂತರ ಯುವಕರೊಂದಿಗೆ ಸಂವಾದ ಕಾರ್ಯಕ್ರಮ ನಡೆದಿದ್ದು, ನೂರಾರು ವಿದ್ಯಾರ್ಥಿಗಳು ಭಾಗವಹಿಸಿ ಕಾರ್ಯಕ್ರಮದ ಲಾಭ ಪಡೆದು-ಕೊಂಡರು.

## ಪುರಸಭೆ: ಲ್ಯಾಪ್‌ಟಾಪ್ ಪಡೆಯಲು ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ನ.13:ಕುರೇಕುಪ್ಪ ಪುರಸಭೆ ಕಾರ್ಯಾಲಯದಿಂದ 2024-25 ನೇ ಸಾಲಿನ ಎಸ್.ಎಫ್.ಸಿ ಅನುದಾನದ ಖರ್ಚಾಗದೇ ಉಳಿದ ಮುಕ್ತ ನಿಧಿಯ ಶೇ.24.10 ಎಸ್‌ಸಿಎಸ್‌ಪಿ ಯೋಜನೆಯಡಿ ಬಿಇ ಮತ್ತು ಎಂಬಿಬಿಎಸ್(ಮೆಡಿಕಲ್) ವಿದ್ಯಾರ್ಥಿಗಳಿಗೆ ಲ್ಯಾಪ್‌ಟಾಪ್ ವಿತರಣೆ ಮಾಡಲು ಉದ್ದೇಶಿಸಲಾಗಿದ್ದು, ಅರ್ಹ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ನಿಗಧಿತ ನಮೂನೆ ಅರ್ಜಿ, ಮತದಾರರ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಡಿತರ ಚೀಟಿ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಇತ್ತೀಚಿನ ಭಾವ ಚಿತ್ರ, ಪ್ರಸ್ತಕ ಸಾಲಿನ ಅಂಕ ಪಟ್ಟಿ, ವಿದ್ಯಾಭ್ಯಾಸ ಪ್ರಮಾಣ ಪತ್ರ, ಕಾಲೇಜು ಐಡಿ ಕಾರ್ಡ್ ಲಗತ್ತಿಸಿಬೇಕು. ಅರ್ಜಿ ಸಲ್ಲಿಸಲು ನವೆಂಬರ್ 17 ಕೊನೆಯ ದಿನ.

ಹೆಚ್ಚಿನ ಮಾಹಿತಿಗಾಗಿ ಕುರೇಕುಪ್ಪ ಪುರಸಭೆ ಕಚೇರಿಗೆ ಸಂಪರ್ಕಿಸಬಹುದು ಎಂದು ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಹಕಾರಿ ಬ್ಯಾಂಕದಿಂದ ಅಧ್ಯಕ್ಷ ಕೆಂಭಾವಿಗೆ ಸನ್ಮಾನ

ತಾಳಿಕೋಟಿ: ಪಟ್ಟಣದ ಮುಸ್ಲಿಂ ಸಮಾಜದ ಪ್ರತಿಷ್ಠಿತ ದಿ. ಮುಸ್ಲಿಂ ಕೋ-ಆಪರೇಟಿವ್ ಬ್ಯಾಂಕ್ ಇದರ



ನೂತನ ಅಧ್ಯಕ್ಷರಾಗಿ ಇತ್ತೀಚೆಗೆ ಆಯ್ಕೆಯಾದ ಮಹಬೂಬ ಹಜರೇಸಾಬ ಕೆಂಬಾವಿ ಇವರನ್ನು ಸಹಕಾರಿ ಬ್ಯಾಂಕ್ ಆಡಳಿತ ಮಂಡಳಿ ವತಿಯಿಂದ ಬುಧವಾರ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಸಹಕಾರಿ ಬ್ಯಾಂಕ್ ಅಧ್ಯಕ್ಷ ಕಾಶಿನಾಥ ಸಜ್ಜನ ಮಾತನಾಡಿ ಮುಸ್ಲಿಂ ಬ್ಯಾಂಕ್ ಪಟ್ಟಣದ ಅತ್ಯುತ್ತಮ ಬ್ಯಾಂಕುಗಳಲ್ಲಿ ಒಂದಾಗಿದೆ ಇದನ್ನು ಇನ್ನಷ್ಟು ಅಭಿವೃದ್ಧಿ ಕಡೆಗೆ ತೆಗೆದುಕೊಂಡು ಹೋಗಲು ನಿರ್ದೇಶಕರು ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ ಅವಕಾಶದ ಸದುಪಯೋಗ ಮಾಡಿಕೊಂಡು ಶಕ್ತಿಮೀರಿ ಕೆಲಸ ಮಾಡಿ ಆಡಳಿತ ಮಂಡಳಿ ವತಿಯಿಂದ ನಿಮಗೆ ಅಭಿನಂದಿಸಿ ಶುಭ ಹಾರೈಸುತ್ತೇನೆ ಎಂದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ನೂತನ ಅಧ್ಯಕ್ಷ ಕೆಂಬಾವಿಯವರು ನನ್ನನ್ನು ಕ-ರೆದು ಸನ್ಮಾನಿಸಿದ್ದಕ್ಕಾಗಿ ಕೃತಜ್ಞತೆ ಸಲ್ಲಿಸುತ್ತೇನೆ, ನಿಮ್ಮ ಸಲಹೆ ಸಹಕಾರ ಮಾರ್ಗದರ್ಶನ ಸದಾ ಇರಲಿ ಎಂದರು. ಈ ಸಮಯದಲ್ಲಿ ಬ್ಯಾಂಕನ ಉಪಾಧ್ಯಕ್ಷ ಚಿಂತಪ್ಪಗೌಡ ಯಾಳಗಿ, ನಿರ್ದೇಶಕರಾದ ಎಂ.ಎಸ್.ಸರಶಟ್ಟಿ, ಬಾಬು ಹಜೇರಿ, ದ್ಯಾಮನಗೌಡ ಪಾಟೀಲ, ಸುರೇಶ ಪಾಟೀಲ, ಸಂಜೀವಪ್ಪ ಬರದೇನಾಳ, ರಾಮಣ್ಣ ಕಟ್ಟಿಮನಿ, ಮುಸ್ಲಿಂ ಬ್ಯಾಂಕ್ ನಿರ್ದೇಶಕರಾದ ತನ್ವೀರ ಮನಗೂಳಿ, ಮುನ್ನಾ ಅರ್ಜುಣಗಿ, ಪಿಕೆಪಿಎಸ್ ನಿರ್ದೇಶಕ ದಸ್ತಗೀರ ಕೆಂಭಾವಿ, ಸಹಕಾರಿ ಬ್ಯಾಂಕ್ ವ್ಯವಸ್ಥಾಪಕಿ ಮಣೂರ ಇದ್ದರು.

## ರಾಜ್ಯಮಟ್ಟದ ಕುಸ್ತಿ–ಅಮೂಲ್ಯ, ಲಾವಣ್ಯಗೆ ಪ್ರಶಸ್ತಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.13–ವಿಜಯಪುರದ ಸಿಂದಗಿಯ ಎಸ್.ಜಿ.ಪದವಿ ಪೂರ್ವ ಕಾಲೇಜಿನಲ್ಲಿ ಇತ್ತೀಚಿಗೆ ನಡೆದ ಕರ್ನಾಟಕ ರಾಜ್ಯಮಟ್ಟದ ಪದವಿ ಪೂರ್ವ ಮಹಾವಿದ್ಯಾಲಯಗಳ ಕುಸ್ತಿ ಸ್ಪರ್ಧೆಯಲ್ಲಿ ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಲೋಕಾಪೂರ ಮಹಿಳಾ ಪದವಿ ಪೂರ್ವ ಕಾಲೇಜಿನ ಅಮೂಲ್ಯ ತಳವಾರ(59ಕೆ.ಜಿ) ಮತ್ತು ಲಾವಣ್ಯ ಪವಾರ(68 ಕೆ.ಜಿ.) ಕುಸ್ತಿಯಲ್ಲಿ ತೃತೀಯ ಸ್ಥಾನ ಪಡೆದಿದ್ದಾರೆ.

ಸಂಸ್ಥೆಗೆ ಕೀರ್ತಿ ತಂದ ವಿದ್ಯಾರ್ಥಿನಿಯರನ್ನು ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಶಾಲಾ ಆಡಳಿತ ಮಂಡಳಿಯ ಕಾರ್ಯಾಧ್ಯಕ್ಷ ಮಹಾಂತೇಶ ಶೆಟ್ಟರ, ಪದನಿಮಿತ್ತ ಕಾರ್ಯದರ್ಶಿ ಕೆ.ಎಚ್. ಹೊಸೂರ, ಪ್ರಾಚಾರ್ಯ ಎಸ್.ಎಮ್.ಹುದ್ದಾರ, ಕ್ರೀಡಾ ಉಪನ್ಯಾಸಕ ಆರ್.ಎಚ್.ತೋಳಮಟ್ಟಿ ಇದ್ದರು.

## ರಾಜ್ಯಮಟ್ಟದ ಈಜು ಸ್ಪರ್ಧೆ ಪೃಥ್ವಿರಾಜ ಹಿರೇಮಠ ತೃತೀಯ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.13–2025–26ನೇ ಸಾಲಿನ ಶಾಲಾ ಬಾಲಕ ಮತ್ತು ಬಾಲಕಿಯರ ರಾಜ್ಯಮಟ್ಟದ ಈಜು ಸ್ಪರ್ಧೆಯ ಬಾಲಕರ ವಿಭಾಗದ 50 ಮೀಟರ ಮತ್ತು 100 ಮೀಟರ ಬಟರ್ ಪ್ಲೈ ಸ್ಪರ್ಧೆಯಲ್ಲಿ ಜಿಲ್ಲೆಯ ಜಮಖಂಡಿಯ

ಬಸವಜ್ಯೋತಿ ಆಂಗ್ಲ ಮಾಧ್ಯಮ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಪೃಥ್ವಿರಾಜ ಹಿರೇಮಠ ತೃತೀಯ ಸ್ಥಾನ ಪಡೆದಿದ್ದಾರೆ ಎಂದು ಪ್ರಾಚಾರ್ಯ ಡಾ.ಟಿ.ಪಿ.ಗಿರಡ್ಡಿ ತಿಳಿಸಿದ್ದಾರೆ. ಶಾಲಾ ಶಿಕ್ಷಣ ಇಲಾಖೆಯ ಮೈಸೂರು ಜಿಲ್ಲಾ ಉಪನಿರ್ದೇಶಕರ ಕಚೇರಿಯ ಆಶ್ರಯದಲ್ಲಿ ನ.8 ಮತ್ತು ನ.9 ರಂದು ಮೈಸೂರಿನ ಯುನಿವರ್ಸಿಟಿ ಸ್ವಿಮಿಂಗ್ ಪೂಲಿನಲಿ ನಡೆದ ಈಜು ಮತ್ತು ಡೈವಿಂಗ್ ಸ್ಪರ್ಧೆಯಲ್ಲಿ ಪೃಥ್ವಿರಾಜ್ ಈ ಸಾಧನೆ ಮಾಡಿದ್ದಾರೆ. ವಿದ್ಯಾರ್ಥಿಯ ಸಾಧನೆಗೆ ಸಂಸ್ಥೆಯ ಅಧ್ಯಕ್ಷ ಡಾ.ಗಿರೀಶ ಕಡ್ಡಿ, ಆಡಳಿತಾಧಿಕಾರಿ ಪ್ರೊ.ಬಸವರಾಜ ಕಡ್ಡಿ ಹಾಗೂ ಶಿಕ್ಷಕ–ಶಿಕ್ಷಕೇತರ ಸಿಬ್ಬಂದಿ ಹರ್ಷ ವ್ಯಕ್ತಪಡಿಸಿದ್ದಾರೆ.

## ಇಂದಿನಿಂದ ಕೊಣ್ಣೂರ ಮಡ್ಡಿ ಪ್ಲಾಟ ನಿವಾಸಿಗಳ ಧರಣಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.13–ಜಮಖಂಡಿ ತಾಲೂಕಿನ ಕೊಣ್ಣೂರ ಗ್ರಾಮದ ಮಡ್ಡಿಪ್ಲಾಟ್ ಪ್ರದೇಶದ ನಿವಾಸಿಗಳಿಗೆ ಇ–ಸ್ವತ್ತು ಹಂಚಿಕೆ ಮಾಡಿ ಶಾಶ್ವತ ಪರಿಹಾರ ಒದಗಿಸಬೇಕೆಂದು ಆಗ್ರಹಿಸಿ ನ.14 ರಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಅನಿರ್ಧಿಷ್ಟಾವಧಿ ಧರಣಿ ಸತ್ಯಾಗ್ರಹ ನಡೆಸಲಾಗುವುದು ಎಂದು ಗದಿಗೆಪ್ಪ ಧಾರವಾಡ ತಿಳಿಸಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿದ ಅವರು, 1992ರಿಂದ 2007ರವರೆಗೆ ಮಡ್ಡಿ ಪ್ಲಾಟ್‌ನಲ್ಲಿ ವಾಸಿಸುತ್ತಿರುವ ನಿರಾಶ್ರಿತರಿಗೆ ಸರ್ಕಾರ 119 ಹಕ್ಕು ಪತ್ರಗಳನ್ನು ನೀಡಿತ್ತು. ಆದರೆ 2007ರಿಂದ 2024ರವರೆಗೆ ತೆರಿಗೆ ಪಾವತಿಸುತ್ತಿದ್ದರೂ ಇಂದಿನವರೆಗೆ ಅವರಿಗೆ ಇ–ಸ್ವತ್ತು ನೀಡದೇ ಜಿಲ್ಲಾಡಳಿತ ನಿರ್ಲಕ್ಷ್ಯ ತೋರಿಸಿದೆ ಎಂದು ಆರೋಪಿ ಸಿದರು.

ಪ್ರಸ್ತುತ ಸುಮಾರು 262 ಕುಟುಂಬಗಳು ಈ ಪ್ರದೇಶದಲ್ಲಿ ವಾಸಿಸುತ್ತಿದ್ದು, ಗ್ರಾಮ ಪಂಚಾಯಿತಿಯವರು ಈ ಕುರಿತು ಸಮೀಕ್ಷೆ ನಡೆಸಿ ಜಿಲ್ಲಾಡಳಿತಕ್ಕೆ ವರದಿ ಸಲ್ಲಿಸಿದ್ದಾರೆ. ಅಲ್ಲಿನ ನಿವಾಸಿಗಳಿಗೆ ನೀರು, ರಸ್ತೆ, ವಿದ್ಯುತ್ ಮೊದಲಾದ ಮೂಲಭೂತ ಸೌಕರ್ಯಗಳ ಕೊರತೆ ಇದೆ. ಇ–ಸ್ವತ್ತು ನೀಡುವ ಮೂಲಕ ಶಾಶ್ವತ ಪರಿಹಾರ ಒದಗಿಸಿ, ಆ ಪ್ರದೇಶವನ್ನು ಕಂದಾಯ ಗ್ರಾಮವನ್ನಾಗಿ ಘೋಷಿಸುವಂತೆ ಆಗ್ರಹಿಸುತ್ತೇವೆ ಎಂದು ಹೇಳಿದರು.

ಮುಖಂಡ ವೀರಣ್ಣ ಹಳೇಗೌಡರ ಮಾತನಾಡಿ, ಮಡ್ಡಿ ಪ್ಲಾಟ್‌ನ ಜನರ ಹಕ್ಕುಪತ್ರ ಹಾಗೂ ಇ–ಸ್ವತ್ತು ವಿಚಾರ ವರ್ಷಗಳಿಂದ ಬಾಕಿಯಾಗಿದೆ. ಶಾಸಕರು ಹಾಗೂ ಸರ್ಕಾರ ಜನರ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ ಶಾಶ್ವತ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಳಪ್ಪ ಇಟ್ಟನ್ನವರ, ಮಹಾಂತೇಶ ತಳವಾರ ಉಪಸ್ಥಿತರಿದ್ದರು.

## ಕ್ರೀಡಾ ಸಾಧನೆಗೆ ಸತತ ಪರಿಶ್ರಮ ಅಗತ್ಯ: ಡಾ.ಅರುಣಕುಮಾರ



**ವಿಶಾಲ ಲಮಾಣಿ 100 ಹಾಗೂ 200 ಮೀಟರ ಓಟದಲ್ಲಿ ಮತ್ತು 4*100 ರಿಲೆಯಲ್ಲಿ ಪ್ರಥಮ ಸ್ಥಾನಗಳಿಸಿ ಮೂರು ಬಂಗಾರದ ಪದಕ ಪಡೆದಿದ್ದಾನೆ. ಮಹಿಳಾ ವಿಭಾಗದಲ್ಲಿ ಅಶ್ವಿನಿ ನರಸನ್ನವರ ಚಕ್ರ ಎಸೆತ ಮತ್ತು ಗುಂಡು ಎಸೆತ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನದೊಂದಿಗೆ ಎರಡು ಬಂಗಾರ ಪದಕ ಪಡೆದಿದ್ದಾಳೆ.**

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ನ.13–ವಿದ್ಯಾರ್ಥಿಗಳು ಅಭ್ಯಾಸದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಆಸಕ್ತಿ,ಉತ್ಸಾಹ ರೂಢಿಸಿಕೊಳ್ಳಬೇಕು. ಸತತಪರಿಶ್ರಮದೊಂದಿಗೆ ಕ್ರೀಡೆಗಳಲ್ಲಿ ಸಾಧನೆ ತೋರಬಹುದಾಗಿದೆ ಎಂದು ನವನಗರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ.ಅರುಣಕುಮಾರ ಗಾಳಿ ಹೇಳಿದರು.

ಇತ್ತೀಚಿಗೆ ರಬಕವಿ–ಬನಹಟ್ಟಿಯಲ್ಲಿ ಜರುಗಿದ ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯಮಟ್ಟದ 2025–26 ನೆಯ ಸಾಲಿನ ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ಸಾಧನೆ ಮಾಡಿರುವ ಕಾಲೇಜಿನ ಕ್ರೀಡಾಪಟುಗಳಿಗಾಗಿ ಹಮ್ಮಿಕೊಂಡಿದ್ದ ಅಭಿನಂದನಾ ಸಮಾರಂಭದಲ್ಲಿ ಕ್ರೀಡಾಪಟುಗಳಿಗೆ ಸನ್ಮಾನಿಸಿ ಮಾತನಾಡಿದರು.

ಕ್ರೀಡಾ ಚಟುವಟಿಕೆಗಳು ಆರೋಗ್ಯಕರ ಬದುಕಿಗೆ ಪೂರಕವಾಗಿದ್ದು, ಕಾಲೇಜಿನ ಕ್ರೀಡಾ ನಿರ್ದೇಶಕ ನೀಲಪ್ಪ ಕುರಿ ಅವರ ಪರಿಶ್ರಮದ ಮಾರ್ಗದರ್ಶನದಿಂದ ಕ್ರೀಡಾಕ್ಷೇತ್ರದಲ್ಲಿ ನಮ್ಮ ಕಾಲೇಜಿನ ವಿದ್ಯಾರ್ಥಿಗಳು ಸಾಧನೆ ಮಾಡಲು ಅನುಕೂಲವಾಗಿದೆ. ವಿದ್ಯಾರ್ಥಿಗಳು ಕ್ರೀಡಾಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕ್ರೀಡಾ ನಿರ್ದೇಶಕ ನೀಲಪ್ಪ ಕುರಿ ಮಾತನಾಡಿ, ಕಾಲೇಜಿನ ವಿದ್ಯಾರ್ಥಿಗಳ ಸತತ ಪರಿಶ್ರಮದ ಫಲವಾಗಿ ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ಪಾಲ್ಗೊಂಡ 22 ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಕಾಲೇಜಿನ ಕೀರ್ತಿ ತಂದಿರುವುದು ಹೆಮ್ಮೆಯ ಸಂಗತಿ ಎಂದರು.

ಪುರುಷರ ವಿಭಾಗದ 100 ಮೀಟರ, 200 ಮೀಟರ ಓಟ ಮತ್ತು 4*100 ರಿಲೆಯಲ್ಲಿ ವಿಶಾಲ ಲಮಾಣಿ ಪ್ರಥಮ ಸ್ಥಾನ, ತ್ರಿವಿಧ ಜಿಗಿತದಲ್ಲಿ ವೆಂಕಟೇಶ ಬಡಿಗೇರ ಪ್ರಥಮ ಸ್ಥಾನ, 4*100 ರಿಲೆ ಸ್ಪರ್ಧೆಯಲ್ಲಿ ವೀರೇಶ ಲಮಾಣಿ, ಕಿರಣಕುಮಾರ ಲಮಾಣಿ, ಭರಮಪ್ಪ ತುಳಸಿಗೇರಿ ಪ್ರಥಮ ಸ್ಥಾನ, 800 ಮೀ.ಓಟದಲ್ಲಿ ಮುತ್ತಪ್ಪ ಯಕನಾಳ ದ್ವಿತೀಯ ಸ್ಥಾನ, 4*400 ರಿಲೆ ಸ್ಪರ್ಧೆಯಲ್ಲಿ ಮುಬಿನ ಮುರಾಳ, ಮುತ್ತಪ್ಪ ಯಕನಾಳ, ವಿನಾಯಕ ಅರಳಿಕಟ್ಟಿ, ವೆಂಕಟೇಶ ಬಡಿಗೇರ ದ್ವಿತೀಯ ಸ್ಥಾನ, 4*400 ರಿಲೆ ಮಿಶ್ರಿತ ಸ್ಪರ್ಧೆಯಲ್ಲಿ ಮುತ್ತಪ್ಪ ಯಕನಾಳ, ವೆಂಕಟೇಶ ಬಡಿಗೇರ ತೃತೀಯ ಸ್ಥಾನ ಹಾಗೂ ಉದ್ದ ಜಿಗತ ಸ್ಪರ್ಧೆಯಲ್ಲಿ ವೆಂಕಟೇಶ ಬಡಿಗೇರ ತೃತೀಯ ಸ್ಥಾನ ಪಡೆದಿದ್ದಾರೆ.

ಮಹಿಳಾ ವಿಭಾಗದ 400 ಮೀ ಓಟದಲ್ಲಿ ಯಲ್ಲಮ್ಮ ತಳವಾರ ಪ್ರಥಮ ಸ್ಥಾನ, ಚಕ್ರ ಎಸೆತ ಮತ್ತು ಗುಂಡು ಎಸೆತ ಸ್ಪರ್ಧೆಯಲ್ಲಿ ಅಶ್ವಿನಿ ನರಸನ್ನವರ ಪ್ರಥಮ ಸ್ಥಾನ, ಬಲ್ಲೆ ಎಸೆತದಲ್ಲಿ ನಿಶಾ ಚವ್ಹಾನ ದ್ವಿತೀಯ ಸ್ಥಾನ, 200 ಮೀ.ಓಟದಲ್ಲಿ ಅಕ್ಷತಾ ಮಾದರ ದ್ವಿತೀಯ ಸ್ಥಾನ, ತ್ರಿವಿಧ ಜಿಗತದಲ್ಲಿ ಪ್ರೇಮಾ ಲಮಾಣಿ ತೃತೀಯ ಸ್ಥಾನ, 10ಸಾವಿರ ಮೀ ಓಟದಲ್ಲಿ ಮೀನಾಕ್ಷಿ ಚಲವನ್ನವರ ತೃತೀಯ ಸ್ಥಾನ, 4*400 ರಿಲೆ ಮಿಶ್ರಿತ ಸ್ಪರ್ಧೆಯಲ್ಲಿ ಯಲ್ಲಮ್ಮ ತಳವಾರ, ರೇಣುಕಾ ಮಡಿವಾಳರ ತೃತೀಯ ಸ್ಥಾನ ಪಡೆದಿದ್ದಾರೆ.

## ಅರಣ್ಯ ಸಂಪನ್ಮೂಲ ಸಂರಕ್ಷಣೆಗೆ ಆದ್ಯತೆ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷರಾಗಿ ಹಣಮಂತರಾವ ಚವ್ಹಾಣ ಅವರು ಅಧಿಕಾರಿ ವಹಿಸಿ ಕೊಂಡರು.

ಬೆಂಗಳೂರಿನ ವನ ವಿಕಾಸ ಭವನದ ಅರಣ್ಯ ಅಭಿವೃದ್ಧಿ ನಿಗಮದ ಕಚೇರಿಯಲ್ಲಿ ಬುಧವಾರ ಅಧಿಕಾರ ವಹಿಸಿ ಕೊಂಡರು.

ನಂತರ ಅರಣ್ಯ ಅಭಿವೃದ್ಧಿ ನಿಗಮದ ಅಧಿಕಾರಿಗಳು, ಕಾಂಗ್ರೆಸ್ ಪಕ್ಷದ ಪ್ರಮುಖರು, ಕಾರ್ಯಕರ್ತರು ಸನ್ಮಾನಿಸಿದರು.

ಸನ್ಮಾನ ಸ್ವೀಕರಿಸಿ ಉಪಾಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಹಣಮಂತರಾವ ಚವ್ಹಾಣ ಮಾತನಾಡಿ, ಅರಣ್ಯ ಇಲಾಖೆ ಸಚಿವ ಈಶ್ವರ ಖಂಡ್ರೆ ಮಾರ್ಗದರ್ಶನದಲ್ಲಿ ರಾಜ್ಯದಲ್ಲಿ ಅರಣ್ಯ ಸಂಪನ್ಮೂಲಗಳ ಸಂರಕ್ಷಣೆ ಜತೆಗೆ ಅರಣ್ಯ ಆಧರಿತ ಚಟುವಟಿಕೆಗಳನ್ನು ಉತ್ತೇಜಿಸಲು ಪ್ರಯತ್ನಿಸುವುದಾಗಿ ತಿಳಿಸಿದರು.

ಜಿಲ್ಲಾ ಪಂಚಾಯತಿ ಮಾಜಿ ಅಧ್ಯಕ್ಷ ಶಿವರಾಜ ಹಾಸನಕರ್, ಡಿಸಿಸಿ ಬ್ಯಾಂಕ್ ನಿರ್ದೇಶಕ ಅಶೋಕ ಸೋನಜೀ, ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಪ್ರಭಾ, ಪ್ರಮುಖರಾದ ಆನಂದ ದೇವಪ್ಪ, ರವೀಂದ್ರ ಚಿಡಗುಪ್ಪೆ, ಓಂಕಾರ ರಾಮಶೆಟ್ಟೆ, ಮುಸ್ತಾಕ್, ಪವನ ಬಿರಾದಾರ್, ಬಸವರಾಜ ಕರೆಪ್ಪನೋರ್, ಮಹಾದೇವ ಖರಾಬೆ ಸೇರಿದಂತೆ ಅರಣ್ಯ ಅಭಿವೃದ್ಧಿ ನಿಗಮದ ಅಧಿಕಾರಿಗಳು, ಸಿಬ್ಬಂದಿಗಳು ಹಾಜರಿದ್ದರು

## ಅಂಗನವಾಡಿ ಅಡುಗೆ ಸಹಾಯಕಿ ಹುದ್ದೆ ಕೊಡಿಸುವುದಾಗಿ ದಲಿತ ಮಹಿಳೆಗೆ ಮೋಸ ನ್ಯಾಯಕ್ಕಾಗಿ ಉಪವಾಸ ಸತ್ಯಾಗ್ರಹ : ಮಹಾಲಿಂಗ ದೊಡ್ಡಮನಿ




ರಾಯಚೂರು,ನ.13–ದೇವದುರ್ಗ ತಾಲ್ಲೂಕಿನ ಜಾಲಹಳ್ಳಿ ಗ್ರಾಮದ ವಾರ್ಡ್ ನಂ. 9ರ ಅಂಗನವಾಡಿ ಕೇಂದ್ರ–1ರಲ್ಲಿ ಕಳೆದ 30 ತಿಂಗಳ ಕಾಲ ಸ್ಥಳೀಯ ನಿವಾಸಿಯಾದ ನರಸಮ್ಮ ಗಂ. ಬಸವರಾಜ ಎಂಬ ಮಹಿಳೆಯನ್ನು ಇಲಾಖೆಯವರು ಅಡುಗೆ ಸಹಾಯಕಿಯಾಗಿ ಕೆಲಸ ಮಾಡಿಸಿಕೊಂಡಿದ್ದು ಸಂಬಳ ಇಲ್ಲ ಕೆಲಸ ಇಲ್ಲ ಮೋಸ ಮಾಡಿದ್ದಾರೆ. ಡಿವೈಎ ನೇತೃತ್ವದಲ್ಲಿ 11 ದಿನದಿಂದ ಪ್ರತಿಭಟನೆ ಜಾಲಹಳ್ಳಿ ಅಂಗನವಾಡಿ ಕೇಂದ್ರ ಎದುರು ನಡೆಸಲಾಗುತ್ತಿದೆ ಆದರೆ ಇದುವರೆವಿಗೂ ಅಧಿಕಾರಿಗಳು ಸ್ಪಂದಿಸುತ್ತಿಲ್ಲ ಹಾಗಾಗಿ ಸಂತ್ರಸ್ತೆ ಮಹಿಳೆಯೊಂದಿಗೆ ನಾಳೆಯಿಂದ ಉಪವಾಸ ಸತ್ಯಾಗ್ರಹ ಮಾಡಲಾಗುತ್ತದೆ ಎಂದು ಡಿವೈಎ ಮುಖಂಡ ಮಹಾಲಿಂಗ ದೊಡ್ಡಮನಿ ಹೇಳಿದರು. ಮಹಿಳೆಗೆ ಮುಂದಿನ ದಿನಗಳಲ್ಲಿ ಅರ್ಜಿ ಸಲ್ಲಿಸಿದರೆ ನಿನಗೆ ಸಹಾಯಕಿ ಕೆಲಸ ಸಿಗುತ್ತದೆ" ಎಂದು ಅಂಗನವಾಡಿ ಶಿಕ್ಷಕಿ, ಮೇಲ್ವಿಚಾರಕಿ ಹಾಗೂ ಸಿಡಿಪಿಓ ಅವರು ನಂಬಿಸಿ ಮೋಸ ಮಾಡಿರುವುದು ವಿಷಾದನೀಯ ಸಂಗತಿ. ಇದೀಗ ಯಾವುದೇ ಪರಿಶೀಲನೆ ಇಲ್ಲದೆ ಹೊಸ ವ್ಯಕ್ತಿಯೊಬ್ಬರನ್ನು ಸುಳ್ಳು ದಾಖಲೆಗಳ ಆಧಾರದ ಮೇಲೆ ನೇಮಕ ಮಾಡಿ ಆದೇಶ ನೀಡಲಾಗಿದೆ ಇದುವರೆಗೆ ಮಾಡಿದ ಅಡುಗೆ ಸಹಾಯಕಿ ಕೆಲಸಕ್ಕೆ ನರಸಮ್ಮಗೆ ಯಾವುದೇ ಸಂಬಳ ನೀಡದಿರುವುದು ಅಮಾಯಕ ದಲಿತ ಬಡ ಮಹಿಳೆಯ ಮೇಲೆ ನಡೆದ ಅನ್ಯಾಯವಾಗಿದೆ. ಮಹಿಳೆಯರ ಹಿತಾಸಕ್ತಿಗಾಗಿ ಕೆಲಸ ಮಾಡಬೇಕಾದ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಧಿಕಾರಿಗಳು ಈ ಪ್ರಕರಣದಲ್ಲಿ ಸಂಪೂರ್ಣ ನಿರ್ಲಕ್ಷ್ಯ ವಹಿಸಿರುವುದು ಖಂಡನೀಯ. ಕಳೆದ 30 ತಿಂಗಳ ಅವಧಿಯಲ್ಲಿ ನರಸಮ್ಮ ಅವರು ಅಡುಗೆ ಸಹಾಯಕಿಯಾಗಿ ಕಾರ್ಯನಿರ್ವಹಿಸಿದ್ದ ಸಾಕ್ಷ್ಯಗಳಾದ ಜಿಪಿಎಸ್ ಫೋಟೋಗಳು, ಲೈವ್ ಲೊಕೇಶನ್ ದಾಖಲೆಗಳು, ಹಾಗೂ ಅಂಗನವಾಡಿ ಶಿಕ್ಷಕಿಯವರ ಲಿಖಿತ ಹಿಂಬರ ಸೇರಿದಂತೆ ಎಲ್ಲ ದಾಖಲೆಗಳೂ ಇಲಾಖೆಯಲ್ಲಿವೆ. ಅಲ್ಲದೆ ಕಾರ್ಯಕರ್ತೆ ಗೈರಾಗಿದ್ದಾಗ ಕೇಂದ್ರಕ್ಕೆ ಬಂದ ಮೊಟ್ಟೆ ಹಾಗೂ ಇತರ ಸಾಮಗ್ರಿಗಳಿಗೆ ನರಸಮ್ಮ ಅವರೇ ಸಹಿ ಹಾಕಿ ವಹಿಸಿಕೊಂಡಿರುವ ದಾಖಲೆಗಳೂ ದೊರೆತಿವೆ. ಇಷ್ಟೆಲ್ಲಾ ಸಾಕ್ಷಿಗಳಿದ್ದರೂ ಅಧಿಕಾರಿಗಳು ಮಾತ್ರ ಇದಕ್ಕೂ ನಮಗೂ ಸಂಬಂಧವಿಲ್ಲ ಎಂಬ ನಿಲುವು ತಾಳಿರುವುದು ನಿಜಕ್ಕೂ ಬೇಸರಕಾರಿಯಾಗಿದೆ.

ಇದೆ ಸಂದರ್ಭದಲ್ಲಿ ಡಿವೈಎ ಜಿಲ್ಲಾ ಸಂಚಾಲಕ ರಾಜು ನಾಯಕ. ಗ್ರಾಮ ಪಂಚಾಯಿತಿ ಸದಸ್ಯ ಮುಕ್ತಂ ಪಾಷಾ, ತಾಲೂಕು ಅಧ್ಯಕ್ಷ ರಿಯಾಜ್ ಆರ್ಥಿ , ಮಹಿಳೆ ಯಂಕಮ್ಮ, ಮತ್ತು ಇತರರು ಇದ್ದರು

## ಕಲಾಶ್ರೀ ಚಟುವಟಿಕೆಗಳಿಗೆ ಸಿಇಒ ಕುರೇರ ಚಾಲನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ: ನವೆಂಬರ 13 : ಕರ್ನಾಟಕ ರಾಜ್ಯ ಬಾಲಭವನ ಸೊಸೈಟಿ, ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯತ್, ಸಾರ್ವಜನಿಕ ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಜಿಲ್ಲಾ ಬಾಲ ಭವನ ಸಂಯುಕ್ತಾಶ್ರಯದಲ್ಲಿ ಪ್ರಸಕ್ತ ಸಾಲಿನ ಮಕ್ಕಳ ದಿನಾಚರಣೆ ಅಂಗವಾಗಿ ಹಮ್ಮಿಕೊಂಡ ಕಲಾಶ್ರೀ ಚಟುವಟಿಕೆಗಳಿಗೆ ಜಿ.ಪಂ ಸಿಇಓ ಶಶೀಧರ ಕುರೇರ ಚಾಲನೆ ನೀಡಿದರು.

ಬಳಿಕ ಮಾತನಾಡಿದ ಅವರು ಬಾಲ ಭವನದ ಕಾರ್ಯಕ್ರಮಗಳು ಮಕ್ಕಳಲ್ಲಿರುವ ಪ್ರತಿಭೆಯನ್ನು ಗುರುತಿಸುವ ಒಂದು ಉತ್ತಮ ವೇದಿಕೆಯಾಗಿದೆ. ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ವಿಜೇತರಾಗಿ ರಾಜ್ಯ ಮಟ್ಟದಲ್ಲಿ ಪಾಲ್ಗೊಂಡು ಪ್ರಶಸ್ತಿಗಳನ್ನು ಪಡೆಯುವ ಮೂಲಕ ಜಿಲ್ಲೆಯ ಕೀರ್ತಿ ಹೆಚ್ಚಿಸಬೇಕು ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ಪ್ರಭಾಕರ ಕೆ ಮಾತನಾಡಿ ಪ್ರತಿಯೊಂದು ಮಕ್ಕಳ ಕಲಾಶ್ರೀ ಚಟುವಟಿಕೆಗಳಲ್ಲಿ ಪಾಲ್ಗೊಂಡು ವಿಜೇತರಾಗಬೇಕು ಎಂದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿ ಸುಮಂಗಲ ಹಿರೇಮನಿ, ಜಿಲ್ಲಾ ನಿರೂಪಣಾಧಿಕಾರಿ ಮಂಜುನಾಥ ಪರಸನ್ನವರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ರಮೇಶ ಸೂಳಿಕೇರಿ, ಅಧೀಕ್ಷಕರ ಜಂಬಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.



### ವಿಜೇತರಿಗೆ ಬಹುಮಾನ ವಿತರಣೆ

ಸೃಜನಾತ್ಮಕ ಕಲೆ ಸ್ಪರ್ಧೆಯಲ್ಲಿ ಸೃಷ್ಟಿ ಪರತಗೌಡರ (ಪ್ರಥಮ), ಮಹೇಶ ಕರಡಿ (ದ್ವಿತೀಯ), ಸ್ವಾತಿ ಬಡಿಗೇರ, ಸ್ನೇಹಾ ದಡ್ಡಿಮನಿ (ತೃತೀಯ), ಸೃಜನಾತ್ಮಕ ಬರವಣಿಗೆಯಲ್ಲಿ ಶ್ರೀದೇವಿ ಗೌಡರ (ಪ್ರಥಮ), ಅಪೂರ್ವ ರುಡಗಿ (ದ್ವಿತೀಯ), ಪವಿತ್ರಾ ಉಳ್ಳಾಗಡ್ಡಿ (ತೃತೀಯ), ಸೃಜನಾತ್ಮಕ ಪ್ರದರ್ಶನ ಕಲೆ ಸ್ಪರ್ಧೆಯಲ್ಲಿ ಕವಿತಾ ತುಂಬರಮಟ್ಟಿ (ಪ್ರಥಮ), ಶಿವಯೋಗಿ ಸಿದ್ದಗಿರಿಮಠ (ದ್ವಿತೀಯ), ಭೀಮಾ ವೇಷಗಾರ (ತೃತೀಯ), ವಿಜ್ಞಾನದಲ್ಲಿ ನೂತನ ಆವಿಷ್ಕಾರದಲ್ಲಿ ಸಂತೋಷ ಶಿರೂರ (ಪ್ರಥಮ), ಆರಾಧ್ಯ ಪಾಟೀಲ (ದ್ವಿತೀಯ), ಸಿಂಚನಾ ಕುಂಬಳೆ ಅವರಿಗೆ ಬಹುಮಾನ ವಿತರಿಸಲಾಯಿತು.

## ಸತತ ಪರಿಶ್ರಮದಿಂದ ಕ್ರೀಡಾ ಸಾಧನೆ ಖಚಿತ : ಡಾ.ಅರುಣಕುಮಾರ ಗಾಳಿ



**ಪುರುಷರ ವಿಭಾಗ : ವಿಶಾಲ ಲಮಾಣಿ 100 ಮೀ, 200 ಮೀ ಓಟದಲ್ಲಿ, ಮತ್ತು 4ಥ100 ರಿಲೇ ಪ್ರಥಮ ಸ್ಥಾನದೊಂದಿಗೆ ಮೂರು ಬಂಗಾರ ಪದಕ ಪಡೆದಿದ್ದಾನೆ. ಮಹಿಳಾ ವಿಭಾಗದಲ್ಲಿ ಅಶ್ವಿನಿ ನರಸನ್ನವರ ಚಕ್ರ ಎಸೆತ ಮತ್ತು ಗುಂಡು ಎಸೆತ ಸ್ಪರ್ಧೆಯಲ್ಲಿ ಪ್ರಥಮ ಸ್ಥಾನದೊಂದಿಗೆ ಎರಡು ಬಂಗಾರ ಪದಕ ಪಡೆದಿದ್ದಾಳೆ.**

ಬಾಗಲಕೋಟೆ: ಪದವಿ ಕಲಿಯುವ ವಿದ್ಯಾರ್ಥಿಗಳು ತಮ್ಮ ಅಭ್ಯಾಸದೊಂದಿಗೆ ಕ್ರೀಡಾ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಆಸಕ್ತಿ,ಉತ್ಸಾಹ ರೂಢಿಸಿಕೊಳ್ಳಬೇಕು. ನಮ್ಮ ಕಾಲೇಜಿನ ಕ್ರೀಡಾಪಟುಗಳ ಸಾಧನೆಯಿಂದ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕೀರ್ತಿಯನ್ನು ಹೆಚ್ಚಿದೆ. ಸತತ ಪರಿಶ್ರಮದಿಂದ ಕ್ರೀಡಾ ಸಾಧನೆ ಖಚಿತ ಎಂದು ಪ್ರಾಚಾರ್ಯರಾದ ಡಾ.ಅರುಣಕುಮಾರ ಗಾಳಿ ಅವರು ಹೇಳಿದರು.

ಅವರು ಇತ್ತೀಚಿಗೆ ರಬಕವಿ–ಬನ್ನಟ್ಟಿಯಲ್ಲಿ ಆಯೋಜಿಸಿದ ಜಮಖಂಡಿಯ ಬಾಗಲಕೋಟೆ ವಿಶ್ವವಿದ್ಯಾಲಯ ಮಟ್ಟದ 2025–26 ನೆಯ ಸಾಲಿನ ಅಥ್ಲೇಟಿ–ಕ್ ಕ್ರೀಡಾಕೂಟದಲ್ಲಿ ಸಾಧನೆ ಮಾಡಿರುವ ಕ್ರೀಡಾಪಟುಗಳಿಗೆ ಬಾಗಲಕೋಟೆ ನವನಗರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಕ್ರೀಡಾ ವಿಭಾಗದ ಆಶ್ರಯದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಅಥ್ಲೇಟಿಕ್ ಕ್ರೀಡಾಪಟುಗಳಿಗೆ ಸನ್ಮಾನಿಸಿ ಮಾತನಾಡಿದರು. ಕ್ರೀಡಾ ಚಟುವಟಿಕೆಗಳು ಆರೋಗ್ಯಕರ ಬದುಕಿಗೆ ಪೂರಕವಾಗಿದ್ದು, ನಮ್ಮ ಕಾಲೇಜಿನ ಕ್ರೀಡಾ ನಿರ್ದೇಶಕರಾದ ನೀಲಪ್ಪ ಕುರಿ ಅವರ ಪರಿಶ್ರಮದ ಮಾರ್ಗದರ್ಶನದಿಂದ ಕ್ರೀಡಾಕ್ಷೇತ್ರದಲ್ಲಿ ವಿದ್ಯಾರ್ಥಿಗಳು ಸಾಧನೆ ಮಾಡಲು ಅನುಕೂಲವಾಗಿದೆ. ವಿದ್ಯಾರ್ಥಿಗಳು ಕ್ರೀಡಾಮನೋಭಾವ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ಕ್ರೀಡಾ ನಿರ್ದೇಶಕ ನೀಲಪ್ಪ ಕುರಿ ಅವರು ಮಾತನಾಡಿ, ನಮ್ಮ ಕಾಲೇಜಿನ ವಿದ್ಯಾರ್ಥಿಗಳ ಸತತ ಪರಿಶ್ರಮದ ಫಲವಾಗಿ ಅಥ್ಲೇಟಿಕ್ ಕ್ರೀಡಾಕೂಟದಲ್ಲಿ ಪಾಲ್ಗೊಂಡ 22 ವಿದ್ಯಾರ್ಥಿಗಳು ಉತ್ತಮ ಸಾಧನೆ ಮಾಡಿ ಕಾಲೇಜಿನ ಕೀರ್ತಿ ತಂದಿರುವುದು ಹೆಮ್ಮೆ ತಂದಿದೆ.

ಪುರುಷರ ವಿಭಾಗ: 100 ಮೀ, 200 ಮೀ ಓಟದಲ್ಲಿ, ಮತ್ತು 4ಥ100 ರಿಲೇ ವಿಶಾಲ ಲಮಾಣಿ ಪ್ರಥಮ ಸ್ಥಾನ, ತ್ರಿವಿಧ ಜಿಗಿತದಲ್ಲಿ ವೆಂಕಟೇಶ ಬಡಿಗೇರ ಪ್ರಥಮ ಸ್ಥಾನ, 4ಥ100 ರಿಲೇ ಸ್ಪರ್ಧೆಯಲ್ಲಿ ವೀರೇಶ ಲಮಾಣಿ, ಕಿರಣಕುಮಾರ ಲಮಾಣಿ, ಭರಮಪ್ಪ ತುಳಸಿಗೇರಿ ಪ್ರಥಮ ಸ್ಥಾನ, 800 ಮೀ. ಓಟದಲ್ಲಿ ಮುತ್ತಪ್ಪ ಯಕನಾಳ ದ್ವಿತೀಯ ಸ್ಥಾನ, 4ಥ400 ರಿಲೇ ಸ್ಪರ್ಧೆಯಲ್ಲಿ ಮುಬಿನ ಮುರಾಳ, ಮುತ್ತಪ್ಪ ಯಕನಾಳ, ವಿನಾಯಕ ಅರಳಿಕಟ್ಟಿ, ವೆಂಕಟೇಶ ಬಡಿಗೇರ ದ್ವಿತೀಯ ಸ್ಥಾನ, 4ಥ400 ರಿಲೇ ಮಿಶ್ರಿತ ಸ್ಪರ್ಧೆಯಲ್ಲಿ ಮುತ್ತಪ್ಪ ಯಕನಾಳ, ವೆಂಕಟೇಶ ಬಡಿಗೇರ ತೃತೀಯ ಸ್ಥಾನ ಹಾಗೂ ಉದ್ದ ಜಿಗತ ಸ್ಪರ್ಧೆಯಲ್ಲಿ ವೆಂಕಟೇಶ ಬಡಿಗೇರ ತೃತೀಯ ಸ್ಥಾನ ಪಡೆದಿದ್ದಾರೆ. ಮಹಿಳಾ ವಿಭಾಗದ: 400 ಮೀ ಓಟದಲ್ಲಿ ಯಲ್ಲಮ್ಮ ತಳವಾರ ಪ್ರಥಮ ಸ್ಥಾನ, ಚಕ್ರ ಎಸೆತ ಮತ್ತು ಗುಂಡು ಎಸೆತ ಸ್ಪರ್ಧೆಯಲ್ಲಿ ಅಶ್ವಿನಿ ನರಸನ್ನವರ ಪ್ರಥಮ ಸ್ಥಾನ, ಬಲ್ಲೆ ಎಸೆತದಲ್ಲಿ ನಿಶಾ ಚವ್ಹಾನ ದ್ವಿತೀಯ ಸ್ಥಾನ, 200 ಮೀ.ಓಟದಲ್ಲಿ ಅಕ್ಷತಾ ಮಾದರ ದ್ವಿತೀಯ ಸ್ಥಾನ, ತ್ರಿವಿಧ ಜಿಗತದಲ್ಲಿ ಪ್ರೇಮಾ ಲಮಾಣಿ ತೃತೀಯ ಸ್ಥಾನ, 10000 ಮೀ ಓಟದಲ್ಲಿ ಮೀನಾಕ್ಷಿ ಚಲವ್ವನ್ನವರ ತೃತೀಯ ಸ್ಥಾನ, 4ಥ400 ರಿಲೇ ಮಿಶ್ರಿತ ಸ್ಪರ್ಧೆಯಲ್ಲಿ ಯಲ್ಲಮ್ಮ ತಳವಾರ, ರೇಣುಕಾ ಮಡಿವಾಳರ ತೃತೀಯ ಸ್ಥಾನ ಪಡೆದಿದ್ದಾರೆ. ಅಥ್ಲೆಟಿಕ್ ಕ್ರೀಡಾಕೂಟದಲ್ಲಿ ಸಾಧನೆ ಮಾಡಿರುವ ಕ್ರೀಡಾಪಟುಗಳಿಗೆ ಕಾಲೇಜಿನ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದಿಸಿದ್ದಾರೆ.

# ಡಿ.ಸಿ. ಬಿ.ಫೌಜಿಯಾ ತರನ್ನುಮ್ ಅವರಿಗೆ ನೀತಿ ಆಯೋಗದಿಂದ ಪ್ರಶಂಸೆ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ನ.13: ನೀತಿ ಆಯೋಗದಿಂದ ಗುರುತಿಸಲ್ಪಟ್ಟ ಜಿಲ್ಲೆಯ ಮಹತ್ವಕಾಂಕ್ಷೆಯ ತಾಲೂಕುಗಳಾದ ಅಫಜಲಪೂರ,ಶಹಾಬಾದ ಹಾಗೂ ಕಾಳಗಿ ಬ್ಲಾಕ್‌ಗಳಲ್ಲಿ ಸುಸ್ಥಿರ ಪ್ರಗತಿ ಸಾಧಿಸಲು ನವೀನ ಆಡಳಿತ ಮತ್ತು ಅಭಿವೃದ್ಧಿ ಉಪಕ್ರಮಗಳನ್ನು ಜಾರಿಗೊಳಿಸಿದ್ದಕ್ಕಾಗಿ ಕಲಬುರಗಿ ಜಿಲ್ಲಾಧಿಕಾರಿ ಬಿ.ಫೌಜಿಯಾ ತರನ್ನುಮ್ ಅವರಿಗೆ ನೀತಿ ಆಯೋಗವು ಪ್ರಶಂಸನೆ ವ್ಯಕ್ತಪಡಿಸಿದೆ.

ಭಾರತ ಸರ್ಕಾರದ "ರಾಜ್ಯಗಳಿಗೆ ನೀತಿ-ರಾಜ್ಯ ಬೆಂಬಲಿತ ಮಿಷನ್" ಅಡಿಯಲ್ಲಿ ಜಿಲ್ಲೆಯ ಬ್ಲಾಕ್‌ಗಳಲ್ಲಿ "ಸಮಗ್ರ ಶಿಕ್ಷಾ ಅಭಿಯಾನದ ಅಡಿಯಲ್ಲಿ ಉಪಕ್ರಮಗಳು" ಮತ್ತು "ಮಣ್ಣಿನ ಆರೋಗ್ಯವನ್ನು ಮರುಸ್ಥಾಪನೆ" ಹೀಗೆ ಎರಡು ವಲಯದಲ್ಲಿ ಜಿಲ್ಲೆಯ ಅಸಾಧಾರಣ ಅನುಷ್ಠಾನ ಸಾಧನ ಮತ್ತು ಉತ್ತಮ ಅಭ್ಯಾಸಗಳನ್ನು ಗುರುತಿಸಿ ನೀತಿ ಆಯೋಗವು ಮೆಚ್ಚುಗೆ ವ್ಯಕ್ತಪಡಿಸಿದೆ. ಈ ಕುರಿತು ಜಿಲ್ಲಾಧಿಕಾರಿ ಬಿ.



ಫೌಜಿಯಾ ತರನ್ನುಮ್ ಅವರಿಗೆ ಪ್ರತ್ಯೇಕವಾಗಿ ಎರಡು ವಲಯದಲ್ಲಿನ ಸಾಧನೆಗೆ ನೀತಿ ಆಯೋಗದ ಸಿ.ಇ.ಓ ಅವರು ಮೆಚ್ಚುಗೆಯ ಪ್ರಮಾಣ ಪತ್ರಗಳನ್ನು ನೀಡಿದ್ದಾರೆ.

ಶಿಕ್ಷಣ, ಕಲಿಕಾ ಫಲಿತಾಂಶಗಳು, ಡಿಜಿಟಲ್ ಕಲಿಕೆಯ ಪ್ರವೇಶ ಮತ್ತು ಸಮಗ್ರ ಶಾಲಾ ಅಭಿವೃದ್ಧಿಯನ್ನು ಬಲಪಡಿಸಲು ಕಲಬುರಗಿಯ ಪ್ರಯತ್ನ ಮತ್ತು ವಿನೂತನ ಉಪಕ್ರಮಗಳು ಅಳವಡಿಸಿಕೊಂಡಿದ್ದರಿಂದ "ಸಮಗ್ರ ಶಿಕ್ಷಾ ಅಭಿಯಾನದ" ಅಡಿಯಲ್ಲಿ ಮೆಚ್ಚಗೆಗೆ ಕಾರಣವಾಗಿದೆ.

ಅದೇ ರೀತಿ ಕೃಷಿ ಮತ್ತು ಸಂಬಂಧಿತ ಸೇವೆಗಳನ್ನು ಸುಧಾರಿಸಿ ಸುಸ್ಥಿರ ಮಣ್ಣಿನ ನಿರ್ವಹಣೆ, ಕಾಲಮಿತಿಯಲ್ಲಿ ಅನ್ನದಾತರಿಗೆ ಮಣ್ಣಿನ ಆರೋಗ್ಯ ಕಾರ್ಡ್ ವಿತರಣೆ, ಸಾವಯವ ಕೃಷಿಗೆ ಪ್ರೋತ್ಸಾಹ ಮತ್ತು ಸುಧಾರಿತ ಕೃಷಿ ಉತ್ಪಾದಕತೆಗೆ ಜಿಲ್ಲೆಯ ಹೆಚ್ಚಿನ ಒತ್ತು ನೀಡಿದ್ದಕ್ಕಾಗಿ "ಮಣ್ಣಿನ ಆರೋಗ್ಯ ಪುನ:ಸ್ಥಾಪಿಸುವ" ವಿಭಾಗದಲ್ಲಿ ಜಿಲ್ಲೆ ಪ್ರಶಂಸನೆಗೆ ಒಳಗಾಗಿದೆ. ಇದು ಜಿಲ್ಲೆಯ ಸಮಗ್ರ ಮತ್ತು ಸುಸ್ಥಿರ ಅಭಿವೃದ್ಧಿ, ನಾವೀನ್ಯತೆ-ಚಾಲಿತ ಆಡಳಿತಕ್ಕೆ ಜಿಲ್ಲೆಯ ಬದ್ಧತೆಯನ್ನು ಒತ್ತಿಹೇಳುತ್ತಿದೆ. ನೀತಿ ಫಾರ್ ಸ್ಟೇಟ್ಸ್-ಸ್ಟೇಟ್ ಸಪೋರ್ಟ್ ಮಿಷನ್ ಯೋಜನೆಯು ಭಾರತದ ಅಭಿವೃದ್ಧಿ ಗುರಿಗಳನ್ನು ವೇಗಗೊಳಿಸಲು ರಾಜ್ಯಗಳು ಮತ್ತು ಜಿಲ್ಲೆಗಳಲ್ಲಿ ಜ್ಞಾನ ವಿನಿಮಯವನ್ನು ಉತ್ತೇಜಿಸುವ ಮೂಲಕ ಯಶಸ್ವಿಸ್ಥಳೀಯ ನಾವೀನ್ಯತೆಗಳನ್ನು ಗುರುತಿಸುವ ಮತ್ತು ಅಳೆಯುವ ಗುರಿಯನ್ನು ಹೊಂದಿದೆ. ಕಲಬುರಗಿ ಜಿಲ್ಲಾಧಿಕಾರಿ ಬಿ. ಫೌಜಿಯಾ ತರನ್ನುಮ್ ಅವರ ನಾಯಕತ್ವ ಮತ್ತು ಅವರ ತಂಡದ ಸಮರ್ಪಿತ ಪ್ರಯತ್ನಗಳು ಮಹತ್ವಾಕಾಂಕ್ಷೆಯ ಜಿಲ್ಲೆಗಳು ಮತ್ತು ಬ್ಲಾಕ್‌ಗಳ ಕಾರ್ಯಕ್ರಮದ ಅಡಿಯಲ್ಲಿ ಪರಿವರ್ತನಾತ್ಮಕ ಮತ್ತು ಸುಸ್ಥಿರ ಅಭಿವೃದ್ಧಿಯತ್ತ ಶ್ರಮಿಸುತ್ತಿರುವ ಇತರ ಜಿಲ್ಲೆಗಳಿಗೆ ಸ್ಫೂರ್ತಿದಾಯಕವಾಗಿದೆ ಎಂದು ನೀತಿ ಆಯೋಗ ಪ್ರಶಂಸಿದೆ.

ಶಿಕ್ಷಣ, ಆರೋಗ್ಯ, ಕೌಶಲ್ಯ, ಕೃಷಿ ಸೇರಿದಂತೆ ಜನರ ಜೀವನ ಮಟ್ಟದ ಸುಧಾರಣೆ ನಿಟ್ಟಿನಲ್ಲಿ ಮಹತ್ವಾಕಾಂಕ್ಷೆಯ ತಾಲೂಕಿನಲ್ಲಿ ಉತ್ತಮವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿರುವ ತಾಲೂಕುಗಳಿಗೆ ಕಳೆದ ಆಗಸ್ಟ್-2024ರಲ್ಲಿ ನೀತಿ ಆಯೋಗವು ಡೆಲ್ಟಾ ರ್‍ಯಾಂಕ್-2024 ಘೋಷಿಸಿತ್ತು. ಅದರಲ್ಲಿ ದಕ್ಷಿಣ ಭಾರತ ವಲಯದಡಿ ಕಲಬುರಗಿ ಜಿಲ್ಲೆಯ ಕಾಳಗಿ ತಾಲೂಕು ಎರಡನೇ ರ್‍ಯಾಂಕ್ ಪಡೆದಿರುವುದನ್ನು ಇಲ್ಲಿ ಸ್ಮರಿಸಬಹುದಾಗಿದೆ.

# ಕಮಲನಗರ ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ:ಹರ್ಷ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಕಮಲನಗರ ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಿದರಿಂದ ಗುರುವಾರ ಕಮಲನಗರ ಪಟ್ಟಣದಲ್ಲಿ ಮುಖಂಡ ಸಂತೋಷ ಬಿರಾದಾರ ಅವರ ನೇತೃತ್ವದಲ್ಲಿ ಪಟಾಕಿ ಸಿಡಿಸಿ ಸಿಹಿ ಹಂಚಿ ಸಂಭ್ರಮಿಸಿದರು.

ರಾಜ್ಯಸಂಪುಟದಿಂದ ಅನುಮೋದನೆ ಪಡೆಯಲು ಶ್ರಮಿಸಿದ ಬೀದರ ಜಿಲ್ಲಾ ಉಸ್ತುವಾರಿ ಹಾಗೂ ಅರಣ್ಯ, ಪರಿಸರ ಮತ್ತು ಸನ್ಮಾನ್ಯ ಶ್ರೀ ಈಶ್ವರ ಖಂಡ್ರೆ ಹಾಗೂ ಪೌರಾಡಳಿತ ಸಚಿವರಾದ ಶ್ರೀ ರಹಿಂ ಖಾನ ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು ಸಲ್ಲಿಸಿದರು.

# ಬೀದರ ಜಿಲ್ಲಾ ಅಥ್ಲೇಟಿಕ್

## ಅಸೋಶಿಯೇಷನ್ ಅಸ್ಮಿತಾ ಲೀಗ್

ಬೀದರ: ಕ್ರೀಡಾಪಟ್ಟುಗಳ ವಿಶೇಷವಾಗಿ ಹೆಣ್ಣುಮಕ್ಕಳ ಪ್ರತಿಭೆಯನ್ನು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಡುವ ಉದ್ದೇಶದಿಂದ ಇಂಡಿಯನ್ ಅಥ್ಲೇಟಿಕ್ ಅಸೋಶಿಯೇಷನ್ ಆದೇಶದನ್ವಯ ಬೀದರ ಜಿಲ್ಲಾ ಅಥ್ಲೇಟಿಕ್ ಅಸೋಶಿಯೇಷನ್ ನ. 22, 2025 ರಂದು 10 ಗಂಟೆಗೆ (ಶನಿವಾರ) ಅಸ್ಮಿತಾ ಲೀಗ್ (೦ಖಒಖಖಂ ಐಇ೦ಉಗಇ) ಅನ್ನು ನಗರದ ನೆಹರು ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದೆ. 14 ಮತ್ತು 16 ವಯಸ್ಸಿನ ಒಳಗಿನ ಕೇವಲ ಮಹಿಳಾ ಕ್ರೀಡಾಪಟ್ಟುಗಳು ಮಾತ್ರ ಭಾಗವಹಿಸಬಹುದು. ಸ್ಪರ್ಧೆಯ ಅರ್ಹತೆಗಳು ಮತ್ತು ವಯೋಮಾನ: 14 ವರ್ಷ ಒಳಗಿನ ಬಾಲಕಿಯರ ಜನನ 21.12.2011 ರಿವಂದ 20.12.2013ರಲ್ಲಿ ಜನನವಾಗಿರಬೇಕು. 16 ವರ್ಷ ವಯಸ್ಸಿನ ಬಾಲಕಿಯರ ಜನನ 21.12.2009 ಮತ್ತು 20.12.2011 ರಲ್ಲಿ ಜನನವಾಗಿರಬೇಕು. ಇಂಡಿಯನ್ ಅಥ್ಲೇಟಿಕ್ ಅಸೋಶಿಯೇಷನ್‌ನಿಂದ ಪರಿವೀಕ್ಷಕರ ನಿಗರಾಣಿಯಲ್ಲಿ ಈ ಕ್ರೀಡೆ ಜರುಗಲಿವೆ. 14 ವರ್ಷ ಒಳಪಟ್ಟ ಬಾಲಕಿಯರ ಕ್ರೀಡೆಗಳು: ಟ್ರೋಥೆಲೋನ್ ಎ- 60 ಮೀ. ಓಟ, ಉದ್ದ ಜೀಗಿತ, ಎತ್ತರ ಜೀಗಿತ, ಟ್ರೋಥೆಲೋನ್ ಬಿ- 60 ಮೀ ಉದ್ದ ಜೀಗಿತ, 1 ಕೆಜಿ ಗುಂಡು ಎಸೆತ, ಟ್ರೋಥೆಲೋನ್ ಸಿ- 60 ಮೀ ಉದ್ದ ಜೀಗಿತ, 600 ಮೀ ಕ್ರೀಡೆಗಳು.

16 ವರ್ಷ ಒಳಪಟ್ಟ ಬಾಲಕಿಯರ ಕ್ರೀಡೆಗಳು: 60 ಮೀ, 600 ಮೀ, ಉದ್ದ ಜೀಗಿತ, ಎತ್ತರ ಜೀಗಿತ, ಡಿಸ್ಕಸ್ ಥ್ರೋ 1 ಕೆಜಿ, ಶಾಟ್‌ಪುಟ್ 3 ಕೆಜಿ, ಜಾವೇಲಿನ್ 500 ಗ್ರಾ. ಸ್ಪರ್ಧೆಗಳು ಇರುತ್ತವೆ.

ಎಲ್ಲಾ ಕ್ರೀಡಾಪಟ್ಟುಗಳು ಸರಿಯಾದ ಸಮಯಕ್ಕೆ ಆಗಮಿಸಬೇಕೆಂದು ಈ ಮೂಲಕ ಸೂಚಿಸಲಾಗಿದೆ.

# ವಿದ್ಯಾರ್ಥಿಗಳ ಕಲೆ ಪ್ರದರ್ಶಿಸಲು ಪ್ರತಿಭಾ ಕಾರಂಜ ಉತ್ತಮ ವೇದಿಕೆ: ವೆಂಕಟೇಶ್ ಗುಡಾಳ

ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪ್ರತಿಭಾ ಕಾರಂಜಿ ಪೂರಕವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ವೆಂಕಟೇಶ್ ಗುಡಾಳ ಹೇಳಿದರು. ಸಮೂಹ ಸಂಪನ್ಮೂಲ ಕೇಂದ್ರ ಚಿಟಗುಪ್ಪ, ಕನ್ನಡ ಹಾಗೂ ಉರ್ದು ಮತ್ತು ಉಡಬಾಳ ವಲಯ ಮಟ್ಟದ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮವನ್ನು ಗುರುವಾರ ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣ ಇಲಾಖೆ ಮಕ್ಕಳ ಭವಿಷ್ಯ ರೂಪಿಸುವ ಇಲಾಖೆ. ಮಕ್ಕಳ ಪ್ರತಿಭೆ ಹೊರ ಹಾಕುವಲ್ಲಿ ಶಿಕ್ಷಕರ ಪಾತ್ರ ಮುಖ್ಯವಾಗಿದೆ. ಪಾಲಕರ ಸಹಕಾರವೂ ಅಷ್ಟೇ ಮುಖ್ಯವಾಗಿದೆ. ಸಮಾಜಕ್ಕೆ ಮಕ್ಕಳ ಪ್ರತಿಭೆ ತೋರಿಸಲು ಪ್ರತಿಭಾ ಕಾರಂಜಿ ಉತ್ತಮ ವೇದಿಕೆಯಾಗಿದೆ ಎಂದರು. ಸದ್ಬೋಧನಿ ಶಿಕ್ಷಣ ಸಂಸ್ಥೆಯ ಉಪಾಧ್ಯಕ್ಷ ಪ್ರಭುಶೆಟ್ಟಿ ತುಗಾಂವ ಮಾತನಾಡಿ, ಕಲೆ ಸಾಹಿತ್ಯ ಸಂಗೀತ ನೃತ್ಯ ಗಾಯನ ಇವು ಕಲಾಪ್ರಕಾರಗಳಾಗಿದ್ದು, ಪ್ರತಿಯೊಬ್ಬರನ್ನೂ ಆಕರ್ಷಿಸುತ್ತವೆ. ಆದರೆ ಕೆಲವರಲ್ಲಿ ಈ ಮಾತ್ರ ಕಲಾ ಪ್ರತಿಭೆ ಮೈಗೂಡಿರುತ್ತದೆ. ಸರಕಾರ ಮಕ್ಕಳಲ್ಲಿ ಅಡಗಿರುವ ಕಲೆಯನ್ನು ಗುರುತಿಸಿ ಪ್ರೋತ್ಸಾಹಿಸುವ ಉದ್ದೇಶದಿಂದ ಪ್ರತಿಭಾ ಕಾರಂಜಿ ಕಾರ್ಯಕ್ರಮ ಜಾರಿಗೆ ತಂದಿರುವುದು ಉತ್ತಮ ಕಾರ್ಯವಾಗಿದೆ ಎಂದರು. ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ರಾಜಪ್ಪ ಜಮಾದರ್ ಮಾತನಾಡಿ, ಪ್ರತಿಯೊಂದು ಮಗುವಿನಲ್ಲೂ ಒಂದಲ್ಲ ಒಂದು ಸಾಂಸ್ಕೃತಿಕ ಪ್ರತಿಭೆ ಅಡಗಿರುತ್ತದೆ. ಅದನ್ನು ಗುರುತಿಸಿ ಅನಾವರಣ ಮಾಡುವ ಮೂಲಕ ಮಕ್ಕಳು ಸರ್ವಾಂಗೀಣ ಬೆಳವಣಿಗೆ ಸಾಧಿಸಲು ಅವಕಾಶ ಕಲ್ಪಿಸಬೇಕು. ಸೋಲು, ಗೆಲುವಿನ ಬಗ್ಗೆ ಯೋಚಿಸದೆ ಸ್ಪರ್ಧೆಗಳಲ್ಲಿ ಎಲ್ಲ ವಿದ್ಯಾರ್ಥಿಗಳು ಭಾಗವಹಿಸಬೇಕು ಎಂದರು. ಸದ್ಬೋಧನಿ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರಮೇಶ ಪಾರಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಈ ಸಂದರ್ಭದಲ್ಲಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ರವೀಂದ್ರರೆಡ್ಡಿ ಮಾಲಿ ಪಾಟೀಲ್, ಸಾವಿತ್ರಿಬಾಯಿ ಫುಲೇ ಶಿಕ್ಷಕಿಯರ ಸಂಘದ ತಾಲೂಕಾಧ್ಯಕ್ಷೆ ಪ್ರೇಮಿಳಾ ರೆಡ್ಡಿ, ಸದ್ಬೋಧನಿ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಶರದ್ ಮಾಹಿಂದ್ರಕರ್, ರಾಜ-ರೆಡ್ಡಿ ಚಾಮರೆಡ್ಡಿ, ಅನಂದಯ್ಯಾ ಮಠಪತಿ, ಬಸವರಾಜ ದಿಗಡೆ, ಬಿಆರ್‌ಪಿ. ರಾಮುಲು, ಸಿ.ಆರ್. ಪಿ. ರಾಮಚಂದ್ರ, ನಾಜಮೀನ್ ಸುಲ್ತಾನ, ಅಖಿಲ್, ರತ್ನಪ್ಪ, ಸಂಜೀವನ ಭೋಸ್ಲೆ, ಗುಂಡಪ್ಪ ಕೋರೆ, ಸಂತೋಷ ತಾಂಡುರ್, ಪ್ರಶಾಂತ ರೆಡ್ಡಿ, ಮಾಣಿಕ ಪವಾರ್, ಹಸನ್ ಲಚ್ಚಿಕೆ, ಶಿವರಾಜ ಮಿತ್ರ, ರೇವಶೆಟ್ಟಿ ತಂಗಾ, ಮಾಹದೇವಿ ಗುಜ್ಜರ್, ಗೋಪಾಲ್, ದೀಪಿಕಾ ಸಗರ್, ಸುನೀತಾ ಹಮ್ಮಿಲಪುರಕರ್, ತಸ್ಲೀಮ ಬೇಗಂ, ಅನ್ನಪೂರ್ಣ, ಮಾಯಾ ಕುಕಡಲ್, ಜಯಮಣಿ, ಸವಿತಾ ಚವ್ಹಾಣ, ವಿಜಯಾ ಸಿಂಧೆ, ಸುಕಲತಾ, ನಾಗೇಶ್ವರಿ ಯಲಮಡಗಿ ಸೇರಿದಂತೆ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ವೀರಾರೆಡ್ಡಿ ನಿರೂಪಿಸಿದರು. ಕೊನೆಯಲ್ಲಿ ಮಲ್ಲಪ್ಪ ಸಗರ್ ವಂದಿಸಿದರು.



**ವಿವಿಧ ಸ್ಪರ್ಧೆಗಳಲ್ಲಿ ಮಕ್ಕಳು ಉತ್ಸಾಹದಿಂದ ಭಾಗವಹಿಸಿದ್ದರು. ಅಭಿನಯ ಗೀತೆ, ಕಂಠಪಾಠ, ಛದ್ಮವೇಷ, ಚಿತ್ರಕಲೆ, ಮಣ್ಣಿನ ಮಾದರಿ ರಚನೆ, ಹಾಗೂ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳ ಮುಖಾಂತರ ತಮ್ಮ ಪ್ರತಿಭೆಯನ್ನು ಹೊರ ಹಾಕಿದರು. ತೀರ್ಪುಗಾರರಾಗಿ ಶಿಕ್ಷಕರು, ಶಿಕ್ಷಕಿಯರು ಕಾರ್ಯನಿರ್ವಹಿಸಿದರು.**

# ಪೋಕ್ಸೊ ಕೇಸ್‌ನಲ್ಲಿ ಬಿ.ಎಸ್. ಯಡಿಯೂರಪ್ಪಗೆ ನೀಡಿದ್ದ ಸಮನ್ಸ್ ರದ್ದು ಮಾಡಲು ಹೈಕೋರ್ಟ್ ನಕಾರ



### ಕೋರ್ಟ್ ಆದೇಶ

**ವಿಚಾರಣಾ ಹಂತದಲ್ಲಿ ಯಡಿಯೂರಪ್ಪ ಅವರ ಅಗತ್ಯವಿಲ್ಲದಿದ್ದರೆ ವಿಚಾರಣೆಗೆ ಹಾಜರಾಗುವಂತೆ ಒತ್ತಾಯಿಸಬಾರದು ಎಂದು ನ್ಯಾಯಾಲಯ ಹೇಳಿದೆ. ಯಡಿಯೂರಪ್ಪ ಪರ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡನೆ ಮಾಡಿದ್ದರು. ಅರ್ಜಿದಾರರ ಪರ ವಕೀಲರ ವಾದ ಮತ್ತು ಸಿಐಡಿ ತನಿಖಾಧಿಕಾರಿ ಪರ ವಿಶೇಷ ಅಭಿಯೋಜಕರ ಪ್ರತಿವಾದ ಆಲಿಸಿ ಕೋರ್ಟ್ ಆದೇಶ ನೀಡಿದೆ.**

ಬೆಂಗಳೂರು, ನ.13: ಪೋಕ್ಸೊ ಪ್ರಕರಣದಲ್ಲಿ ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಅವರಿಗೆ ನೀಡಿದ್ದ ಸಮನ್ಸ್ ರದ್ದುಪಡಿಸಲು ಹೈಕೋರ್ಟ್ ನಿರಾಕರಿಸಿದೆ. ಪೋಕ್ಸೊ ಕೇಸ್‌ನಲ್ಲಿ (ಕಂಥಿತ ಅಛಿಜ) ನೀಡಿದ್ದ ಸಮನ್ಸ್ ರದ್ದು ಕೋರಿ ಬಿ.ಎಸ್. ಯಡಿಯೂರಪ್ಪ ಸಲ್ಲಿಸಿದ್ದ ಅರ್ಜಿಯನ್ನು ಹೈಕೋರ್ಟ್ ನ್ಯಾಯಮೂರ್ತಿ ಎಂ.ಐ ಅರುಣ್ ಅವರಿದ್ದ ನ್ಯಾಯಪೀಠವು ವಿಚಾರಣೆ ನಡೆಸಿದ್ದು, ವಿಚಾರಣಾ ನ್ಯಾಯಾಲಯದ ಸಮನ್ಸ್ ರದ್ದುಪಡಿಸಲು ನಿರಾಕರಿಸಿದ್ದಾರೆ. ಇದರಿಂದ ಯಡಿಯೂರಪ್ಪ ಅವರಿಗೆ ಭಾರಿ ಹಿನ್ನಡೆ ಉಂಟಾಗಿದ್ದು, ಅವರ ವಿರುದ್ಧ ಸಿಐಡಿ ವಿಚಾರಣೆ ಮುಂದುವರಿಯಲಿದೆ.

ವಿಚಾರಣಾ ಹಂತದಲ್ಲಿ ಯಡಿಯೂರಪ್ಪ ಅವರ ಅಗತ್ಯವಿಲ್ಲದಿದ್ದರೆ ವಿಚಾರಣೆಗೆ ಹಾಜರಾಗುವಂತೆ ಒತ್ತಾಯಿಸಬಾರದು ಎಂದು ನ್ಯಾಯಾಲಯ ಹೇಳಿದೆ. ಯಡಿಯೂರಪ್ಪ ಪರ ಹಿರಿಯ ವಕೀಲ ಸಿವಿ ನಾಗೇಶ್ ವಾದ ಮಂಡನೆ ಮಾಡಿದ್ದರು. ಅರ್ಜಿದಾರರ ಪರ ವಕೀಲರ ವಾದ ಮತ್ತು ಸಿಐಡಿ ತನಿಖಾಧಿಕಾರಿ ಪರ ವಿಶೇಷ ಅಭಿಯೋಜಕರ ಪ್ರತಿವಾದ ಆಲಿಸಿ ಕೋರ್ಟ್ ಆದೇಶ ನೀಡಿದೆ.

ಪ್ರಮುಖವಾಗಿ ಹೈಕೋರ್ಟ್ ಮತ್ತು ಸಕ್ಷಮ ನ್ಯಾಯಾಲಯ ಮಾಡಿರುವ ಆದೇಶದಲ್ಲಿ ಉಲ್ಲೇಖಿಸಿರುವ ಅಂಶಗಳ ಪ್ರಭಾವಕ್ಕೆ ಒಳಗಾಗದೇ ಸಾಕ್ಷಿಯನ್ನು ಪರಿಗಣಿಸಬೇಕು ಎಂದು ಜಡ್ಜ್ ಹೇಳಿದರು. ಆರೋಪ ಮುಕ್ತಿ ಸೇ-ರಿಯೂ ಯಾವುದೇ ಅರ್ಜಿಗಳನ್ನು ವಿಚಾರಣಾಧೀನ ನ್ಯಾಯಾಲಯದ ಮುಂದೆ ಸಲ್ಲಿಸಲು ಅರ್ಜಿದಾರರು ಸ್ವತಂತ್ರರಾಗಿದ್ದಾರೆ ಎಂದು ಹೈಕೋರ್ಟ್ ತಿಳಿಸಿದೆ.

### ಏನಿದು ಪ್ರಕರಣ

ನನ್ನ 17 ವರ್ಷದ ಮಗಳ ಮೇಲೆ ಮಾಜಿ ಸಿಎಂ ಯಡಿಯೂರಪ್ಪ ಲೈಂಗಿಕ ದೌರ್ಜನ್ಯ ಎಸಗಿದ್ದಾರೆ ಎಂದು ಆರೋಪಿಸಿ ಮಹಿಳೆಯೊಬ್ಬರು ದೂರು ನೀಡಿದ್ದರು. ಅಪ್ರಾಪ್ತೆ ಮೇಲೆ ಲೈಂಗಿಕ ದೌರ್ಜನ್ಯ ಆರೋಪದಡಿ ಬಿ.ಎಸ್. ಯಡಿಯೂರಪ್ಪ ಅವರ ವಿರುದ್ಧ ಬೆಂಗಳೂರಿನ ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿತ್ತು. ನಂತರ ಈ ಪ್ರಕರಣವನ್ನು ಸರ್ಕಾರ ಸಿಐಡಿಗೆ ವಹಿಸಿತ್ತು.



ಬಸವಕಲ್ಯಾಣ:-ಹುಲಸೂರು ಹಾಗೂ ಮಂಠಾಳ ಗ್ರಾಮ ಪಂಚಾಯತಗಳನ್ನು ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೊಳ್ಳಬೇಕು ಎಂದು ಬೆಂಗಳೂರಿನಲ್ಲಿ ಪೌರಾಡಳಿತ ಸಚಿವರಾದ ರಹೀಮ್ ಖಾನ ಅವರಿಗೆ ಮಾಜಿ ಎಂಎಲ್ಸಿ ವಿಜಯ ಸಿಂಗ್ ಅವರು ಮನವಿ ಪತ್ರ ಸಲ್ಲಿಸಿದರು.

# ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯ ಸದುಪಯೋಗ ಪಡೆದುಕೊಳ್ಳಲು ರೈತಬಾಂಧವರಲ್ಲಿ ಮನವಿ

ಬೀದರ,ನವೆಂಬರ್.13 (ಕರ್ನಾಟಕ ವಾರ್ತೆ):- 2025-26ನೇ ಸಾಲಿನ ಹಿಂಗಾರು ಹಂಗಾಮಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯಡಿ ಬೆಳೆ ವಿಮಾ ಯೋಜನೆ ರೈತ ಸಮುದಾಯಕ್ಕೆ ಉಪಯುಕ್ತವಾದ ಯೋಜನೆಯಾಗಿರುವುದರಿಂದ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಹಾಗು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಧಿಸೂಚಿತ ಮಳೆಯಾಶ್ರಿತ ಬೆಳೆಗಳಾದ ಕಡಲೆ ಹಾಗು ಜೋಳ ಬಿತ್ತನೆ ಮಾಡದೆ ಇದ್ದರು ಸಹ, ಮುಂದೆ ಬಿತ್ತನೆ ಮಾಡುವುದನ್ನು ನೀರಿಕ್ಷಿಸಿ ನೋಂದಣಿ ಮಾಡಿಸಿಕೊಳ್ಳಬಹುದು. ಯೋಜನೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಬೆಳೆ ನಷ್ಟ ಪರಿಸ್ಥಿತಿಯಲ್ಲಿ ರೈತರು ಅನುಕೂಲ ಪಡೆಯಬಹುದಾಗಿದೆ. ಸದರಿ ಯೋಜನೆಯಲ್ಲಿ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ರೈತರೂ ಸಹ ಪಾಲ್ಗೊಳ್ಳಬಹುದಾಗಿದೆ ಎಂದು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ (ವಿಮಾ) ಯೋಜನೆಯನ್ನು ಜಿಲ್ಲೆಯಲ್ಲಿ ಹಿಂಗಾರು ಹಂಗಾಮಿನಲ್ಲಿ ಗ್ರಾಮ ಪಂಚಾಯತಿ ಮಟ್ಟದಲ್ಲಿ ಕಡಲೆ (ಮಳೆಯಾಶ್ರಿತ) ಮತ್ತು ಜೋಳ (ಮಳೆಯಾಶ್ರಿತ) ಬೆಳೆಗಳು ಮತ್ತು ಇತರೆ ಬೆಳೆಗಳಾದ ಕುಸುಬೆ (ಮಳೆಯಾಶ್ರಿತ), ಗೋದಿ (ನೀರಾವರಿ), ಗೋದಿ (ಮಳೆಯಾಶ್ರಿತ), ಜೋಳ (ನೀರಾವರಿ), ಕಡಲೆ (ನೀರಾವರಿ) ವಿವಿಧ ತಾಲ್ಲೂಕಿಗೆ ನಿಗದಿಪಡಿಸಿ, ಹೋಬಳಿ ಮಟ್ಟಕ್ಕೆ ಅನುಷ್ಠಾನಗೊಳಿಸಲು "ಯೂನಿವರ್ಸಲ್ ಸೋಂಪೊ ಜನರಲ್ ಇನ್‌ಶ್ಯೂರೆನ್ಸ್ ಕಂಪನಿ ಲಿಮಿಟೆಡ್, ಬೆಂಗಳೂರು" ವಿಮಾ ಸಂಸ್ಥೆಯನ್ನು ನಿಗದಿಪಡಿಸಲಾಗಿದೆ.

ಈ ಯೋಜನೆಯ ಗ್ರಾಮ ಪಂಚಾಯಿತಿ ಮಟ್ಟಕ್ಕೆ ಒಳಪಡುವ ಬೆಳೆಗಳನ್ನು ನೋಂದಾಯಿಸಿಕೊಳ್ಳಲು ಜೋಳ (ಮಳೆಯಾಶ್ರಿತ) ಬೆಳೆಗೆ ದಿನಾಂಕ: 01-12-2025 ಹಾಗೂ ಕಡಲೆ (ಮಳೆಯಾಶ್ರಿತ) ಬೆಳೆಗೆ 31-12-2025 ಕೊನೆಯ ದಿನಾಂಕವಾಗಿರುತ್ತದೆ. ಈ ಯೋಜನೆಯಲ್ಲಿ ಹೋಬಳಿ ಮಟ್ಟಕ್ಕೆ ಒಳಪಡುವ ಬೆಳೆಗಳನ್ನು ನೋಂದಾಯಿಸಿಕೊಳ್ಳಲು ಕುಸುಬೆ (ಮಳೆಯಾಶ್ರಿತ) ಬೆಳೆಗೆ ದಿನಾಂಕ: 01-12-2025, ಗೋದಿ (ಮಳೆಯಾಶ್ರಿತ) ಬೆಳೆಗೆ 15-12-2025 ಹಾಗೂ ಕಡಲೆ (ನೀರಾವರಿ), ಜೋಳ (ನೀರಾವರಿ), ಗೋದಿ (ನೀರಾವರಿ) ಬೆಳೆಗಳಿಗೆ 31-12-2025 ಕೊನೆಯ ದಿನಾಂಕವಾಗಿರುತ್ತದೆ.

ಬೆಳೆ ಸಾಲ ಪಡೆಯದ ರೈತರು ಅರ್ಜಿಯೊಂದಿಗೆ ಭೂಮಿ ಹೊಂದಿರುವುದಕ್ಕೆ ದಾಖಲೆಗಳಾದ ಈಖಗಖಖಿಖ ಈಖಆ/ಪಹಣಿ/ಖಾತೆ/ಪಾಸ ಪುಸ್ತಕ/ ಕಂದಾಯ ರಶೀದಿಯನ್ನು, ಆದಾರ್ ಸಂಖ್ಯೆ/ಆಧಾರ್ ನೋಂದಣೆ ಸಂಖ್ಯೆ ಹಾಗು ಮೊಬೈಲ್ ಸಂಖ್ಯೆಯನ್ನು ನೀಡತಕ್ಕದ್ದು.

ಹೆಚ್ಚಿನ ವಿವರಗಳಿಗೆ ಸ್ಥಳೀಯ ವಾಣಿಜ್ಯ/ ಗ್ರಾಮೀಣ/ಸಹಕಾರಿ ಬ್ಯಾಂಕುಗಳನ್ನು/ ಕಾಮನ್ ಸರ್ವಿಸ್ ಸೆಂಟರ್/ಗ್ರಾಮ ಒನ್ ಅಥವಾ ಸಂಬಂಧಪಟ್ಟ ರೈತ ಸಂಪರ್ಕ ಕೇಂದ್ರ ಅಥವಾ ಸಂಬಂಧಪಟ್ಟ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

# ಮಾಜಿ ಮಂತ್ರಿ ದಿ, ಬಾಪುಗೌಡ

## ದರ್ಶನಾಪುರವರ 37 ನೇಯ ಪುಣ್ಯಸ್ಮರಣೆ



ಶಹಾಪುರ,ಹೈದ್ರಾಬಾದ ಕರ್ನಾಟಕ ಅಭಿವೃದ್ಧಿ ನೇತಾರ ನೀರಾವರಿ ಹರಿಕಾರ ಮಾಜಿ ಮಂತ್ರಿ ದಿ, ಬಾಪುಗೌಡ ದರ್ಶನಾಪುರವರ 37 ನೇಯ ಪುಣ್ಯಸ್ಮರಣೆ ಶಹಾಪುರ ತಾಲುಕಿನ ಸಿ,ಬಿ, ಶಾಲೆಯ ಅವರಣದಲ್ಲಿ ನೆಡೆಯಲ್ಲಿದೆ, ಪ್ರಥಮದಲ್ಲಿ ಭೀ,ಗುಡಿಯಲ್ಲಿರುವ ದಿ,ಬಾಪುಗೌಡ ದರ್ಶಾನಾಪುರವರ ಪ್ರತಿಮೆಗೆ ಸಂಖ್ಯಾತ ಅಭಿಮಾನಿಗಳಿಂದ ಮಾಲಾರ್ಪಣೆ ಹಾಗೂ ಸಣ್ಣ ಕೈಗಾರಿಕಾ ಮತ್ತು ಸಾರ್ವಜನಿಕ ಉಧ್ಯಮಗಳ ಮಂತ್ರಿ ಶರಣಬಸಪ್ಪಗೌಡ ದರ್ಶನಾಪುರ, ಹಾಗೂ ಕಾಂಗ್ರೆಸ್ ಹಿರಿಯ ಮುಖಂಡರಾದ ಬಸವರಾಜಪ್ಪಗೌಡ ದರ್ಶನಾಪುರ, ಸೇರಿದಂತೆ ರಾಜಕೀಯ ದುರೀಣರಿಂದ ಪುಷ್ಪಾರ್ಚನೆ ನಡೆಯಲ್ಲಿದೆ, ಅಂದಿನ ಕಾರ್ಯಕ್ರಮಕ್ಕೆ ತಪ್ಪದೆ ಪಾಲ್ಗೊಳ್ಳಬೇಕು ಎಂದು ಅವರು ಪತ್ರಿಕೆ ಪ್ರಕಟಣೆಯ ಮುಖಾಂತರ

# ಜೆಸಿಬಿ ಗರ್ಜನೆ ಫುಟ್ಪಾತ್ ಡಬ್ಬ ಅಂಗಡಿ ತೆರವು

## ಅಂಗಡಿ ಮಾಲೀಕರಿಂದ ತಾಲೂಕ ಆಡಳಿತದ ವಿರುದ್ಧ ಆಕ್ರೋಶ



ಸಿರವಾರ: ಪಟ್ಟಣದಲ್ಲಿ ಬೆಳ್ಳ ಬೆಳಗ್ಗೆ ಜೆಸಿಬಿಗಳ ಗರ್ಜಿಸಿ ಫುಟ್ಬಾತ್ ಡಬ್ಬ ಅಂಗಡಿಗಳ ತೆರವು ಕಾರ್ಯಚರಣೆ ಮುಂದುವರಿಸಿದರು ರಸ್ತೆಯ ಎಡ ಮತ್ತು ಬಲ ಬದಿಯ ಅಕ್ರಮವಾಗಿ ಇಟ್ಟುಕೊಂಡಿದ್ದ ಡಬ್ಬಾ ಅಂಗಡಿಗಳ ತೆರವು ಕಾರ್ಯ ಬುಧವಾರ ಬೆಳಗಿನ ಜಾವದಿಂದ ಸಂಜೆಯ ವರೆಗೆ ಜರುಗಿತು.

ಸ್ಥಳೀಯ ಪಟ್ಟಣ ಪಂಚಾಯತಿ ಹಾಗೂ ತಾಲ್ಲೂಕು ಆಡಳಿತದಿಂದ ತಹಶೀಲ್ದಾರ ಅಶೋಕ ಪವಾರ, ಜಿಲ್ಲಾ ವಕ್ಸ್ ಅಧಿಕಾರಿಗಳು, ಸಿಪಿಐ ಶಶಿಕಾಂತ, ಪ.ಪಂ. ಮುಖ್ಯಾಧಿಕಾರಿ ಸುರೇಶ ಶೆಟ್ಟಿ ಅವರ ನೇತೃತ್ವದಲ್ಲಿ ರಸ್ತೆಯ ಪುಟಪಾತ್ ತೆರವು ಕಾರ್ಯ ನಡೆಯಿತು.

ರಸ್ತೆ ಅತಿಕ್ರಮಣ ಮಾಡುವ ಮೂಲಕ ಶಾಲಾ ಕಾಲೇಜುಗಳ, ಸಾರ್ವಜನಿಕರ ಓಡಾಟಕ್ಕೆ ತುಂಬಾ ತೊಂದರೆ ಉಂಟಾಗಿತ್ತು ಆದರೂ ತೆರವು ಮಾಡುವಲ್ಲಿ ನಿರ್ಲಕ್ಷಿಸಿದ ಕಾರಣ ಪಟ್ಟಣ ಪಂಚಾಯತಿ ಆಡಳಿತ ಮಂಡಳಿ ಹಾಗೂ ಸರ್ವ ಸದಸ್ಯರು ಒಪ್ಪಿಗೆ ಸೂಚಿಸಿ ಸಾರ್ವಜನಿಕರಿಗೆ ಸೂಚನೆ,

ಎಚ್ಚರಿಕೆ ನೀಡಿ ಅಂಗಡಿ ಮುಂಗಟ್ಟು ತೆರವು ಮಾಡಲಾಯಿತು. ಈ ಮಧ್ಯೆ ವ್ಯಾಪಾರ ಮಾಡಿಕೊಂಡು ಉಪಜೀವನ ಮಾಡುವ ವ್ಯಾಪಾರಿಗಳು ಪರದಾಟ, ಗೋಳಾಟ, ವೇದನೆ ಕಂಡುಬಂತು.

ನೀರಾವರಿ ಇಲಾಖೆಯ ಕಚೇರಿಯ ಮುಂದೆ ಹಾಗೂ ಇಂದಿರಾ ಕ್ಯಾಂಟೀನ್ ಮುಂದೆ ಇದ್ದ ಎಲ್ಲಾ ಅಂಗಡಿಗಳು ತೆರವು ಮಾಡಿದರು.

ಬಸ್ ನಿಲ್ದಾಣದ ಮುಂದೆ 6 ಡಬ್ಬಾ ಅಂಗಡಿಗಳು ತೆರವು ಮಾಡದಂತೆ ಜಾಗದ ಮಾಲೀಕರು ತಕರಾರು ಮಾಡಿ ಬಸ್ ನಿಲ್ದಾಣ ಕಟ್ಟಡಕ್ಕೆ ನಮ್ಮ ನಮ್ಮ ಹಿರಿಯರು ಸ್ಥಳ ಮಾಡಿದ್ದಾರೆ, ಈ ನಮ್ಮ ಹೆಸರಿಗೆ ಇದೆ ಎಂದು ಪಟ್ಟುಹಿಡಿದ ಕಾರಣ, ಸಾರಿಗೆ ಘಟಕದ ಜಿಲ್ಲಾ ವ್ಯವಸ್ಥಾಪಕರು ಬಂದು ಸ್ಥಳದ ಬಗ್ಗೆ ಮಾಹಿತಿ ನೀಡಲಿ ಎಂದು ಪಟ್ಟು ಹಿಡದರು ತೆರವು ಸ್ಥಗಿತಗೊಂಡಿದೆ. ಉಳಿದಂತೆ ಮಸೀದಿ ಮಂದೆ ವಕ್ ಹೆಸರಿನ ಸ್ಥಳ ಗೋರಿಗಳ ಮೇಲೆ ಯಾವುದೇ ಅಂಗಡಿಗಳು ಇಡದಂತೆ ತೆರವು ಮಾಡಲಾಯಿತು. 3 ಜೆಸಿಬಿ, 4ಟ್ಯಾಕ್ಟರ್, ನೂರಾರು ಪೊಲೀಸ್ ಸಿಬ್ಬಂದಿ, ಪ.ಪಂ. ಕಂದಾಯ, ಲೋಕೋಪಯೋಗಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಇದ್ದರು.

ಪಟ್ಟಣದಲ್ಲಿ ಬೆಳಗ್ಗೆಯಿಂದ ಗಲಿಬಿಲಿ ವಾತಾವರಣ

ಕಂಡು ಬಂತು. ಗುಂಪು ಗುಂಪಾಗಿ ಯುವಕರು ಸ್ಥಳದಲ್ಲಿ ಜಮಾಯಿಸಿದರು. ಅಂಗಡಿಗಳ ಮಾಲೀಕರು ಕೆಲಸಗಾರರು ಬಡವರಿಗೆ ಒಂದು ನ್ಯಾಯ, ಉಳ್ಳವರಿಗೆ ಒಂದು ನ್ಯಾಯ ಮಾಡಬಾರದು, ಎಲ್ಲಾ ಅಂಗಡಿಗಳು ತೆರವು ಮಾಡಬೇಕು ಎಂದು ಆಕ್ರೋಶಗೊಂಡರು ತಾಲೂಕ್ ಆಡಳಿತದಿಂದ ವ್ಯಾಪಾರಸ್ಥರಿಗೆ ಸ್ಥಳ ನಿಗದಿ ಮಾಡಿ ವ್ಯಾಪಾರಕ್ಕೆ ಅನುಕೂಲ ಮಾಡಬೇಕೆಂದು ಡಬ್ಬ ಅಂಗಡಿಗಳ ಮಾಲಕರು ವ್ಯಾಪಾರಸ್ಥರು ಆಗ್ರಹಿಸಿದರು.

# ಜಿಲ್ಲಾಧಿಕಾರಿ ನೇತೃತ್ವದ ಸಭೆ ವಿಫಲ ಕಬ್ಬಿಗೆ ರೂ.3,300 ದರದ ಒತ್ತಾಯ, ರೈತರ ಧರಣಿ



ಬೀದರ್. ನ. 13 :- ಸರ್ಕಾರ ಘೋಷಿಸಿರುವ ಪ್ರತಿ ಟನ್ ಕಬ್ಬಿಗೆ ರೂ.3,300 ದರವನ್ನು ಬೀದರ್ ಜಿಲ್ಲೆಯಲ್ಲಿ ಕೂಡ ಜಾರಿಗೆ ತರಬೇಕೆಂದು ಆಗ್ರಹಿಸಿ, ರೈತ ಸಂಘಟನೆಗಳ ಒಕ್ಕೂಟದ ನೇತೃತ್ವದಲ್ಲಿ ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಯಿತು. ಪ್ರವಾಸಿ ಮಂದಿರದ ಎದುರು ರೈತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗುತ್ತ ಧರಣಿ ನಡೆಸಿದರು. ಕಬ್ಬು ಬೆಲೆ ನಿಗದಿ ಕುರಿತು ಇಂದು ಜಿಲ್ಲಾಧಿಕಾರಿ ನೇತೃತ್ವದಲ್ಲಿ ನಡೆದ ಸಭೆ ವಿಫಲವಾಗಿದೆ. "ರೈತರ ಕಣ್ಣೀರು ಒರೆಸುವ ಕೆಲಸ ಆಡಳಿತದಿಂದ ಆಗಬೇಕು, ಕಣ್ಣೊರೆಸುವ ನಾಟಕ ಬೇಡ" ಎಂದು ರೈತ ನಾಯಕರು ಖಂಡಿಸಿದರು. ಅತಿವೃಷ್ಟಿಯಿಂದ ಮುಂಗಾರಿನ ಪ್ರಮುಖ ಬೆಳೆಗಳು ಹಾನಿಗೊಳಗಾಗಿ ರೈತರು ಸಂಕಷ್ಟದಲ್ಲಿದ್ದಾರೆ. ಪ್ರಸ್ತುತ ಜಿಲ್ಲೆಯ ಸುಮಾರು 50 ಸಾವಿರ ಎಕರೆಯಲ್ಲಿ ಕಬ್ಬು ಬೆಳೆ ಬೆಳೆಯಲಾಗಿದ್ದು, 15 ಲಕ್ಷ ಟನ್‌ಗಳಿಗಿಂತ ಅಧಿಕ ಉತ್ಪಾದನೆ ನಿರೀಕ್ಷೆಯಿದೆ. ಈ ಪರಿಸ್ಥಿತಿಯಲ್ಲಿ ರೈತರಿಗೆ ನ್ಯಾಯಯುತ ಬೆಲೆ ನೀಡಬೇಕು ಎಂದು ಆಗ್ರಹಿಸಲಾಗಿದೆ. ರೈತ ಸಂಘಟನೆಗಳು 2025-26ನೇ ಸಾಲಿನ ಕಬ್ಬು ಬೆಲೆ ಪ್ರತಿ ಟನ್‌ಗೆ ಕನಿಷ್ಠ ರೂ.3,300 ನಿಗದಿಪಡಿಸಲು ಹಾಗೂ ಸಕ್ಕರೆ ಕಾರ್ಖಾನೆಗಳಿಂದ ಕಡ್ಡಾಯವಾಗಿ ಪಾವತಿಸುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕೆಂದು ಬೇಡಿಕೊಂಡಿವೆ. ಧರಣಿಯಲ್ಲಿ ರೈತ ಮುಖಂಡರಾದ ಮಲ್ಲಿಕಾರ್ಜುನ ಸ್ವಾಮಿ, ಸಿದ್ರಾಮಪ್ಪಾ ಆಣದೂರೆ, ಶ್ರೀಮಂತ ಬಿರಾದಾರ, ದಯಾನಂದ ಸ್ವಾಮಿ, ಶಂಕರೆಪ್ಪಾ ಮರ್ಕಲ್, ಕೊಂಡಿಬಾ ಪಾಂಡ್ರೆ, ಶಿವರಾಜ ಪಾಟೀಲ್,

ಬಾಬು ಹೊನ್ನಾ, ನಜೀರ್ ಅಹ್ಮದ್ ಚೊಂಡಿ, ಪ್ರಕಾಶ ಬಾವುಗೆ, ಶಾಂತಮ್ಮ ಮೂಲಗೆ, ಶಿವಲೀಲಾ ಹೋಳಸಮುದ್ರ, ವಿಜಯಕುಮಾರ ಬಾವುಗೆ, ವೀರಾರೆಡ್ಡಿ, ವಿಠಲ್ ರಾವ, ನಾಗಶೆಟ್ಟಿ, ಭೀಮರಾವ, ಖಮರ ಪಟೇಲ್ ಸೇರಿದಂತೆ ಅನೇಕ ರೈತ ನಾಯಕರು ಉಪಸ್ಥಿತರಿದ್ದರು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)